**ಸಂಪುಟ:** 04 **ಸಂಚಿಕೆ:** 48 **ಪುಟಗಳು:** 08 **ಗುರುವಾರ** 02 ಮೇ 2024

www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ನಾವು ಬಯಸಿದಂತೆ ಬದುಕುವ ಸ್ವಾತಂತ್ರ್ಯ ಯಾವತ್ತೂ ಭಯಾನಕ ಹೋರಾಟದ ಫಲವೇ ಹೊರತು ಸುಲಭಕ್ಕೆ ಸಿಗುವುದಿಲ್ಲ

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ರಾಜಕೀಯ ಮಾಡೋದಾಗಿದ್ರೆ ಏನು ಬೇಕಾದರೂ ಮಾಡ್ತಿದ್ವಿ

• ಉದಯವಾಹಿನಿ, ಯಾದಗಿರಿ

ಹಾಸನ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಎಚ್. ಡಿ ಕುಮಾರಸ್ವಾಮಿ ಇದರ ಹಿಂದೆ ಮಹಾನಾಯಕನ ಕೈವಾಡ ಇದೆ ಎಂದು ಪರೋಕ್ಷವಾಗಿ ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧ ಕಿಡಿಕಾರಿದ್ದರು. ಇದಕ್ಕೆ ಡಿಕೆ ಶಿವಕುಮಾರ್ ತಿರುಗೇಟು ನೀಡಿದ್ದು ರಾಜಕೀಯ ಮಾಡುವುದಾಗಿದ್ರೆ ಏನು ಬೇಕಾದರೂ ಮಾಡುತ್ತಿದ್ದಿವಿ ಎಂದು ತಿಳಿಸಿದರು. ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ದೇವತ್ಕಲ್ ಗ್ರಾಮದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇವರಾಜೇಗೌಡ ಯಾರ್ಯಾರನ್ನು ಭೇಟಿಯಾಗಿದ್ದಾರೆ ಎಂದು ಗೊತ್ತಿದೆ.ಮುಂಚಿತವಾಗಿಯೇ ಕುಮಾರಸ್ವಾಮಿ ಅವರನ್ನು ಭೇಟಿಯಾಗಿದ್ದರು.ರಾಜಕೀಯ ಮಾಡೋದಾದರೆ ಏನು ಬೇಕಾದರೂ ಮಾಡುತ್ತಿದ್ವಿ. ನಾನು ಏನು ಮಾಡಬೇಕು ಅನ್ನೋದು ನನಗೂ ಗೊತ್ತಿದೆ. ಎಚ್‌ಡಿ ಕುಮಾರಸ್ವಾಮಿ ಮಹಾನಾಯಕ ಆರೋಪಕ್ಕೆ ಡಿಸಿಎಂ ಡಿಕೆ ಶಿವಕುಮಾರ್ ತಿರುಗೇಟು ನೀಡಿದರು.

ಕುಮಾರಸ್ವಾಮಿಯವರು ನಾರಿ ಶಕ್ತಿ ಬಗ್ಗೆ ತಂದೆ ತಾಯಿ ಬಗ್ಗೆ ಬಹಳ ಗೌರವಿದೆ. ಹೆಣ್ಣುಮಕ್ಕಳಿಗೆ ಗೌರವ ಇದೆ ಅಂತ ಹೇಳುತ್ತಾರಲ್ಲ. ಹಾಗಾದರೆ ಮೊದಲು ಹೋಗಿ ಆ ತಾಯಂದಿರಿಗೆ ಧೈರ್ಯ ಹೇಳುವ ಹಾಗೂ ಸಾಂತ್ವನ ತುಂಬುವಂತ ಕೆಲಸವನ್ನು ಬಿಜೆಪಿಯವರು ಹಾಗೂ ಜನತಾದಳದವರು ಮಾಡಲಿ. ಇನ್ನೂ ಮಹಾನಾಯಕ ಎಂದು ಕುಮಾರಸ್ವಾಮಿ ಹೇಳಿಕೆಗೆ ಉತ್ತರಿಸಿದ ಅವರು, ಯಾವ ನಾಯಕ ಅಂತಾದರೂ ಹೇಳಲಿ ಸುಮ್ಮನೆ ಕುಳಿತುಕೊಳ್ಳುವ ವ್ಯಕ್ತಿಯಲ್ಲ ನಾನು ಎಂದು ಡಿಕೆ ಶಿವಕುಮಾರ ತಿರುಗೇಟು ನೀಡಿದರು.

## ಪೆನ್‌ಡ್ರೈವ್ ಬಿಡುಗಡೆಯಲ್ಲಿ ಕುಮಾರಸ್ವಾಮಿಯದ್ದೇ ಕೈವಾಡ

• ಉದಯವಾಹಿನಿ, ಬೆಂಗಳೂರು

ಪೆನ್ ಡ್ರೈವ್ ವಿಚಾರ ಎಲ್ಲಾರಿಗಿಂತ ಮುಂಚಿತವಾಗಿ ಗೊತ್ತಿದ್ದೇ ಕುಮಾರಸ್ವಾಮಿ ಹಾಗೂ ಬಿಜೆಪಿ ನಾಯಕರಿಗೆ. ಈ ಪ್ರಕರಣದಿಂದ ನುಣುಚಿಕೊಳ್ಳಲು ಕಾಂಗ್ರೆಸ್ ಹಾಗೂ ಶಿವಕುಮಾರ್ ಅವರ ಮೇಲೆ ಆರೋಪ ಮಾಡುತ್ತಿದ್ದಾರೆ ಎಂದು ಬೆಂಗಳೂರು ಗ್ರಾಮಾಂತರ ಸಂಸದ ಡಿ.ಕೆ.ಸುರೇಶ್ ತಿಳಿಸಿದರು.

ಇಂದು ಸದಾಶಿವನಗರ ನಿವಾಸದಲ್ಲಿ ಪ್ರಜ್ವಲ್ ರೇವಣ್ಣ ಅವರ ಪೆನ್ ಡ್ರೈವ್ ಬಹಿರಂಗಗೊಳಿಸಿರುವುದು ಮಹಾನ್ ನಾಯಕ ಡಿ.ಕೆ. ಶಿವಕುಮಾರ್ ಎಂಬ ಕುಮಾರಸ್ವಾಮಿ ಅವರ ಆರೋಪದ ಬಗ್ಗೆ ಕೇಳಿದಾಗ ಅವರು ಉತ್ತರಿಸಿದ ಅವರು, ಮಾಜಿ ಸಿಎಂ ಕುಮಾರಸ್ವಾಮಿ ಅವರಿಗೆ ಶಿವಕುಮಾರ್ ಅವರನ್ನು ಸ್ಮರಿಸದಿದ್ದರೆ ತಿಂದ ಅನ್ನ ಜೀರ್ಣವಾಗುವುದಿಲ್ಲ. ನಿದ್ದೆ ಬರುವುದಿಲ್ಲ. ನಾವು ಪೆನ್ ಡ್ರೈವ್ ಬಿಡುಗಡೆ ಮಾಡುವುದಾಗಿದ್ದರೆ ಚುನಾವಣೆಗೆ ವಾರ ಅಥವಾ ಹತ್ತು ದಿನ ಮುಂಚಿತವಾಗಿಯೇ ಬಿಡುಗಡೆ ಮಾಡಬಹುದಾಗಿತ್ತಲ್ಲವೇ ಈ ವಿಚಾರದಲ್ಲಿ ಎಲ್ಲಾರಿಗಿಂತ ಮುಂಚಿತವಾಗಿ ಗೊತ್ತಿದ್ದು ಕುಮಾರಸ್ವಾಮಿ ಹಾಗೂ ಬಿಜೆಪಿ ನಾಯಕರಿಗೆ. ಅವರೀಗ ಕಾಂಗ್ರೆಸ್ ಮೇಲೆ ಆರೋಪ ಮಾಡಿ ನುಣುಚಿಕೊಳ್ಳುವ ಪ್ರಯತ್ನ ಮಾಡುತ್ತಿದ್ದಾರೆ ಎಂದರು.

## ಶೆಟ್ಟರ್ ಬಗ್ಗೆ ಸ್ಫೋಟಕ ಭವಿಷ್ಯ ನುಡಿದ ಬಾಲಚಂದ್ರ ಜಾರಕಿಹೊಳಿ

• ಉದಯವಾಹಿನಿ, ಬೆಳಗಾವಿ

ರಾಜ್ಯದಲ್ಲಿ 14 ಲೋಕಸಭಾ ಕ್ಷೇತ್ರಗಳಿಗೆ ಮೊದಲ ಹಂತದ ಮತದಾನ ನಡೆದಿದ್ದು, ಇನ್ನುಳಿದ ಕ್ಷೇತ್ರಗಳಿಗೆ ಮೇ 7ರಂದು ಎರಡನೇ ಹಂತದ ಮತದಾನ ನಡೆಯಲಿದೆ. ಈ ಹಿನ್ನೆಲೆ ಎಲ್ಲಾ ಪಕ್ಷಗಳ ಅಭ್ಯರ್ಥಿಗಳು ತಮ್ಮ ತಮ್ಮ ಕ್ಷೇತ್ರಗಳಲ್ಲಿ ಅಬ್ಬರದ ಪ್ರಚಾರ ಮಾಡಿದ್ದರು. ಹಾಗೆಯೇ ಇದೀಗ ಬಾಲಚಂದ್ರ ಜಾರಕಿಹೊಳಿ ಅವರು ಜಗದೀಶ್ ಶೆಟ್ಟರ್ ಅವರ ಮುಂದಿನ ಸ್ಥಾನದ ಬಗ್ಗೆ ಸ್ಫೋಟಕ ಭವಿಷ್ಯವೊಂದನ್ನು ನುಡಿದಿದ್ದಾರೆ. ಈ ಬಾರಿಯೂ ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಬರಲಿದೆ. ಇನ್ನು ಕೇಂದ್ರದಲ್ಲಿ ನಮ್ಮ ಸರ್ಕಾರ ರಚನೆಯಾದರೆ ಜಗದೀಶ್ ಶೆಟ್ಟರ್ ಅವರಿಗೆ ಉನ್ನತ ಸ್ಥಾನ ಸಿಗಲಿದೆ. ಆಗ ನಾವು ಕೇಂದ್ರದ ಅನೇಕ ಯೋಜನೆಗಳು ಹಾಗೂ ಅನೇಕ ಮಹತ್ವದ ಕೇಲಸಗಳು ನಮ್ಮ ಕ್ಷೇತ್ರಕ್ಕಾಗಿ ಮಾಡಬಹುದು. ಆದ್ದರಿಂದ ಜಗದೀಶ್ ಶೆಟ್ಟರ್ ಅವರನ್ನು ನವದೆಹಲಿಗೆ ಕಳುಹಿಸಬೇಕೆಂದು ಶಾಸಕ ಬಾಲಚಂದ್ರ ಜಾರಕೊಹೊಳಿ ಹೇಳಿದರು. ಲೋಕಸಭಾ ಚುನಾವಣೆ ಹಿನ್ನೆಲೆ ಮೂಡಲಗಿ ಮತಕ್ಷೇತ್ರದ ಮೇಳವಂಕಿ ಗ್ರಾಮದಲ್ಲಿ ಬಹಿರಂಗ ಸಭೆ ನಡೆಸಿ, ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಪರ ಮತಯಾಚನೆ ಮಾಡಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದವರು ಏನೇ ಹೇಳಿದರೂ, ನೀವು ಬಿಜೆಪಿಗೆ ಮತ ನೀಡಿಬೇಕು. ಬರಗಾಲದ ಸಂದರ್ಭದಲ್ಲೂ ನಮ್ಮ ಕ್ಷೇತ್ರದಲ್ಲಿ ಹೊಳೆ ಹಾಗೂ ಹಳ್ಳಗಳಿಗೆ ನೀರು ಹರಿಸಲಾಗಿದೆ. ಮುಂದಿನ 10 ದಿನಗಳು ಹೊಳೆ ಹಾಗೂ ಹಳ್ಳಗಳಿಗೆ ನೀರು ಹರಿಸಲಾಗುವುದು. ಬೇರೆ-ಬೇರೆ ಅಭಿವೃದ್ಧಿ ಕೆಲಸಗಳು ಸಾಕಷ್ಟು ಆಗಿದೆ. ಮುಂದೆ ಕೂಡ ಹೆಚ್ಚಿನ ಅಭಿವೃದ್ಧಿ ಮಾಡಲಾಗುವುದೆಂದು ತಿಳಿಸಿದರು.

ಲೈಂಗಿಕ ದೌರ್ಜನ್ಯ ಪ್ರಕರಣದ ವಿಚಾರಣೆಗೆ ಹಾಜರಾಗಲು 7 ದಿನಗಳ ಕಾಲಾವಕಾಶ ನೀಡುವಂತೆ ಕೋರಿ ಆರೋಪಿ ಪ್ರಜ್ವಲ್ ರೇವಣ್ಣ ಅವರ ಪರವಾಗಿ ವಕೀಲ ಅರುಣ್ ಜಿ. ಅವರು ಎಸ್‌ಐಟಿ ಅಧಿಕಾರಿಗಳಿಗೆ ಪತ್ರ ಬರೆದಿದ್ದಾರೆ. ವಿಚಾರಣೆಗೆ ಹಾಜರಾಗುವಂತೆ ಸೂಚಿಸಿ ಅಧಿಕಾರಿಗಳು ನೀಡಿರುವ ನೋಟಿಸ್‌ಗೆ ಉತ್ತರ ನೀಡಿರುವ ವಕೀಲ ಅರುಣ್, 'ನನ್ನ ಕಕ್ಷಿದಾರ ಪ್ರಜ್ವಲ್ ರೇವಣ್ಣ ಅವರು ಸದ್ಯ ಪ್ರವಾಸದಲ್ಲಿದ್ದಾರೆ. 7 ದಿನ ಕಾಲಾವಕಾಶ ನೀಡಿ. ನಂತರ, ಮತ್ತೊಂದು ದಿನಾಂಕ ನೀಡಿ. ಅಂದು ಅವರು ವಿಚಾರಣೆಗೆ ಹಾಜರಾಗುತ್ತಾರೆ' ಎಂದಿದ್ದಾರೆ.





# ಪ್ರಜ್ವಲ್ ವಿದೇಶಕ್ಕೆ ಪಾರಾರಿ ಕರೆತರಲು ಕೈ ಪಕ್ಷ ತಯಾರಿ

- ದೇವೇಗೌಡರೇ ಪ್ಲಾನ್ ಮಾಡಿ ಪ್ರಜ್ವಲ್ ನನ್ನು ವಿದೇಶಕ್ಕೆ ಕಳುಹಿಸಿದ್ದಾರೆ : ಸಿಎಂ
- 'ಪ್ರಜ್ವಲ್ ರೇವಣ್ಣನನ್ನು ವಿದೇಶದಿಂದ ಕರೆತರಲು ಸಹಕರಿಸಿ': ಪ್ರಧಾನಿಗೆ ಸಿಎಂ ಪತ್ರ

**07 ದಿನಗಳ ಕಾಲಾವಕಾಶ**

ನಾನು ಯಾವುದೇ ತಪ್ಪನ್ನು ಮಾಡಿಲ್ಲ. ಯಾವ ತನಿಖೆಯನ್ನೂ ಎದುರಿಸಲು ಸಿದ್ದನಾಗಿದ್ದೇನೆ. ಎಸ್ ಐಟಿ ಅಧಿಕಾರಿಗಳು ನಮ್ಮ ಮನೆಗೆ ನೋಟಿಸ್ ನೀಡಿದ್ದಾರೆ. ನೋಟಿಸ್‌ನಲ್ಲಿ ಏನಿದೆ ಅಂತ ತಿಳಿದುಕೊಳ್ಳುತ್ತೇನೆ. ಇದೆಲ್ಲಾ ಸುಳ್ಳಿನ ಆರೋಪ ಮಾಡಲಾಗಿದೆ. ನಾನು ಏನೂ ಮಾತನಾಡುವುದಿಲ್ಲ. ಷಡ್ಯಂತರ ಮಾಡಿದ್ದಾರೆ. ಇದನ್ನೆಲ್ಲಾ ನಾನು ಎದುರಿಸುತ್ತನೆ ನಾನು ತಪ್ಪು ಮಾಡಿಲ್ಲ

-ಎಚ್.ಡಿ. ರೇವಣ್ಣ, ಶಾಸಕ

### ಪ್ರಧಾನಿ ಮೋದಿಗೆ ಪತ್ರ ಬರೆದ ಸಿಎಂ





ಪ್ರಜ್ವಲ್ ರೇವಣ್ಣ ಪಾಸ್‌ಪೋರ್ಟ್ ರದ್ದುಗೊಳಿಸಿ, ಅವರನ್ನು ಬಂಧಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಈ ಸಂಬಂಧ ಗೃಹ ಮತ್ತು ವಿದೇಶಾಂಗ ಇಲಾಖೆಗಳಿಗೆ ಸೂಚನೆ ನೀಡಬೇಕು ಎಂದು ಪ್ರಧಾನಿ ಮೋದಿ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಒತ್ತಾಯಿಸಿದ್ದಾರೆ. ಈ ಸಂಬಂಧ ಪ್ರಧಾನಿ ಮೋದಿ ಅವರಿಗೆ ಪತ್ರ ಬರೆದು ಮನವಿ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಸಂಸದ ಹಾಗೂ ಹಾಸನ ಲೋಕಸಭೆಯ ಎನ್‌ಡಿಎ ಅಭ್ಯರ್ಥಿ ಪ್ರಜ್ವಲ್ ರೇವಣ್ಣ ಅಸಂಖ್ಯಾತ ಮಹಿಳೆಯರನ್ನು ಲೈಂಗಿಕ ಶೋಷಣೆ ಮಾಡಿದ್ದಾರೆ ಎಂಬ ಆರೋಪ ಎದುರಿಸುತ್ತಿದ್ದಾರೆ. ಇಂತಹ ಗಂಭೀರ ಪ್ರಕರಣ ತಮಗೆ ತಿಳಿದಿರಲೇಬೇಕು. ಅವರ ಮೇಲಿರುವ ಆರೋಪಗಳು ಭಯಾನಕ ಮತ್ತು ನಾಚಿಕೆಗೇಡಿನವು ಆಗಿದ್ದು, ಇದು ದೇಶದ ಆತ್ಮಸಾಕ್ಷಿಯನ್ನು ಅಲ್ಲಾಡಿಸಿದೆ ಎಂದಿದ್ದಾರೆ. ಇಂತಹ ಪ್ರಕರಣವನ್ನು ಕರ್ನಾಟಕ ಸರ್ಕಾರ ಗಂಭೀರವಾಗಿ ಪರಿಗಣಿಸಿ, ಕ್ರಮಕ್ಕಾಗಿ ಏ.28 ರಂದು ಕ್ರಿಮಿನಲ್ ಇನ್ವೆಸ್ಟಿಗೇಶನ್ ಡಿಪಾರ್ಟ್ಮೆಂಟ್ (ಸಿಐಡಿ) ಅಡಿಯಲ್ಲಿ ವಿಶೇಷ ತನಿಖಾ ತಂಡವನ್ನು (ಎಸ್‌ಐಟಿ) ರಚಿಸಿದೆ. ಅಷ್ಟೇ ಅಲ್ಲ, ತ್ವರಿತಗತಿಯಲ್ಲಿ ತನಿಖೆ ಪ್ರಾರಂಭಿಸಿದೆ. ಪ್ರಕರಣದ ನಿಜ ಸ್ವರೂಪ ಬಯಲಾಗುತ್ತಿದ್ದಂತೆ ಸಂತ್ರಸ್ತೆಯರು ದೂರು ದಾಖಲಿಸಿದ್ದಾರೆ. ಆದರೆ ಸಂಸದ ಎಫ್‌ಐಆರ್ ದಾಖಲಾಗುವ ಸುಳಿವು ಪಡೆದು 27ರಂದು ರಾಜತಾಂತ್ರಿಕ ಪಾಸ್‌ಪೋರ್ಟ್ ಬಳಸಿ ವಿದೇಶಕ್ಕೆ ಹಾರಿ ತಪ್ಪಿಸಿಕೊಂಡಿದ್ದಾನೆ. ಆರೋಪ ಹೊತ್ತಿರುವ ಸಂಸದ ಎಸ್‌ಐಟಿ ತನಿಖೆಗೆ ಅತ್ಯಗತ್ಯವಾಗಿ ಬೇಕಿದೆ. ಆತ ದೇಶದ ಕಾನೂನಿನ ಪ್ರಕಾರ ತನಿಖೆ ಮತ್ತು ವಿಚಾರಣೆ ಎದುರಿಸಬೇಕಿದೆ. ಈ ನಿಟ್ಟಿನಲ್ಲಿ ರಾಜತಾಂತ್ರಿಕ ಮತ್ತು ಪೊಲೀಸ್ ಜಾಲಗಳನ್ನು ಬಳಸಿಕೊಂಡು ಸ್ವದೇಶಕ್ಕೆ ಕರೆತರಬೇಕಿದೆ. ಇದಕ್ಕೆ ವಿದೇಶಾಂಗ ವ್ಯವಹಾರ ಮತ್ತು ಗೃಹ ಸಚಿವಾಲಯಕ್ಕೆ ಸಲಹೆ ನೀಡಬೇಕು ಎಂದು ಸಿದ್ದರಾಮಯ್ಯ ಮನವಿ ಮಾಡಿದ್ದಾರೆ.

• ಉದಯವಾಹಿನಿ, ಬೆಂಗಳೂರು

ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರ ವಿರುದ್ಧ ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ಪ್ರತಿಕ್ರಿಯೆ ನೀಡಿದ್ದು, ದೇವೇಗೌಡರೇ ಪ್ಲಾನ್ ಮಾಡಿ ಪ್ರಜ್ವಲ್ ನನ್ನು ವಿದೇಶಕ್ಕೆ ಕಳುಹಿಸಿದ್ದಾರೆ. ವೀಸಾ ಪಾಸ್ ಪೋರ್ಟ್ ಕೊಡೋರು ಬಿಜೆಪಿಯವರೇ ತಾನೆ. ಅಮಿತ್ ಶಾ ಗೆ ಗೊತ್ತಿದ್ದರೂ ಪ್ರಜ್ವಲ್ ಗೆ ಟಿಕೆಟ್ ಯಾಕೆ ಕೊಟ್ಟರು ಸೆಕ್ಸ್ ಸ್ಕ್ಯಾಂಡಲ್‌ನಲ್ಲಿ ಸಿಲುಕಿದವನಿಗೆ ಟಿಕೆಟ್ ಯಾಕೆ ಕೊಡಬೇಕು ಹಾಗಾಗಿ ಪ್ರಕರಣ ಕುರಿತಂತೆ ಎಸ್‌ಐಟಿಯಿಂದ ಪಾರದರ್ಶಕವಾಗಿ ತನಿಖೆ ನಡೆಯುತ್ತದೆ ಎಂದು ತಿಳಿಸಿದರು.

1. ಪ್ರಜ್ವಲ್ ರೇವಣ್ಣ ಹಿಂದೆ ದೊಡ್ಡ ದೊಡ್ಡ ಶಕ್ತಿಗಳು ಇವೆ
2. ಅಮಿತ್ ಶಾ ಗೆ ಗೊತ್ತಿದ್ದರೂ ಪ್ರಜ್ವಲ್ ಗೆ ಟಿಕೆಟ್ ಯಾಕೆ ಕೊಟ್ಟರು
3. ಪೆನ್‌ಡ್ರೈವ್ ಪ್ರಕರಣದಲ್ಲಿ ಸೂಕ್ತ ಸಾಕ್ಷಿ-ಪುರಾವೆಗಳಿಲ್ಲದೆ ಯಾರನ್ನೂ ಬಂಧಿಸಲ್ಲ
4. 'ಕಾಂಗ್ರೆಸ್ ಅಧಿಕಾರ ಬಿಡಲಿ, ಪ್ರಜ್ವಲ್‌ನ ನಾವು ಬಂಧಿಸುತ್ತೇವೆ
5. ಏಪ್ರಿಲ್ 21ರಂದು ಪ್ರಕರಣ ಹೊರಬಂದರೂ ಏ.28ರವರೆಗೆ ಎಫ್‌ಐಆರ್ ಆಗುವುದಿಲ್ಲ ಅಂದರೆ ಅರ್ಥವೇನು

ಕಾರ್ತಿಕ್ ಪ್ರಜ್ವಲ್ ರೇವಣ್ಣ ಡ್ರೈವರ್ ಆಗಿದ್ದ. ಕಾರ್ತಿಕ್ ಬಿಜೆಪಿ ಮುಖಂಡನ ಕೈಯಲ್ಲಿ ಪೆನ್ ಡ್ರೈವ್ ಕೊಟ್ಟಿದ್ದು. ಎಚ್ ಡಿ ಕುಮಾರಸ್ವಾಮಿ ರಾಜಕಾರಣಕ್ಕೆ ಡಿಕೆ ಶಿವಕುಮಾರ್ ಮೇಲೆ ಆರೋಪ ಮಾಡುತ್ತಾರೆ. ಕೇಂದ್ರ ಸಚಿವ ಅಮಿತ್ ಶಾ ಗೆ ಗೊತ್ತಿದ್ದರೂ ಯಾಕೆ ಪ್ರಜ್ವಲ್ ಗೆ ಟಿಕೆಟ್ ಕೊಟ್ಟರು ಎಸ್ ಐಟಿ ಅಧಿಕಾರಿಗಳು ಪಾರದರ್ಶಕವಾಗಿ ತನಿಖೆ ಮಾಡುತ್ತಾರೆ ಎಂದು ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ದೇವತ್ಕಲ್ ಗ್ರಾಮದಲ್ಲಿ ಸಿಎಂ ಸಿದ್ದರಾಮಯ್ಯ ಹೇಳಿಕೆ ನೀಡಿದರು. ಪ್ರಜ್ವಲ್ ಹಾಗೂ ರೇವಣ್ಣ ವಿರುದ್ಧ ದಾಖಲಾದ ಲೈಂಗಿಕ ಕಿರುಕುಳ ಆರೋಪ ಪ್ರಕರಣದ ವಿಚಾರವಾಗಿ ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡರ ವಿರುದ್ಧ ಸಿಎ ಸಿದ್ದರಾಮಯ್ಯ ಗಂಭೀರ ಆರೋಪ ಮಾಡಿದ್ದಾರೆ.

ಪ್ರಜ್ವಲ್ ವಿದೇಶಕ್ಕೆ ಪರಾರಿಯಾಗಿದ್ದು ದೇವೇಗೌಡರ ಪ್ಲ್ಯಾನ್, ವಿದೇಶಕ್ಕೆ ಹೋಗುವಾಗ ವೀಸಾ , ಪಾಸ್ ಪೋರ್ಟ್ ಕೊಡುವುದು ಕೇಂದ್ರ ಬಿಜೆಪಿ ಸರ್ಕಾರವೇ ಅಲ್ಲವೇ ಇದೆಲ್ಲ ಪ್ಲ್ಯಾನ್ ಮಾಡಿ ಪ್ರಜ್ವಲ್‌ನನ್ನ ವಿದೇಶಕ್ಕೆ ಕಳುಹಿಸಲಾಗಿದೆ ಎಂದು ಸಿದ್ದರಾಮಯ್ಯ ಆರೋಪಿಸಿದ್ದಾರೆ. ಪೆನ್‌ಡ್ರೈವ್ ಕೇಸ್‌ನಲ್ಲಿ ಡಿಕೆಶಿ ಕೈವಾಡವಿದೆ ಎಂಬ ಆರೋಪವನ್ನು ತಳ್ಳಿಹಾಕಿದ ಸಿಎಂ. ಸೂರಜ್ ಜೊತೆ ಡಿಕೆಶಿ ಫೋಟೊ ಇದ್ದರೆ ಏನಂತೆ ನನ್ನ ಜೊತೆ ರೇವಣ್ಣ ಫೋಟೊ ಇದೆ ಹಾಗಂದ ಮಾತ್ರಕ್ಕೆ ನಾನು ರೇವಣ್ಣನನ್ನ ಸೇವ್ ಮಾಡಿದಿನಿ ಅಂತಾನಾ ಕಾರ್ತಿಕ್ ಪ್ರಜ್ವಲ್ ರೇವಣ್ಣ ಡ್ರೈವರ್, ಆತ ಪೆನ್‌ಡ್ರೈವ್ ಕೊಟ್ಟಿದ್ದು ಬಿಜೆಪಿ ಮುಖಂಡನಿಗೆ, ಹೀಗಿದ್ದೂ ಆತನಿಗೆ ಟಿಕೆಟ್ ಕೊಟ್ಟಿದ್ದಾರೆ. ಎಂದು ಸಿದ್ದರಾಮಯ್ಯ ಹೇಳಿದರು.

ಎಸ್‌ಐಟಿ ರಚನೆಯಾಗಿದೆ, ರಾಜಕೀಯ ಹಸ್ತಕ್ಷೇಪ ಮಾಡಲ್ಲ ಕಾನೂನು ಪ್ರಕಾರ ತನಿಖೆಯಾಗಲಿ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.




ಸಂಸದ ಪ್ರಜ್ವಲ್ ರೇವಣ್ಣ ಹಿಂದೆ ದೊಡ್ಡ ದೊಡ್ಡ ಶಕ್ತಿಗಳು ಇವೆ. ಚಪ್ಪಲಿ ಹರಿಯುವಂತೆ ಓಡಾಡಿದರೂ ಕೆಲವೊಮ್ಮೆ ವೀಸಾ ಸಿಗುವುದಿಲ್ಲ. ಆದರೆ ಕೇವಲ ಒಂದೇ ದಿನಕ್ಕೆ ವೀಸಾ ಕೊಟ್ಟು ಪ್ರಜ್ವಲ್‌ನ ವಿದೇಶಕ್ಕೆ ಹೇಗೆ ಕಳುಹಿಸಿದರು ಇವೆಲ್ಲದರ ಹಿಂದೆ ದೊಡ್ಡ ದೊಡ್ಡ ಶಕ್ತಿಗಳು ಇದಾವೆ.

-ವಿನಯ್ ಕುಲಕರ್ಣಿ, ಶಾಸಕ




ಹಾಸನದ ಪೆನ್‌ಡ್ರೈವ್ ಪ್ರಕರಣಕ್ಕೆ ಸಂಬಂಧಪಟ್ಟಂತೆ ಬಹಳಷ್ಟು ಮಂದಿಯ ಜೀವನದ ಪ್ರಶ್ನೆ ಅಡಗಿದೆ. ಈ ಕಾರಣಕ್ಕಾಗಿಯೇ ಎಸ್‌ಐಟಿಯ ತನಿಖೆಗೆ ಆದೇಶಿಸಲಾಗಿದೆ. ಸಾಕ್ಷಿ ಪುರಾವೆಗಳನ್ನು ನೋಡದೆ ಏಕಾಏಕಿ ರೇವಣ್ಣ ಅಥವಾ ಯಾರನ್ನೇ ಆಗಲಿ ಬಂಧಿಸುವುದಿಲ್ಲ. ಕೇಂದ್ರ ಗೃಹಸಚಿವ ಅಮಿತ್ ಶಾ ಅವರು ರಾಜ್ಯಸರ್ಕಾರ ಏನೂ ಕ್ರಮ ಕೈಗೊಳ್ಳುತ್ತಿಲ್ಲ , ಆ ರೀತಿ ಏಕಾಏಕಿ ಕ್ರಮ ತೆಗೆದುಕೊಳ್ಳುವುದು ಸೂಕ್ತ ಅಲ್ಲ. ಸೂಕ್ಷ್ಮ ಪ್ರಕರಣವಾಗಿದ್ದು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ, ಎಚ್ಚರಿಕೆಯಿಂದ ಕ್ರಮಗಳನ್ನು ಕೈಗೊಳ್ಳುತ್ತಿದೆ

-ಡಾ.ಜಿ.ಪರಮೇಶ್ವರ್, ಗೃಹಸಚಿವ



'ಪ್ರಜ್ವಲ್‌ನನ್ನ ಏರ್‌ಪೋರ್ಟ್‌ವರೆಗೆ ಹೋಗಲು ಯಾಕೆ ಬಿಟ್ರ ಕಾಂಗ್ರೆಸ್ ಅಧಿಕಾರ ಬಿಟ್ಟರೆ ನಾವು ಆತನನ್ನ 24 ಗಂಟೆಯಲ್ಲಿ ಬಂಧಿಸುತ್ತೇವೆ.. ರಾಜ್ಯ ಪೊಲೀಸ್ ಸರ್ಕಾರದ ಅಧಿನದಲ್ಲೇ ಇಲ್ಲವೇ ಹಾಸನದಿಂದ ಬೆಂಗಳೂರು ಏರ್ಪೋರ್ಟ್‌ಗೆ ಹೋಗಲು ಯಾಕೆ ಬಿಟ್ಟರು ಪ್ರಜ್ವಲ್‌ನನ್ನ ಯಾಕೆ ಟ್ರ್ಯಾಕ್ ಮಾಡಲಿಲ್ಲ ರಾಜ್ಯ ಪೊಲೀಸರು ಏನು ಮಾಡ್ತಿದ್ದರು ಪ್ರಜ್ವಲ್ ವಿರುದ್ಧ ಆರೋಪ ಇದ್ದಿದ್ದು ಗೊತ್ತಿದ್ದೂ ಮತದಾನ ಮಾಡಲು ಯಾಕೆ ಬಿಟ್ಟರು ರಾಜ್ಯದಲ್ಲಿ ಕಾನೂನು ಕಾಪಾಡುವ ಜವಾಬ್ದಾರಿ ರಾಜ್ಯ ಸರ್ಕಾರದಲ್ಲವೇ

-ಆರ್. ಅಶೋಕ್, ವಿಪಕ್ಷ ನಾಯಕ



ಇದೊಂದು ದರಿದ್ರ ವಿಷಯ. ಇದರ ಬಗ್ಗೆ ನಾವ್ಯಾಕೆ ಮಾತನಾಡೋಣ. ಆ ಬಗ್ಗೆ ಮಾತನಾಡಿದರೆ ಬಾಯಲ್ಲಿ ಹುಳ ಬೀಳುತ್ತದೆ. ದುಶ್ಯಾಸನ ಹಾಗೆ ಮಾಡಿದ ಎಂದು ಮಾತೆಯರ ಮಾನ ಹರಾಜು ಆಗುತ್ತಾ. ಆ ಪ್ರಕರಣದಲ್ಲಿ ದುಶ್ಯಾಶನನೇ ಹಾಳಾದ ಮಹಿಳೆಯರೆಂದರೆ ಸೀತೆ, ಸಾವಿತ್ರಿ ದ್ರೌಪತಿ ಎಂದು ಪೂಜೆ ಮಾಡುತ್ತೇವೆ. ಯಾರು ಮಾನ ಹರಾಜು ಹಾಕಲು ಯತ್ನಿಸಿದರೋ ಅಂತವರ ಮಾನ ಹರಾಜಾಗಿದೆ. ಅಂತವರ ವಿರುದ್ಧ ರಾಜ್ಯ ,ದೇಶಾದ್ಯಂತ ಛೀ..ಥೂ ಎನ್ನುತ್ತಿದ್ದಾರೆ.


-ಕೆ.ಎಸ್. ಈಶ್ವರಪ್ಪ, ಮಾಜಿ ಉಪಮುಖ್ಯಮಂತ್ರಿ

**ಏ.28ರವರೆಗೆ ಎಫ್‌ಐಆರ್ ಆಗುವುದಿಲ್ಲ ಅಂದರೆ ಅರ್ಥವೇನು**

ಪ್ರಜ್ವಲ್ ರೇವಣ್ಣ ವಿರುದ್ಧದ ಲೈಂಗಿಕ ಹಗರಣ ಪ್ರಕರಣದಲ್ಲಿ ರಾಜ್ಯ ಸರ್ಕಾರದ್ದೇ ತಪ್ಪಿದೆ ರೇವಣ್ಣ ವಿರುದ್ಧ ಕೇಸು ದಾಖಲಿಸಲು ವಿಳಂಬ ಮಾಡಿದ್ದೇಕೆ ಎಂದು ಕಾಂಗ್ರೆಸ್ ಪಕ್ಷ ಮತ್ತು ಸರ್ಕಾರ ಹೇಳಬೇಕು. ಪ್ರಜ್ವಲ್ ರೇವಣ್ಣ ತಪ್ಪು ಮಾಡಿದ್ದರಲ್ಲಿ ಶೇಕಡಾ 50ರಷ್ಟು ತಪ್ಪು ರಾಜ್ಯ ಸರ್ಕಾರದ್ದೂ ಇದೆ ಎಂದರು. ಈ ಪ್ರಕರಣ ಬೆಳಕಿಗೆ ಬಂದ ಕೂಡಲೇ ಸರ್ಕಾರ ಎಫ್ ಐಆರ್ ಹಾಕಿಸಿ ಪರಿಶೀಲನೆ ಮಾಡಿ ಪ್ರಜ್ವಲ್ ರೇವಣ್ಣ ಹೊರಗೆ ಹೋಗಬಾರದು ಎಂದು ನಿರ್ಬಂಧ ಹಾಕಬಹುದಾಗಿತ್ತು. ಏ.21ರಂದು ಪ್ರಕರಣ ಗಮನಕ್ಕೆ ಬಂದಿದ್ದರೂ ಎಫ್ ಐಆರ್ ಹಾಕಲು ಏಪ್ರಿಲ್ 28ರವರೆಗೆ ತೆಗೆದುಕೊಂಡಿದ್ದೇಕೆ ಎಂದು ಜೋಷಿ ಪ್ರಶ್ನಿಸಿದರು

## ಚುನಾವಣೆಯಲ್ಲಿ ನನ್ನ ಜೊತೆ ಸಿದ್ದರಾಮಯ್ಯ ಸಂಧಾನ ಮಾಡಿಕೊಂಡಿದ್ದರು

• ಉದಯವಾಹಿನಿ, ಕೊಪ್ಪಳ



ಕಳೆದ ವಿಧಾನಸಭೆ ಚುನಾವಣೆಯಲ್ಲಿ ನನ್ನ ಜೊತೆ ಸಿದ್ದರಾಮಯ್ಯ ಸಂಧಾನ ಮಾಡಿಕೊಂಡಿದ್ದರು. ಸಿಎಂ ಸಿದ್ದರಾಮಯ್ಯ ನನ್ನ ಜೊತೆ ಸಂಧಾನ ಮಾಡಿಕೊಂಡಿದ್ದರು ಎಂದು ಕೊಪ್ಪಳ ಜಿಲ್ಲೆಯ ಗಂಗಾವತಿಯಲ್ಲಿ ಶಾಸಕ ಜನಾರ್ಧನ ರೆಡ್ಡಿ ಸ್ಫೋಟಕ ಹೇಳಿಕೆ ನೀಡಿದ್ದಾರೆ.

ಪಕ್ಷ 10 ಸ್ಥಾನ ಗೆಲ್ಲುತ್ತೆ ಅಂತ ಕಾಂಗ್ರೆಸ್‌ವರು ಅಂದುಕೊಂಡಿದ್ದರು.ಹೀಗಾಗಿ ಚುನಾವಣೆಗೆ ಮುನ್ನ ನನ್ನ ಜೊತೆ ಸಂಧಾನ ಮಾಡಿಕೊಂಡಿದ್ದರು. ಮುಂದೆ ನಮ್ಮ ಸರ್ಕಾರ ರಚನೆಗೆ ರೆಡ್ಡಿ ಬೇಕಾಗಬಹುದು ಅಂತ ಅಂದುಕೊಂಡಿದ್ದರು. ಹಾಗಾಗಿ ಇಬ್ಬರಿಗೂ ಬೇಕಾಗಿದ್ದ ಓರ್ವ ಕಾಮನ್ ಫ್ರೆಂಡ್ ನನ್ನು ಕಳುಹಿಸಿದ್ದರು. ನಾನು ಜನಾರ್ದನ ರೆಡ್ಡಿ ವಿರುದ್ಧ ಇಲ್ಲಸಲ್ಲದ ಆರೋಪ ಮಾಡಿದ್ದೇನೆ ಹಳೆಯದಲ್ಲವನ್ನು ಮರೆತು ಬಿಡೋಣ ರೆಡ್ಡಿ ವಿರುದ್ಧ ಮಾತನಾಡಲ್ಲ ಗಂಗಾವತಿಯಲ್ಲಿ ಪ್ರಚಾರ ಮಾಡಲ್ಲ ಎಂದು ಸಿದ್ದರಾಮಯ್ಯ ಹೇಳಿ ಕಳುಹಿಸಿದ್ದರು. ಹೀಗಾಗಿ ಸಿದ್ದರಾಮಯ್ಯ ಗಂಗಾವತಿ ಬಳ್ಳಾರಿಗೆ ಪ್ರಚಾರಕ್ಕೆ ಬಂದಿರಲಿಲ್ಲ. ಇಕ್ಬಾಲ್ ಅನ್ಸಾರಿ ಮೆಚ್ಚಿಸಲು ನನ್ನ ಬಗ್ಗೆ ಎರಡು ಮಾತು ಆಡಿದ್ದಾರೆ. ಆದರೆ ನನಗೆ ಸಿದ್ದರಾಮಯ್ಯ ಮೇಲೆ ಯಾವುದೇ ರೀತಿಯಾದ ಸಿಟ್ಟಿಲ್ಲ. ದೇವರ ಮೇಲೆ ಪ್ರಮಾಣ ಮಾಡಲ್ಲ. ನನ್ನ ಮೇಲೆ ಪ್ರಮಾಣ ಮಾಡುತ್ತೇನೆ ಇವರೆಲ್ಲರೂ ಚುನಾವಣೆ ಸಮಯದಲ್ಲಿ ನನ್ನ ಜೊತೆ ಅಡ್ಜಸ್ಟ್ ಆಗಿದ್ದರು ಎಂದು ಕೊಪ್ಪಳ ಜಿಲ್ಲೆಯ ಗಂಗಾವತಿಯಲ್ಲಿ ಶಾಸಕ ಜನಾರ್ಧನ ರೆಡ್ಡಿ ಹೇಳಿಕೆ ನೀಡಿದರು.

## ಶಾಸಕ ಯತ್ನಾಳ್ ವಿರುದ್ಧ FIR ದಾಖಲು

• ಉದಯವಾಹಿನಿ, ಬಾಗಲಕೋಟೆ :



ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಸಚಿವ ಶಿವಾನಂದ್ ಪಾಟೀಲ್ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಲಾಗಿದ್ದು, ಇದೀಗ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ FIR ದಾಖಲಾಗಿದೆ. ಹೌದು ಸಚಿವ ಶಿವಾನಂದ ಪಾಟೀಲ್ ಬಗ್ಗೆ ಅವಹೇಳನಕಾರಿ ಹೇಳಿಕೆ ಆರೋಪದ ಹಿನ್ನೆಲೆಯಲ್ಲಿ ಬಾಗಲಕೋಟೆಯ ನವನಗರದ ಪೊಲೀಸ್ ಠಾಣೆಯಲ್ಲಿ ಯತ್ನಾಳ್ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಏಪ್ರಿಲ್ 29ರಂದು ನವನಗರದಲ್ಲಿ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವಹೇಳನಕಾರಿ ಹೇಳಿಕೆ ನೀಡಿದ್ದರು. ಇದೀಗ ಕಾರ್ಮಿಕ ನಿರೀಕ್ಷಕ ರಮೇಶ್ ಭೀಮಪ್ಪ ಸಿಂದಗಿ ಅವರ ದೂರಿನ ಅನ್ವಯ ಇದೀಗ ಯತ್ನಾಳ್ ವಿರುದ್ಧ ಎಫ್ ಐಆರ್ ದಾಖಲಿಸಲಾಗಿದೆ.

# ಹಾಲಿನ ಪ್ರೋತ್ಸಾಹಧನ ನೀಡದ ಸರ್ಕಾರ, ಖಜಾನೆ ಖಾಲಿಗೆ ಇದೇ ಸಾಕ್ಷಿ


### 700 ಕೋಟಿ ರೂಪಾಯಿ ಹಾಲು ಉತ್ಪಾದಕರಿಗೆ ಬಾಕಿ ಸಬ್ಸಿಡಿ ಬಿಡುಗಡೆ ಮಾಡಲು ಹೆಚ್.ಡಿ.ಕುಮಾರಸ್ವಾಮಿ ಆಗ್ರಹ

• ಉದಯವಾಹಿನಿ, ಬೆಂಗಳೂರು

ಕಳೆದ ಎಂಟು ತಿಂಗಳಿಂದ ರೈತರಿಗೆ ಸರ್ಕಾರ ಹಾಲಿನ ಪ್ರೋತ್ಸಾಹಧನ ನೀಡಿಲ್ಲ.ಖಜಾನೆ ಖಾಲಿಯಾಗಿದೆ ಎಂಬು ದಕ್ಕೆ ಇದೇ ಸಾಕ್ಷಿ ಎಂದು ವಿಧಾನಸಭೆಯ ಪ್ರತಿಪಕ್ಷನಾಯಕ ಆರ್.ಅಶೋಕ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ಖಜಾನೆ ಖಾಲಿಯಾಗಿದ್ದು, ಎಂಟು ತಿಂಗಳಿಂದ ಹಾಲಿನ 5 ರೂ. ಪ್ರೋತ್ಸಾಹಧನ ನೀಡಿಲ್ಲ. ಸುಮಾರು 700 ಕೋಟಿ ರೂಪಾಯಿಯನ್ನು ಬಾಕಿ ಉಳಿಸಿಕೊಂಡಿದ್ದಾರೆ. ಜನರಿಗೆ ತೆರಿಗೆ ಹಾಕಿ ಅವರಿಂದ ವಸೂಲಿ ಮಾಡಿ ನಂತರ ಮಹಿಳೆಯರಿಗೆ ಹಣ ನೀಡುತ್ತೇವೆ ಎಂದು ನಾಟಕವಾಡಿದ್ದಾರೆ.

ಉಚಿತ ಕೊಡುವ ಬದಲು ವಿದ್ಯಾರ್ಥಿಗಳಿಗೆ ಉಚಿತ ಪಾಸ್, ಶಾಲೆ, ಆಸ್ಪತ್ರೆ ನಿರ್ಮಾಣ ಮೊದಲಾದ ಯೋಜನೆಗಳನ್ನು ನೀಡಬೇಕಿತ್ತು. ಖಜಾನೆ ಖಾಲಿಯಾಗಿದೆ ಎಂಬುದಕ್ಕೆ ಇದಕ್ಕಿಂತ ಬೇರೆ ಉದಾಹರಣೆ ಬೇಡ ಎಂದರು. ಖಜಾನೆ ಖಾಲಿ ಮಾಡಿಕೊಂಡ ಬಳಿಕ ಕೇಂದ್ರ ಸರ್ಕಾರ ಅನ್ಯಾಯ ಮಾಡಿದೆ ಎಂದು ಕಾಂಗ್ರೆಸ್ ನಾಯಕರು ಹೇಳುತ್ತಿದ್ದಾರೆ. ಕಳೆದ 50 ವರ್ಷದಲ್ಲಿ ಕಾಂಗ್ರೆಸ್ ಸರ್ಕಾರದಿಂದ ರಾಜ್ಯಕ್ಕೆ ಎಷ್ಟು ಹಣ ಬಂದಿದೆ ಎಂದು ತಿಳಿಸಲು ಸವಾಲು ಹಾಕುತ್ತೇನೆ. ಕಾಂಗ್ರೆಸ್‌ನ ಯೋಗ್ಯತೆಗೆ ಕರ್ನಾಟಕಕ್ಕೆ ಒಂದು ಕೋಟಿ ರೂ. ಕೂಡ ಬರ ಪರಿಹಾರ ನೀಡಿಲ್ಲ ಎಂದು ದೂರಿದರು.

ರಾಹುಲ್ ಗಾಂಧಿ ಎಲ್ಲೇ ಹೋದರೂ ಪಂಗನಾಮ ಸಿಗುತ್ತಿದೆ. ಅವರ ನಾಯಕತ್ವದ ಮೇಲೆ ವಿಶ್ವಾಸ ಇಲ್ಲವೆಂದೇ ಸಿಎಂ ಸಿದ್ದರಾಮಯ್ಯ ಕೇವಲ ಗ್ಯಾರಂಟಿ ಬಗ್ಗೆ ಮಾತನಾಡುತ್ತಿದ್ದಾರೆ. ಇವರಿಗೆ ನೈತಿಕತೆ ಇದ್ದರೆ ಹಿಂದಿನ ಯುಪಿಎ ಸರ್ಕಾರ ಏನು ಮಾಡಿದೆ ಎಂದು ಜಾಹೀರಾತು ನೀಡಬೇಕಿತ್ತು. ಇದೇ ಕಾಂಗ್ರೆಸ್ ದೇಶಕ್ಕೆ ಚೊಂಬು ನೀಡಿತ್ತು. ನಂತರ ಬಂದ ಪ್ರಧಾನಿ ನರೇಂದ್ರ ಮೋದಿ ಶೌಚಾಲಯಗಳನ್ನು ಕಟ್ಟಿಸಿ ಚೊಂಬು ಬಳಸದಂತೆ ಮಾಡಿದರು ಎಂದರು.



ಎಚ್‌ಎಎಲ್ ಮುಚ್ಚುತ್ತಾರೆ ಎಂದು ಕಾಂಗ್ರೆಸ್ ಆರೋಪ ಮಾಡಿತ್ತು. ಅದೇ ಎಚ್‌ಎಎಲ್ ಈಗ 84 ಸಾವಿರ ಕೋಟಿ ರೂ. ವಹಿವಾಟು ನಡೆಸುತ್ತಿದೆ. ಇಂದು ಎಲ್ಲಾ ಸಾರ್ವಜನಿಕ ಉದ್ದಿಮೆಗಳು ಲಾಭ ಮಾಡುತ್ತಿವೆ. 2022 ರ ವೇಳೆಗೆ 6 ಕೋಟಿ ಹೊಸ ಎಂಎಸ್‌ಎಂಇ ಉದ್ಯಮಗಳು ಸೃಷ್ಟಿಯಾಗಿವೆ. ರೋಜ್‌ಗಾರ್ ಯೋಜನೆಯಡಿ 7.5 ಲಕ್ಷ ಜನರಿಗೆ ಉದ್ಯೋಗ ಸಿಕ್ಕಿದೆ. ಸಿಎಂ ಸಿದ್ದರಾಮಯ್ಯ ಎಷ್ಟು ಉದ್ಯೋಗ ಸೃಷ್ಟಿಸಿದ್ದಾರೆ ಎಂದು ಹೇಳಲಿ ಎಂದು ಸವಾಲೆಸೆದರು.

### ಸಂವಿಧಾನವನ್ನೇ ತಿರುಚಿ ಹಿಂದುಳಿದ ವರ್ಗಗಳಿಗೆ ಅನ್ಯಾಯ

ಡಾ.ಬಿ.ಆರ್.ಅಂಬೇಡ್ಕರ್ ರಚಿತ ಸಂವಿಧಾನದಲ್ಲಿ ಧರ್ಮಾಧಾರಿತ ಮೀಸಲು ಇಲ್ಲ. ಕಾಂಗ್ರೆಸ್‌ಗೆ ಮೊದಲೇ ಅಂಬೇಡ್ಕರ್ ಬಗ್ಗೆ ಗೌರವವಿಲ್ಲ. ಆದ್ದರಿಂದ ಸಂವಿಧಾನವನ್ನೇ ತಿರುಚಿ ಹಿಂದುಳಿದ ವರ್ಗಗಳಿಗೆ ಅನ್ಯಾಯ ಮಾಡಿದ್ದಾರೆ. ಪಿತೃಗಳಿಗೆ ತಿಥಿಯಲ್ಲಿ ವಡೆ ಇಡುತ್ತಾರೆ. ಅಂತಹ ಹೆಸರಿನ ಸ್ಯಾಮ್ ಪಿತ್ರೋಡಾ ಅವರು, ಜನರ ಪಿತ್ರಾರ್ಜಿತ ಆಸ್ತಿಗಳಿಗೆ ತರ್ಪಣ ಬಿಡಲು ಸಲಹೆ ನೀಡಿದ್ದಾರೆ. ಈ ಹೇಳಿಕೆಯನ್ನು ಕಾಂಗ್ರೆಸ್ ನಮ್ಮದಲ್ಲ ಎಂದಿದೆ, ಆದರೆ ಹೇಳಿಕೆ ಬದಲಿಸಲು ಕಾಂಗ್ರೆಸ್ ಹಿರಿಯರೇ ಸೂಚನೆ ನೀಡಿದ್ದಾರೆ ಎಂದರು.

### ಸರಕಾರದ ಆತ್ಮಸಾಕ್ಷಿ ಸತ್ತು ಹೋಗಿದೆಯಾ

ಬರಗಾಲದಂಥ ಸಂಕಷ್ಟದ ಸಂದರ್ಭದಲ್ಲಿ ಹೈನುಗಾರಿಕೆ ರೈತರಿಗೆ ಆದಾಯದ ಮೂಲವಾಗಿತ್ತು. ಆದರೆ ಕಳೆದ ಏಳು ತಿಂಗಳಿಂದ ಸರಕಾರ ಪ್ರೋತ್ಸಾಹ ಧನವನ್ನೇ ಬಿಡುಗಡೆ ಮಾಡಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಹೆಚ್ ಡಿ ಕುಮಾರಸ್ವಾಮಿ ಅವರು ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ. ಹಾಲು ಉತ್ಪಾದಕರಿಗೆ ಬಾಕಿ ಉಳಿಸಿಕೊಂಡಿರುವ 700 ಕೋಟಿ ರೂಪಾಯಿ ಸಬ್ಸಿಡಿ ಹಣವನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ಸರಕಾರವನ್ನು ಒತ್ತಾಯ ಮಾಡಿದ್ದಾರೆ. ಬರದಿಂದ ಕಂಗೆಟ್ಟ ರೈತರ ಹಾಹಾಕಾರ ಒಂದೆಡೆಯಾದರೆ, ಹಾಲಿನ ಸಬ್ಸಿಡಿಯನ್ನೂ ಕೊಡದೇ ದೋಖಾ ಮಾಡುತ್ತಿರುವ ರಾಜ್ಯ ಕಾಂಗ್ರೆಸ್ ಸರಕಾರದ ನಡೆ ಖಂಡನೀಯ. ಹಾಲು ಉತ್ಪಾದಕರ ಸಬ್ಸಿಡಿ ಹಣ 700 ಕೋಟಿ ಬಾಕಿ ಉಳಿಸಿಕೊಂಡಿರುವ ಸರಕಾರದ ಆತ್ಮಸಾಕ್ಷಿ ಸತ್ತು ಹೋಗಿದೆಯಾ ಎಂದು ಖಾರವಾಗಿ ಪ್ರಶ್ನಿಸಿದ್ದಾರೆ.

**ಈ ದಿನದ ದರ** ಪೆಟ್ರೋಲ್: 99.84 ₹/L ಡೀಸೆಲ್ : 85.93 ₹/L ಬಂಗಾರ: ₹7,151 /Gram(24ct) ₹6,555/Gram(22ct) ಬೆಳ್ಳಿ: ₹83.40/Gram

ಉದಯ ವಾಹಿನಿ

ಪ್ರಾದೇಶಿಕ

ಗುರುವಾರ
02 ಮೇ 2024



# ರುಚಿಕರ ಮಾವಿಗೆ ವಿಷಕಾರಿ ಕಾರ್ಬೈಡ್! ಹಣ್ಣು ಮಾಗಿಸಲು ವರ್ತಕರ ತಂತ್ರ

## ಮಾವಿನ ಕಾಯಿ ರಂಗುರಂಗಾಗಿ ಕಂಗೊಳಿಸುವ ರೀತಿಯಲ್ಲಿ ಮಾಗಿಸುವ ಸಲುವಾಗಿ ಕ್ಯಾಲ್ಸಿಯಂ ಕಾರ್ಬೈಡ್ ರಾಸಾಯನಿಕಗಳ ಬಳಕೆ

• ಉದಯವಾಹಿನಿ, ಮೈಸೂರು

ಈಗ ನಗರದ ಮಾರುಕಟ್ಟೆ ತುಂಬೆಲ್ಲ ಮಾವಿನದ್ದೇ ಘಮಲು. ಆದರೆ, ನಾವು ಚಪ್ಪರಿಸಿ ತಿನ್ನುವ ಈ ಹಣ್ಣನ್ನು ಮಾಗಿಸಲು ಕಾರ್ಬೈಡ್ ಎಂಬ ವಿಷಕಾರಿ ರಾಸಾಯನಿಕವನ್ನು ಯಥೇಚ್ಛವಾಗಿ ಬಳಸುತ್ತಿದ್ದು, ಇದರಿಂದ ಹಣ್ಣು ತಿನ್ನಲು ಹಿಂಜರಿಯುವಂತೆ ಆಗಿದೆ.

ಹಸಿರಾದ ಮಾವಿನ ಕಾಯಿಗಳನ್ನು ರಂಗುರಂಗಾಗಿ ಕಂಗೊಳಿಸುವ ರೀತಿಯಲ್ಲಿ ಮಾಗಿಸುವ ಸಲುವಾಗಿ ಕ್ಯಾಲ್ಸಿಯಂ ಕಾರ್ಬೈಡ್ ಮೊದಲಾದ ರಾಸಾಯನಿಕಗಳ ಬಳಕೆ ಯಥೇಚ್ಛವಾಗಿ ನಡೆದಿದೆ.

ಇದರಿಂದ ರಾಸಾಯನಿಕ ವಿಷವು ನೇರವಾಗಿ ಗ್ರಾಹಕರ ಉದರ ಸೇರುತ್ತಿದೆ. ಸರ್ಕಾರ ಈ ರಾಸಾಯನಿಕಗಳ ಬಳಕೆ ಮೇಲೆ ನಿಷೇಧ ಹೇರಿದ್ದರೂ ಮಾರುಕಟ್ಟೆಯಲ್ಲಿ ಈ ತಂತ್ರ ನಡೆದೇ ಇದೆ.

ಮಾವು ಋತುವಿನ ಆರಂಭದಲ್ಲಿ ಹಣ್ಣಿನ ಬೆಲೆ ಹೆಚ್ಚಿರುತ್ತದೆ. ಹೀಗಾಗಿ ಕೆಲವು ವರ್ತಕರು ಲಾಭ ಗಳಿಕೆಯ ಸಲುವಾಗಿ ಕಾಯಿಯನ್ನು ಕಿತ್ತು ಬಲವಂತವಾಗಿ ಹಣ್ಣು ಮಾಡುತ್ತಾರೆ. ಆರಂಭದಲ್ಲಿ ಮಾರುಕಟ್ಟೆಯಲ್ಲಿ ಪ್ರತಿ ಕೆ.ಜಿ. ಹಣ್ಣಿನ ಬೆಲೆ ರೂ.150–200ರವರೆಗೂ ಇರುತ್ತದೆ. ನಂತರದಲ್ಲಿ ಇದು ರೂ.60–80ಕ್ಕೆ ಇಳಿಯುತ್ತದೆ. ಹೀಗಾಗಿ ಮೊದಲೇ ಲಾಭದ ಆಸೆಗೆ ಕಾಯಿಯ ಹಂತದಲ್ಲಿಯೇ ಮಾವನ್ನು ಕಿತ್ತು ಬಲವಂತವಾಗಿ ಹಣ್ಣು ಮಾಡಲಾಗುತ್ತಿದೆ. ಹೀಗೆ ಮಾಡಲು ಕಾರ್ಬೈಡ್ ಅನ್ನು ಬಳಸಲಾಗುತ್ತದೆ. ಈ ರಾಸಾಯನಿಕವು ಕಾಯನ್ನು ಕೃತಕವಾಗಿ ಮಾಗಿಸಿ ಅದಕ್ಕೆ ಬಣ್ಣ ನೀಡುತ್ತದೆ. ಇದರೊಟ್ಟಿಗೆ ಹಣ್ಣಿನಲ್ಲಿ ವಿಷಕಾರಿ ಅಂಶವೂ ಸೇರ್ಪಡೆ ಆಗುತ್ತದೆ


ಉದಯವಾಹಿನಿ ಚಿತ್ರ

**ಹಣ್ಣಿನಲ್ಲಿ ವಿಷಕಾರಿ ಅಂಶವೂ ಸೇರ್ಪಡೆ**

> ಸ್ಥಳೀಯ ನಿವಾಸಿ ರಾಸಾಯನಿಕ ಬಳಸಿ ಮಾವಿಗೆ ಕೃತಕವಾಗಿ ಬಣ್ಣ ಕಟ್ಟಿ ಮಾರಲಾಗುತ್ತಿದೆ. ಇದು ಆರೋಗ್ಯಕ್ಕೆ ಅಪಾಯಕಾರಿಯಾಗಿದ್ದು ನಗರಪಾಲಿಕೆಯ ಅಧಿಕಾರಿಗಳು ದಾಳಿ ನಡೆಸಿ ಕ್ರಮ ಕೈಗೊಳ್ಳಬೇಕು.
> — ಎಚ್.ಆರ್. ದೊರೆಸ್ವಾಮಿ,

> ಹಣ್ಣನ್ನು ಮಾಗಿಸಲು ನೈಸರ್ಗಿಕವಾದ ಹಲವು ವಿಧಾನಗಳಿದ್ದು ಅದನ್ನು ಅನುಸರಿಸಬೇಕು. ಯಥಿಲೀನ್ ಮೊದಲಾದ ಹಾನಿಕಾರಕವಲ್ಲದ ದ್ರಾವಣಗಳನ್ನು ಬಳಸಿ ಹಣ್ಣನ್ನು ಮಾಗಿಸಬಹುದು. ಇದರಿಂದ ಆರೋಗ್ಯಕ್ಕೆ ಹೆಚ್ಚು ಹಾನಿಯಾಗುವುದಿಲ್ಲ. ಯಾವುದೇ ಹಣ್ಣನ್ನು ಬಳಸುವ ಮುನ್ನ ಅದನ್ನು ನೀರಿನಲ್ಲಿ ಒಂದೆರಡು ನಿಮಿಷ ನೆನೆಯಿಸಿ ಚೆನ್ನಾಗಿ ತೊಳೆದ ಬಳಿಕವಷ್ಟೇ ತಿನ್ನಬೇಕು ಎನ್ನುವುದು ವೈದ್ಯರು ಹಾಗೂ ತೋಟಗಾರಿಕೆ ವಿಜ್ಞಾನಿಗಳ ಸಲಹೆ.

ಎಂದು ವಿವರಿಸುತ್ತಾರೆ ಮಾರುಕಟ್ಟೆ ತಜ್ಞರು.

ಕಾರ್ಬೈಡ್‌ಯುಕ್ತ ಹಣ್ಣನ್ನು ನೇರವಾಗಿ ಸೇವನೆ ಮಾಡುವುದರಿಂದ ಹಲವು ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಸಾಮಾನ್ಯ ಸಮಸ್ಯೆಗಳಾದ ಗಂಟಲು ಕೆರೆತ, ತುರಿಕೆ, ಚರ್ಮದ ಸಮಸ್ಯೆ, ಅಲರ್ಜಿಯಿಂದ ಹಿಡಿದು ದೀರ್ಘಕಾಲೀನ ಸಮಸ್ಯೆಗಳಿಗೂ ಈ ರಾಸಾಯನಿಕ ಕಾರಣವಾಗಬಹುದು. ಅದರಲ್ಲೂ ಕ್ಯಾನ್ಸರ್‌ನಂತಹ ಮಹಾಮಾರಿ ಬರುವ ಸಾಧ್ಯತೆಯೂ ಇದೆ' ಎನ್ನುತ್ತಾರೆ ವೈದ್ಯರು.

ಈ ರಾಸಾಯನಿಕವನ್ನು ಮಕ್ಕಳು, ದೊಡ್ಡವರು ನೇರವಾಗಿ ಸೇವಿಸಿದಲ್ಲಿ ಸಾವು ಸಂಭವಿಸುವ ಸಾಧ್ಯತೆಯೂ ಹೆಚ್ಚು. ಹೀಗಾಗಿ ಮಕ್ಕಳಿಗೆ ಇದರ ಗಾಳಿ ಸೋಕದಂತೆ ಎಚ್ಚರ ವಹಿಸಬೇಕು' ಎನ್ನುವುದು ಅವರ ಸಲಹೆ.

> ಸಾವಯವ ರೂಪದಲ್ಲಿ ಬೆಳೆದ ಒಣಹುಲ್ಲಿನ ಶಾಖದಲ್ಲಿ ಇಲ್ಲವೇ ತೋಟಗಾರಿಕೆ ಇಲಾಖೆಯ ವಿಜ್ಞಾನಿಗಳು ಶಿಫಾರಸು ಮಾಡಿದ ಹಾನಿಕಾರಕವಲ್ಲದ ರಾಸಾಯನಿಕ ಬಳಸಿ ಮಾಗಿಸಿದ ಮಾವು ಸಹ ಮಾರುಕಟ್ಟೆಯಲ್ಲಿ ಲಭ್ಯವಿದೆ. ತೋಟಗಾರಿಕೆ ಇಲಾಖೆಯು ಮಾವು ಮೇಳಗಳ ಆಯೋಜನೆ ಮೂಲಕ ರೈತರು ಹಾಗೂ ಗ್ರಾಹಕರನ್ನು ನೇರವಾಗಿ ಬೆಸೆಯುವ ಮೂಲಕ ವಿಷಯುಕ್ತ ಮಾವಿನ ಮಾರಾಟಕ್ಕೆ ವೇದಿಕೆ ಒದಗಿಸುತ್ತಿದೆ. ಮೈಸೂರಿನಲ್ಲಿ ಸದ್ಯದಲ್ಲೇ ಮಾವು ಮೇಳ ಆಯೋಜನೆಗೆ ಇಲಾಖೆಯು ಚಿಂತನೆ ನಡೆಸಿದೆ.

ರಸಗೊಬ್ಬರದ ಅಂಗಡಿಗಳಲ್ಲಿ ಕಾರ್ಬೈಡ್ ರಾಸಾಯನಿಕ ಮಾರಾಟ ಹಾಗೂ ಹಣ್ಣುಗಳನ್ನು ಮಾಗಿಸಲು ಇವುಗಳ ಬಳಕೆಯನ್ನು ಸರ್ಕಾರ ದಶಕದ ಹಿಂದೆಯೇ ನಿಷೇಧಿಸಿದೆ. ಆದರೆ, ಇಂದಿಗೂ ಕದ್ದುಮುಚ್ಚಿ ಅದರ ಮಾರಾಟ ನಡೆದಿದೆ. ಮೈಸೂರು ನಗರದ ಪ್ರಮುಖ ಮಾರುಕಟ್ಟೆಗಳಲ್ಲಿ ಕಾರ್ಬೈಡ್‌ನಿಂದ ಮಾಗಿಸಿದ ಹಣ್ಣುಗಳು ಸಿಗುತ್ತಲೇ ಇವೆ. ಆದರೆ, ಸಂಬಂಧಿಸಿದ ಅಧಿಕಾರಿಗಳು ಕ್ರಮ ಕೈಗೊಳ್ಳುತ್ತಿಲ್ಲ ಎನ್ನುವುದು ಸಾರ್ವಜನಿಕರ ಆರೋಪವಾಗಿದೆ.

# ಧರ್ಮರಾಯಸ್ವಾಮಿ ದ್ರೌಪತಮ್ಮನವರ ಕರಗ ಮಹೋತ್ಸವ

• ಉದಯವಾಹಿನಿ, ಶಿಡ್ಲಘಟ್ಟ

ತಾಲ್ಲೂಕಿನ ಮೇಲೂರು ಗ್ರಾಮದ ಪ್ರತಿ ಮನೆಯ ಮುಂದೆ ಅರಳಿದ ರಂಗೋಲಿ, ಮಾವಿನ ತೋರಣದಿಂದ ಅಲಂಕೃತಗೊಂಡ ಬೀದಿಗಳು, ಎಲ್ಲೆಲ್ಲೂ ಹಬ್ಬದ ಸಡಗರ ಮನೆ ಮಾಡಿತ್ತು. ಮಂಗಳವಾರ ಮಧ್ಯಾಹ್ನ 1 ಗಂಟೆಗೆ ದ್ರೌಪತಮ್ಮನವರಿಗೆ 36 ನೇ ವರ್ಷದ ಕಲ್ಯಾಣೋತ್ಸವ ನಡೆಯಿತು.

ರಾತ್ರಿ 9 ಗಂಟೆಗೆ ಕರಗದ ಪೂಜಾರಿಗೆ ಬಳೆ ತೊಡಿಸಲಾಯಿತು. ರಾತ್ರಿ 12 ಗಂಟೆಗೆ ಸರಿಯಾಗಿ ಪ್ರಥಮ ಬಾರಿಗೆ ಮೇಲೂರಿನ ಅಭಿಲಾಶ್ ಹೂವಿನ ಕರಗದ ಶಕ್ತುತ್ಸವ ನೆರವೇರಿಸಿ ದ್ರೌಪತಮ್ಮನವರ ಹೂವಿನಕರಗವನ್ನು ಹೊತ್ತು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸುತ್ತಿದರು. ಈ ಹಿಂದೆ ಶಿಡ್ಲಘಟ್ಟ ತಾಲ್ಲೂಕಿನ ಮಾಲೂರು ಗ್ರಾಮದಅರ್ಚಕ ಧರ್ಮೇಂದ್ರ ಅವರು ಹೂವಿನ ಕರಗವನ್ನು ಹೊತ್ತಿದ್ದರು. ಧರ್ಮರಾಯಸ್ವಾಮಿ ದ್ರೌಪತಮ್ಮನವರ ಹೂವಿನ ಕರಗ ಹೊರಬಂದ ಕೂಡಲೇ ಗ್ರಾಮಸ್ಥರು ಸಂಭ್ರಮದಿಂದ ಜೈಕಾರ ಹಾಕಿದರು. ತಮಟೆಯ ನಾದಕ್ಕೆ ಭಕ್ತಿ ಪರವಶರಾಗಿ ಕುಣಿದರು.


ಉದಯವಾಹಿನಿ ಚಿತ್ರ

ಹೂವಿನ ಕರಗ ಮಹೋತ್ಸವ ಅತ್ಯಂತ ವೈಭವದಿಂದ ವಿಜೃಂಭಣೆಯಾಗಿ ನೆರವೇರಿಸಲಾಯಿತು. ಐದು ದಿನಗಳ ಕಾಲ ನಡೆದ ಈ ಉತ್ಸವದಲ್ಲಿ ಧ್ವಜಾರೋಹಣ, ಪೋತರಾಜನ ಧೂಳು ಮೆರವಣಿಗೆ, ಹಸಿ ಕರಗ, ಗ್ರಾಮದ ದೇವರುಗಳಿಗೆ ಬೆಲ್ಲದಾರತಿ ಮಾಡಲಾಯಿತು. ಈ ಸಂದರ್ಭದಲ್ಲಿ ಬೆಂಗಳೂರಿನ ಹೆಸರಾಂತ ವಾದ್ಯಗೋಷ್ಠಿ ಏರ್ಪಡಿಸಿದ್ದರು. ತಾಲ್ಲೂಕಿನ ಹಲವು ಗ್ರಾಮಗಳಿಂದ ಭಕ್ತಾಧಿಗಳು ಭಾಗವಹಿಸಿ ಕಾರ್ಯಕ್ರಮವನ್ನು ವೈಭವದಿಂದ ವೀಕ್ಷಿಸಿದರು.

> ಗ್ರಾಮದ ಕೆರೆಯ ಏರಿ ಮೇಲೆ ಇರುವ ದುಗ್ಗಲಮ್ಮನ ದೇವಸ್ಥಾನದಲ್ಲಿ ಸೀರೆ ಮತ್ತು ಬಳೆ ತೊಡಿಸುವ ಶಾಸ್ತ್ರವನ್ನು ಮಾಡಲಾಯಿತು. ನಂತರ ಮೆರವಣಿಗೆಯ ಮೂಲಕ ಧರ್ಮರಾಯನ ದೇವಸ್ಥಾನದ ತನಕ ಕರೆ ತಂದು ಹೂವಿನ ಕರಗವನ್ನು ಹೊರಿಸಲಾಯಿತು. ಧರ್ಮರಾಯಸ್ವಾಮಿ ದ್ರೌಪತಮ್ಮನವರ ಹೂವಿನ ಕರಗದ ಪ್ರಯುಕ್ತ ಶಾಸಕ ಬಿ.ಎನ್.ರವಿಕುಮಾರ್ ವಿಶೇಷ ಪೂಜೆ ಸಲ್ಲಿಸಿದರು.

# ಭಾರತದ ಕಡೆಗೆ ವಿಶ್ವದ ವಿಶ್ವಾಸ ಸಾಕಷ್ಟು ಬೆಳೆ

• ಉದಯವಾಹಿನಿ, ಚನ್ನಪಟ್ಟಣ

ಭಾರತ ವಿಶ್ವದ ಮೂರನೇ ಶಕ್ತಿಯಾಗಿ ಬೆಳೆಯುತ್ತಿದ್ದು, ದೇಶದ ಕಡೆಗೆ ವಿಶ್ವದ ವಿಶ್ವಾಸ ಸಾಕಷ್ಟು ಬೆಳೆದಿದೆ ಎಂದು ವಿಷನ್ ಡಿಜಿಟಲ್ ಇಂಡಿಯಾದ ಅಧ್ಯಕ್ಷ ಹರಿಕೃಷ್ಣ ಮಾರಂ ಅಭಿಪ್ರಾಯಪಟ್ಟರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವತಿಯಿಂದ ಶತಮಾನೋತ್ಸವ ಭವನದಲ್ಲಿ ಸೋಮವಾರ ಏರ್ಪಡಿಸಿದ್ದ ಅಂತರರಾಷ್ಟ್ರೀಯ ಸಮ್ಮೇಳನ ಕಾರ್ಯಕ್ರಮದಲ್ಲಿ ಸುಸ್ಥಿರ ಕಡೆಗೆ ಶಿಕ್ಷಣದ ಪಾತ್ರ ವಿಷಯ ಕುರಿತು ಉಪನ್ಯಾಸ ನೀಡಿದರು.ವಿಶ್ವದ ದೊಡ್ಡ ಸಾಫ್ಟ್‌ವೇರ್ ಕಂಪನಿಗಳು ಬೆಂಗಳೂರಿನಲ್ಲಿ ಮುಖ್ಯ ಕಚೇರಿ, ಬ್ರ್ಯಾಂಚ್ ಹೊಂದಿವೆ. ಪ್ರಪಂಚದ ವಿವಿಧ ದೇಶಗಳು ಭಾರತದಲ್ಲಿ ಬಂಡವಾಳ ಹೂಡಿಕೆ ಸುರಕ್ಷಿತ ಎಂದು ಭಾವಿಸಿವೆ ಎಂದರು. ದೇಶದ ಔಷಧ ನೂರಕ್ಕೂ ಹೆಚ್ಚು ದೇಶಗಳಿಗೆ ರಫ್ತಾಗುತ್ತಿದೆ. ಮುಂದಿನ ದಿನಗಳಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಇನ್ನಷ್ಟು ಬದಲಾವಣೆ ಆಗಲಿದೆ. ಡಿಜಿಟಲ್ ವಿಶ್ವವಿದ್ಯಾಲಯಗಳು ಬರುವ ಸಾಧ್ಯತೆ ಇದೆ.

ಶಿಕ್ಷಣ ಕ್ಷೇತ್ರದಲ್ಲಿ ನೂರಕ್ಕೆ ನೂರು ಪ್ರಗತಿ ಸಾಧಿಸುವುದು ದೊಡ್ಡ ಸವಾಲಾಗಿದೆ. ಶಿಕ್ಷಣದೊಂದಿಗೆ ಕೌಶಲಕ್ಕೂ ಒತ್ತು ನೀಡಬೇಕಿದೆ ಎಂದರು.


ಉದಯವಾಹಿನಿ ಚಿತ್ರ

> ಕಾರ್ಯಕ್ರಮ ಉದ್ಘಾಟಿಸಿದ ಬೆಂಗಳೂರು ವಿಶ್ವವಿದ್ಯಾಲಯದ ಕುಲಪತಿ ಡಾ.ಎಸ್.ಎಂ.ಜಯಕರ ಮಾತನಾಡಿ, ಯುವಶಕ್ತಿ ದೇಶದ ದೊಡ್ಡಶಕ್ತಿ. ಯುವ ಸಮೂಹ ಮೊದಲು ಶೈಕ್ಷಣಿಕವಾಗಿ ಪ್ರಗತಿ ಕಾಣಬೇಕು. ಯುವ ಸಮೂಹ ದೇಶದ ಪ್ರಗತಿಗೆ ಕೊಡುಗೆ ನೀಡಬೇಕು ಎಂದು ಕಿವಿಮಾತು ಹೇಳಿದರು.
> — ಕುಲಪತಿ ಡಾ.ಎಸ್.ಎಂ.ಜಯಕರ

# ಕಾರ್ಮಿಕ ವರ್ಗವನ್ನು ದೇಶದ ಪ್ರಬಲ ಶಕ್ತಿ ಎಂದರೆ ತಪ್ಪಿಲ್ಲ

• ಉದಯವಾಹಿನಿ, ಶಿಡ್ಲಘಟ್ಟ

ಪ್ರತಿ ವರ್ಷದ ಮೇ 1ನೇ ತಾರೀಖಿನಂದು ಕಾರ್ಮಿಕರ ದಿನಾಚರಣೆಯನ್ನು ಆಚರಿಸಲಾಗುತ್ತದೆ. ಆ ದಿನವನ್ನು ಕಾರ್ಮಿಕರ ದಿನ ಎಂದು ಶ್ರೀ ಗುರು ಆದಿಜಾಂಬವಂತ ಸ್ವಾಮಿ ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷ ಮೇಸ್ತ್ರಿ ತಿರುಮಳಪ್ಪ ತಿಳಿಸಿದರು.

ನಗರದ ರೈಲ್ವೆ ನಿಲ್ದಾಣದ ಬಳಿಯಿರುವ ಕಾರ್ಮಿಕರ ವೃತ್ತದಲ್ಲಿ ಶ್ರೀ ಗುರು ಆದಿಜಾಂಬವಂತ ಸ್ವಾಮಿ ಕಟ್ಟಡ ಕಾರ್ಮಿಕರ ಸಂಘದ ವತಿಯಿಂದ ಆಯೋಜಿಸಿದ್ದ ಕಾರ್ಮಿಕ ದಿನಾಚರಣೆಯ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು ಶ್ರಮಿಕ ವರ್ಗವನ್ನು ಗುರುತಿಸುವ ಹಾಗೂ ಗೌರವಿಸುವ ಉದ್ದೇಶದಿಂದ ಪ್ರತಿವರ್ಷ ಮೇ 1 ರಂದು ಅಂತರರಾಷ್ಟ್ರೀಯ ಕಾರ್ಮಿಕ ದಿನವನ್ನು ಆಚರಿಸಲಾಗುತ್ತದೆ.

ಈ ದಿನದ ಆಚರಣೆ ಹೇಗೆ ಬಂತು, ಇದರ ಇತಿಹಾಸ, ಮಹತ್ವ ತಿಳಿಸಿಕೊಟ್ಟರು. ಸಂಘದ ಸಂಸ್ಥಾಪಕ ಅಧ್ಯಕ್ಷ ಚಿಕ್ಕದಾಸರಹಳ್ಳಿ ಕೃಷ್ಣಪ್ಪ ಮಾತನಾಡಿ ಕಾರ್ಮಿಕರು ಹಾಗೂ ಕಾರ್ಮಿಕ ವರ್ಗವನ್ನು ದೇಶದ ಪ್ರಬಲ ಶಕ್ತಿ ಎಂದರೂ ತಪ್ಪಾಗಲಿಕ್ಕಿಲ್ಲ. ದೇಶದ ಅಭಿವೃದ್ಧಿಯಲ್ಲಿ ಇವರ ಪಾತ್ರ ಬಹಳ ಮಹತ್ವದ್ದು. ಒಂದು ದೇಶ ಹಾಗೂ ರಾಜ್ಯ ತನ್ನದೇ ಆದ ಮೂಲಸೌಕರ್ಯ, ಅಭಿವೃದ್ಧಿ ಹಾಗೂ ಆರ್ಥಿಕತೆಯಿಂದ ನಿರ್ಮಿಸಲ್ಪಡುತ್ತದೆ. ಕಾರ್ಮಿಕ ವರ್ಗದವರು ದೇಶದ ಅಭಿವೃದ್ಧಿಗೆ ಬೇರುಗಳಂತೆ ಭದ್ರವಾಗಿರುವವರು. ಇವರು ದೇಶ ಹಾಗೂ ಪ್ರಪಂಚಕ್ಕೆ ಧನಾತ್ಮಕ ಬದಲಾವಣೆಗಳನ್ನು ಆರಂಭಿಸಲು ಮೂಲಭೂತ ಮಟ್ಟದಲ್ಲಿ ಕೆಲಸ ಮಾಡುತ್ತಾರೆ. ಯಾವುದೇ ದೇಶಕ್ಕೆ ಕಾರ್ಮಿಕ ವರ್ಗದವರು ಬೆನ್ನೆಲುಬಾಗಿರುವುದು ಬಹಳ ಮುಖ್ಯ. ಆ ಕಾರಣಕ್ಕೆ ಕಾರ್ಮಿಕರ ಬಗ್ಗೆ ಸದಾ ದೇಶ ಹಾಗೂ ಜನರು ಗಮನ ಹರಿಸಬೇಕು. ಅವರ ಯೋಗಕ್ಷೇಮದ ನಿಗಾವಹಿಸಬೇಕು. ಅವರ ಸಮಸ್ಯೆಗಳಿಗೆ ಕಿವಿಯಾಗಬೇಕು ಎಂದರು ಈ ಸಂದರ್ಭದಲ್ಲಿ ಸಂಘದ ಪದಾಧಿಕಾರಿಗಳಾದ ಗುರುಮೂರ್ತಿ, ಜಾಂಬವ ಯುವ ಸೇನೆ ಸಂಘದ ಅಧ್ಯಕ್ಷ ನರೇಂದ್ರ, ನರಸಿಂಹಪ್ಪ, ಮಹೇಶ್, ಶ್ರೀನಿವಾಸ್, ವಿನೋದ್, ಗಣೇಶ್, ರಾಜೇಶ್ ಸೇರಿದಂತೆ ಮುಂತಾದವರು ಹಾಜರಿದ್ದರು.


ಉದಯವಾಹಿನಿ ಚಿತ್ರ

# ಹೀಟ್ ಸ್ಟ್ರೋಕ್' ಆತಂಕ: ಹಾಸಿಗೆ ಮೀಸಲು

• ಉದಯವಾಹಿನಿ, ತುಮಕೂರು

ಹೆಚ್ಚಿದ ಬಿಸಿಲಿನ ತಾಪಮಾನದ ಜತೆಗೆ ಬಿಸಿಗಾಳಿ ಜನರನ್ನು ಕಂಗೆಡಿಸಿದ್ದು, 'ಹೀಟ್ ಸ್ಟ್ರೋಕ್‌'ನ ಆತಂಕ ಶುರುವಾಗಿದೆ. ಪ್ರತಿ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರತ್ಯೇಕ ಹಾಸಿಗೆ ಮೀಸಲಿಡಲಾಗಿದೆ. ಜಿಲ್ಲೆಯಲ್ಲಿ ಕಳೆದ ಎರಡು ದಿನಗಳಿಂದ 40 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ.

ಉರಿ ಬಿಸಿಲಿನಿಂದ ತಪ್ಪಿಸಿಕೊಳ್ಳಲು ಜನರು ಪರದಾಡುತ್ತಿದ್ದಾರೆ. ಹೀಟ್ ಸ್ಟ್ರೋಕ್ ಪ್ರಕರಣಗಳು ಕಾಣಿಸಿಕೊಂಡರೆ ತಕ್ಷಣಕ್ಕೆ ಸ್ಪಂದಿಸಲು ಆಸ್ಪತ್ರೆಗಳಲ್ಲಿ ತಯಾರಿ ಮಾಡಿಕೊಳ್ಳಲಾಗಿದೆ. ಜಿಲ್ಲಾ ಆಸ್ಪತ್ರೆಯಲ್ಲಿ 5, ಆಯಾ ತಾಲ್ಲೂಕು ಆಸ್ಪತ್ರೆಗಳಲ್ಲಿ ತಲಾ 2 ಪ್ರತ್ಯೇಕ ಹಾಸಿಗೆಗಳನ್ನು ಕಾಯ್ದಿರಿಸಲಾಗಿದೆ.

ಹೆಚ್ಚಿದ ಬಿಸಿಲಿನಿಂದ ಜನರ ಆರೋಗ್ಯವೂ ಹದಗೆಟ್ಟಿದೆ. ಸರ್ಕಾರಿ, ಖಾಸಗಿ ಆಸ್ಪತ್ರೆಗಳ ಮುಂದೆ ಜನರು ಬೆಳಗ್ಗೆಯಿಂದಲೇ ಸಾಲುಗಟ್ಟಿ ನಿಲ್ಲುತ್ತಿದ್ದಾರೆ.


ಉದಯವಾಹಿನಿ ಚಿತ್ರ

**40 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲೆ**

'ಸದ್ಯಕ್ಕೆ ಯಾವುದೇ ಸಮಸ್ಯೆ ಇಲ್ಲ' ಎಂದು ಆರೋಗ್ಯ ಇಲಾಖೆ ಅಧಿಕಾರಿಗಳು ಹೇಳುತ್ತಿದ್ದಾರೆ. ಆದರೆ ಆಸ್ಪತ್ರೆಗೆ ಬರುವ ರೋಗಿಗಳ ಸಂಖ್ಯೆ ಮಾತ್ರ ಕಡಿಮೆಯಾಗುತ್ತಿಲ್ಲ. ಸುಸ್ತು, ತಲೆ ಸುತ್ತು ಬರುವುದು, ಕೆಲಸ ಮಾಡಲು ಆಗದಿರುವುದು, ಸ್ನಾಯು ಸೆಳೆತ, ಜ್ವರ ಸೇರಿದಂತೆ ಇತರೆ ಸಮಸ್ಯೆಗಳಿಂದ ಜನ ಬಳಲುತ್ತಿದ್ದಾರೆ. ಇದೇ ಸಮಸ್ಯೆ ಹೊತ್ತು ಆಸ್ಪತ್ರೆಗಳಿಗೆ ಬರುತ್ತಿದ್ದಾರೆ. ಸರತಿ ಸಾಲಿನಲ್ಲಿ ನಿಂತು ಚಿಕಿತ್ಸೆ ಪಡೆಯುತ್ತಿದ್ದಾರೆ.

> ಬಿಸಿಲಿನಿಂದ ಬೆವರುವುದು ಜಾಸ್ತಿಯಾಗುತ್ತದೆ. ಆರೋಗ್ಯ ಕಾಪಾಡಿಕೊಳ್ಳಲು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ದೇಹದಲ್ಲಿ ನೀರಿನ ಸಮತೋಲನ ಕಾಯ್ದುಕೊಳ್ಳಬೇಕು. ನೀರು ಹೆಚ್ಚು ಕುಡಿಯಬೇಕು. ಎಳನೀರು ಸೇವನೆಗೆ ಒತ್ತು ಕೊಡಬೇಕು. ಮಧ್ಯಾಹ್ನದ ಹೊತ್ತಿನಲ್ಲಿ ಹೊರಗಡೆ ಬರಬಾರದು. ತೆಳುವಾದ ಬಟ್ಟೆ ಧರಿಸಬೇಕು. ಸುಸ್ತು, ಜ್ವರದ ಲಕ್ಷಣ ಕಂಡು ಬಂದರೆ ತಕ್ಷಣ ಆಸ್ಪತ್ರೆಗೆ ಭೇಟಿ ನೀಡಿ ಚಿಕಿತ್ಸೆ ಪಡೆಯಬೇಕು' ಎಂದು ಜಿಲ್ಲಾ ಆಸ್ಪತ್ರೆ ವೈದ್ಯರೊಬ್ಬರು ಮಾಹಿತಿ ಹಂಚಿಕೊಂಡರು.

ಸದ್ಯಕ್ಕೆ ಯಾವುದೇ ಗಂಭೀರವಾದ ಪ್ರಕರಣಗಳು ಕಾಣಿಸಿಕೊಳ್ಳುತ್ತಿಲ್ಲ.

# ಕಾರ್ಮಿಕ ಹಕ್ಕುಗಳಿಗಾಗಿ ಹೋರಾಟ ಅಗತ್ಯವಿದೆ: ಸಿದ್ದಗಂಗಪ್ಪ

• ಉದಯವಾಹಿನಿ, ಬಾಗೇಪಲ್ಲಿ

ಸಮಾಜದ ಅಸಮಾನತೆಗೆ ಆಳುವ ವರ್ಗದ ಸರ್ಕಾರಗಳು ಕಂಟಕಪ್ರಾಯವಾಗಿವೆ. ಮುಂದಿನ ದಿನಗಳಲ್ಲಿ ರೈತ–ಕಾರ್ಮಿಕರು ಒಟ್ಟುಗೂಡಿ ಬಲಾಢ್ಯ ಚಳುವಳಿಯನ್ನು ಕಟ್ಟಬೇಕಾಗಿದೆ. ಕಾರ್ಮಿಕರ ತಮ್ಮ ಹಕ್ಕುಗಳಿಗಾಗಿ ನಿರಂತರ ಹೋರಾಟ ಅಗತ್ಯವಿದೆಯೆಂದು ಸಿಪಿಐಎಂ ಪಕ್ಷದ ಜಿಲ್ಲಾ ಕಾರ್ಯದರ್ಶಿ ಸಿದ್ದಗಂಗಪ್ಪ ಹೇಳಿದರು.

ಅವರು ಪಟ್ಟಣದ ಸುಂದರಯ್ಯ ಭವನದಲ್ಲಿ ಸಿಐಟಿಯು, ಕರ್ನಾಟಕ ಪ್ರಾಂತ್ಯ ಕೂಲಿ ಕಾರ್ಮಿಕರ ಸಂಘ, ಮಸಣ ಕಾರ್ಮಿಕರ ಸಂಘ, ದಲಿತ ಹಕ್ಕುಗಳ ಸಮಿತಿ ಹಾಗೂ ಸಿಪಿಐಎಂ ಪಕ್ಷದ ವತಿಯಿಂದ ಏರ್ಪಡಿಸಿದ್ದ ಸಮಾರಂಭದಲ್ಲಿ ಮಾತನಾಡಿದರು ಕೇಂದ್ರ ಸರಕಾರದ ನವ ಉದಾರೀಕರಣ ನೀತಿಯಿಂದ 1948 ರಲ್ಲಿ ಕಾರ್ಮಿಕರಿಗಾಗಿ ರಚಿಸಲಾಗಿದ್ದ 44 ಕಾನೂನುಗಳ ಸಡಿಲಗೊಳಿಸಿ ಕಾರ್ಮಿಕರ ಹಕ್ಕುಗಳನ್ನು ಇಲ್ಲದಾಗಿಸಲು ನಿರಂತರ ಯತ್ನ ನಡೆಯುತ್ತಿದೆ. ಇದರಿಂದ ಖಾಯಂ ಕೆಲಸ, ಕೆಲಸದ ಅವಧಿ, ಸಂಘ ಕಟ್ಟಿಕೊಳ್ಳುವ ಹಕ್ಕು, ಮುಷ್ಕರದ ಹಕ್ಕು ಹಾಗು ಕೆಲಸಕ್ಕೆ ತಕ್ಕ ವೇತನ ದಂತಹ ಹಕ್ಕುಗಳನ್ನು ಬಹಳಷ್ಟು ಕಾರ್ಮಿಕರು ಕಳೆದುಕೊಳ್ಳಲಿದ್ದಾರೆ ಎಂದರು.

ಸಿಪಿಐಎಂ ಪಕ್ಷದ ನಾಯಕ ಎಂ.ಪಿ.ಮುನಿ ವೆಂಕಟಪ್ಪ ಮಾತನಾಡಿ ಅಸಂಘಟಿತ ವಲಯದಲ್ಲಿ ಗುರುತಿಸಿಕೊಂಡಿರುವ ಅಂಗನವಾಡಿ, ಪಂಚಾಯಿತಿ, ಕಟ್ಟಡ, ಬಿಸಿಯೂಟ, ಆಶಾ, ಹಮಾಲಿ, ಪೌರ ಕಾರ್ಮಿಕ, ಆಟೋ, ಗುತ್ತಿಗೆ ಕಾರ್ಮಿಕರು ನಿರಂತರವಾಗಿ ಜನತೆಯ ಸೇವೆ ಸಲ್ಲಿಸುತ್ತಿದ್ದರೂ ಸರ್ಕಾರದಿಂದ ನಿರ್ಲಕ್ಷ್ಯಕ್ಕೊಳಗಾಗಿದ್ದಾರೆ ಎಂದರು.


ಉದಯವಾಹಿನಿ ಚಿತ್ರ

ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕೆಂಬ ಸುಪ್ರೀಂ ಕೋರ್ಟ್ ತೀರ್ಪನ್ನು ಈವರೆಗೂ ರಾಜ್ಯ ಸರಕಾರ ಜಾರಿ ಮಾಡದೇ ಕಾರ್ಮಿಕರನ್ನು ನಿರ್ಲಕ್ಷಿಸುತ್ತಿದೆ ಎಂದರು. ಹಾಗಾಗಿ ಕಾರ್ಮಿಕ ವರ್ಗವೆಲ್ಲಾ ಒಗ್ಗಟ್ಟಾಗಿ ಹೋರಾಟದ ಮೂಲಕ ತಮ್ಮ ಹಕ್ಕುಗಳನ್ನು ಪಡೆದುಕೊಳ್ಳುವುದು ಅನಿವಾರ್ಯವಾಗಿದ್ದು ಎಲ್ಲರೂ ಸಂಘಟಿತರಾಗಿ ಹೋರಾಟಕ್ಕೆ ಸಜ್ಜಾಗಬೇಕು ಎಂದರು. ಆದ್ದರಿಂದ ಕಾರ್ಮಿಕರ ಕನಿಷ್ಠ ವೇತನ, ಕಾರ್ಮಿಕರ ಭದ್ರತೆ, ಕಾರ್ಮಿಕರ ಯೋಜನೆಗಳು ಹಾಗೂ ಕಾರ್ಮಿಕರ ಪರ ಕಾನೂನಿನಗಳಗಾಗಿ ಹೋರಾಟ ಅಗತ್ಯ ಎಂದು ಹೇಳಿದರು. ಈ ಸಂದರ್ಭದಲ್ಲಿ ಸಿಪಿಐಎಂ ಪಕ್ಷದ ಜಿಲ್ಲಾ ನಾಯಕರಾದ ಮುನಿ ಕೃಷ್ಣಪ್ಪ, ಸಾವಿತ್ರಮ್ಮ, ವಾಲ್ಮೀಕಿ ಅಶ್ವಥಪ್ಪ, ನಾಗರಾಜು, ಜಿ.ಕೃಷ್ಣಪ್ಪ, ಮುನಿಯಪ್ಪ, ಚನ್ನರಾಯಪ್ಪ, ಹಾಗೂ ವಿವಿಧ ಕಾರ್ಮಿಕರ ಸಂಘಟನೆಯ ಪದಾಧಿಕಾರಿಗಳು ಹಾಗೂ ಸಿಪಿಐಎಂ ಪಕ್ಷದ ಕಾರ್ಯಕರ್ತರು ಹಾಜರಿದ್ದರು.

> ಕೇಂದ್ರ ಹಾಗು ರಾಜ್ಯ ಸರಕಾರ ಕಾರ್ಪೊರೇಟ್ ಹಾಗು ಬಂಡವಾಳ ಶಾಹಿಗಳ ಪರ ಕಾನೂನುಗಳನ್ನು ರೂಪಿಸುವ ಮೂಲಕ ಬ್ರಿಟೀಷ್ ಆಳ್ವಿಕೆಯಲ್ಲಿದ್ದ ಕಾರ್ಮಿಕ ಕಾನೂನುಗಳಂತೆ ರೂಪಿಸುತ್ತಿದ್ದು ಇದರಿಂದ ದೇಶದ ಸಂಘಟಿತ ಹಾಗು ಅಸಂಘಟಿತ ಕಾರ್ಮಿಕರಿಗೆ ಗಂಡಾಂತರ ಕಾದಿದೆ ಎಂದರು.
> — ಡಾ.ಅನಿಲ್ ಕುಮಾರ್ ಅವುಲಪ್ಪ

# ತಾಲ್ಲೂಕಿನ ನಾಗಲಮಡಿಕೆಯಲ್ಲಿ ಮೇವು ಬ್ಯಾಂಕ್ ಮೇಲೆ ಹೆಚ್ಚಿದ ಒತ್ತಡ

## ■ ಇತರೆಡೆ ಮೇವು ಬ್ಯಾಂಕ್, ಗೋಶಾಲೆ ಆರಂಭಿಸುವಂತೆ ರೈತರು ಒತ್ತಾಯ, ಮೇವು ಬ್ಯಾಂಕ್‌ಗೆ ಚಾಲನೆ

• ಉದಯವಾಹಿನಿ, ಪಾವಗಡ

ತಾಲ್ಲೂಕಿನ ನಾಗಲಮಡಿಕೆ ಮೇವು ಬ್ಯಾಂಕಿನ ಮೇಲೆ ದಿನದಿಂದ ದಿನಕ್ಕೆ ಒತ್ತಡ ಹೆಚ್ಚುತ್ತಿದೆ. ಇತರೆಡೆ ಮೇವು ಬ್ಯಾಂಕ್, ಗೋಶಾಲೆ ಆರಂಭಿಸುವಂತೆ ರೈತರು ಒತ್ತಾಯಿಸುತ್ತಿದ್ದಾರೆ. ತಾಲ್ಲೂಕಿನ ನಾಗಲಮಡಿಕೆಯಲ್ಲಿ ಏಪ್ರಿಲ್ 5ರ ಶುಕ್ರವಾರ ಮೇವು ಬ್ಯಾಂಕ್‌ಗೆ ಚಾಲನೆ ನೀಡಲಾಗಿದೆ.

ಆರಂಭದಲ್ಲಿ 40 ರಿಂದ 50 ಮಂದಿ ರೈತರು ಮೇವು ಖರೀದಿಸುತ್ತಿದ್ದರು. ಆದರೆ ಬಿಸಿಲಿನ ತಾಪಮಾನ ಹೆಚ್ಚುತ್ತಿರುವುದರಿಂದ ಎಲ್ಲೂ ಮೇವು ಸಿಗುತ್ತಿಲ್ಲ. ಮೇವಿನ ಅಭಾವದ ಕಾರಣ ತಾಲ್ಲೂಕಿನ ಮೂಲೆ ಮೂಲೆಯಿಂದ ನಾಗಲಮಡಿಕೆಗೆ ಆಗಮಿಸಿ ನೂರಾರು ರೈತರು ನಿತ್ಯ ಮೇವು ಖರೀದಿಸುತ್ತಿದ್ದಾರೆ.

ನಿಡಗಲ್, ಕಸಬಾ, ವೈಎನ್ ಹೊಸಕೋಟೆ ಗಡಿ ಭಾಗದ ರೈತರಿಗೆ ಮೇವು ಸಾಗಿಸುವ ವೆಚ್ಚ ಹೆಚ್ಚುತ್ತಿದೆ. 1 ಕೆ.ಜಿ ಮೇವಿಗೆ ರೂ.2 ನೀಡಬೇಕು. ಮೇವು ಸಾಗಣೆಗೆ ಸಾವಿರಾರು ರೂ ಖರ್ಚು ಮಾಡಬೇಕಿದೆ. ಜಾನುವಾರುಗಳ ಜೀವ ಉಳಿಸಲು ರೈತರು ಸಾಲ ಮಾಡಿ ಮೇವು ಖರೀದಿಸುವ ಅನಿವಾರ್ಯ ಸ್ಥಿತಿಯಲ್ಲಿದ್ದಾರೆ.

ಈ ಹಿಂದಿನ ವರ್ಷಗಳಿಗಿಂತಲೂ ತೀವ್ರ ಬರ ತಾಲ್ಲೂಕಿನ ರೈತರ ನಿದ್ದೆ ಕೆಡಿಸಿದೆ. ಮಳೆಗಾಲದವರೆಗೆ ಕುರಿ, ಮೇಕೆ, ಜಾನುವಾರುಗಳ ಜೀವ ಕಾಪಾಡಲು ಶಕ್ತಿ ಮೀರಿ ಪ್ರಯತ್ನಿಸುತ್ತಿದ್ದಾರೆ.

ಒಂದೆರಡು ದಿನಗಳಲ್ಲಿ ವೈಎನ್ ಹೊಸಕೋಟೆಯಲ್ಲಿ ಮೇವು ಬ್ಯಾಂಕ್ ಆರಂಭಿಸಲಾಗುವುದು. ಈಗಾಗಲೆ ಯಾವ ಸ್ಥಳದಲ್ಲಿ ಬ್ಯಾಂಕ್ ಆರಂಭಿಸಬೇಕು ಎಂದು ಸ್ಥಳ ಪರಿಶೀಲನೆ ನಡೆಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಮೇವಿಲ್ಲದೆ ಜಾನುವಾರು ಸಾಯುವ ಮುನ್ನ ನಿಡಗಲ್, ಕಸಬ ಹೋಬಳಿಯಲ್ಲಿಯೂ ಮೇವು ಬ್ಯಾಂಕ್ ಆರಂಭಿಸಬೇಕು ಎಂಬುದು ರೈತರ ಒತ್ತಾಯವಾಗಿದೆ.

ಗ್ರಾಮ ಪಂಚಾಯಿತಿ ಹಂತದಲ್ಲಿ ಮೇವು ಬ್ಯಾಂಕ್ ಆರಂಭಿಸಿದಲ್ಲಿ ಸಾಗಣೆ ವೆಚ್ಚ ಕಡಿಮೆಯಾಗುತ್ತದೆ. ಕನಿಷ್ಠ ಇಬ್ಬರು ಸಿಬ್ಬಂದಿ ಮೇವು ಬ್ಯಾಂಕ್ ನಿರ್ವಹಿಸಬಹುದು. ಆಯಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮೇವು ಖರೀದಿಸಲು ರೈತರಿಗೆ ಅನುಕೂಲವಾಗುತ್ತದೆ ಎಂದು ಕೆಂಚಗಾನಹಳ್ಳಿ ರೈತ ಬಿ.ವಿ ನರೇಂದ್ರ ಹೇಳಿದರು.

ಜಾನುವಾರುಗಳಿಗಾಗಿ ಮೇವು ಖರೀದಿಸುವ ರೈತರಿಗೆ ತಾಲ್ಲೂಕು ಆಡಳಿತ, ಊಟ, ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು ಎಂದು ರೈತ ಮುಖಂಡ ಪಳವಳ್ಳಿ ವೇಣುಗೋಪಾಲ್ ಒತ್ತಾಯಿಸಿದರು. ತಾಲ್ಲೂಕಿನಲ್ಲಿ ಕೇವಲ ಒಂದು ಮೇವು ಬ್ಯಾಂಕ್ ಆರಂಭಿಸಿ ರುವುದರಿಂದ ಒತ್ತಡ ಹೆಚ್ಚಿದೆ. ತಾಲ್ಲೂಕಿನ ಇತರೆಡೆ ಮೇವು ಬ್ಯಾಂಕ್ ಆರಂಭಿಸಿ ಜಾನುವಾರುಗಳ ಜೀವ ಉಳಿಸಬೇಕು ಎಂದು ತಿಮ್ಮಮ್ಮನಹಳ್ಳಿಯ ಯರರಿಸ್ವಾಮಿ ಹೇಳಿದರು.


ಉದಯವಾಹಿನಿ ಚಿತ್ರ

**ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ**

### ಪಟ್ಟಣದಲ್ಲಿ ಮೇವು ಬ್ಯಾಂಕ್ ಆರಂಭಿಸುವಂತೆ ಆಗ್ರಹ

ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣದಲ್ಲಿ ಮೇವು ಬ್ಯಾಂಕ್ ಆರಂಭಿಸಿದರೆ ರೈತರಿಗೆ ಅನುಕೂಲವಾಗಲಿದೆ. ಪಟ್ಟಣಕ್ಕೆ ಹೊಂದಿಕೊಂಡಿರುವ 4 ಹೋಬಳಿಗಳ ರೈತರಿಗೆ ಮೇವು ಸಾಗಿಸಲು ಅನುಕೂಲವಾಗುತ್ತದೆ. ಪಟ್ಟಣಕ್ಕೆ ತರಕಾರಿ, ಹೂ, ಕೃಷಿ ಉತ್ಪನ್ನಗಳನ್ನು ಮಾರಾಟಕ್ಕಾಗಿ ತರಲಾಗುತ್ತದೆ. ಹಿಂದಿರುಗುವಾಗ ರೈತರು ಖಾಲಿ ವಾಹನಗಳಲ್ಲಿ ಮೇವು ಕೊಂಡೊಯ್ಯಬಹುದು. ವಿವಿಧ ಇಲಾಖೆಗಳ ಅಧಿಕಾರಿಗಳು ತಾಲ್ಲೂಕು ಕೇಂದ್ರದಲ್ಲಿ ಇರುವುದರಿಂದ ನಿರ್ವಹಣೆಯೂ ಸುಲಭ ಸಾಧ್ಯ. ಶೀಘ್ರ ಪಟ್ಟಣದಲ್ಲಿ ಮೇವು ಬ್ಯಾಂಕ್ ಆರಂಭಿಸಬೇಕು ಎಂಬುದು ರೈತರು ಒತ್ತಾಯಿಸಿದ್ದಾರೆ.


> ಕಸಬಾ ಹೋಬಳಿಯ ಗೌಡೇಟಿ, ದೊಮ್ಮತಮರಿ ಸೇರಿದಂತೆ ಈ ಭಾಗದ ರೈತರು ನಾಗಲಮಡಿಕೆಗೆ ಹೋಗಿ ಮೇವು ಖರೀದಿಸಲು ವಾಹನಗಳಿಗೆ ಕನಿಷ್ಠ ರೂ. 3 ರಿಂದ ರೂ.4 ಸಾವಿರ ನೀಡಬೇಕು. ಹೀಗಾಗಿ ಈ ಭಾಗದಲ್ಲಿ ಶೀಘ್ರ ಮೇವು ಬ್ಯಾಂಕ್ ಆರಂಭಿಸಬೇಕು ಎಂದು ಒತ್ತಾಯಿಸಿದರು.
> — ರೈತ ಗೋವಿಂದಪ್ಪ

# ಮಿನಿ ನ್ಯೂಸ್

## ಸುಗ್ಗನಹಳ್ಳಿ ಲಕ್ಷ್ಮಿ ನರಸಿಂಹಸ್ವಾಮಿ ದೊಡ್ಡ ಗರುಡೋತ್ಸವ

• ಉದಯವಾಹಿನಿ, ಮಾಗಡಿ

ತಾಲ್ಲೂಕಿನ ಸುಗ್ಗನಹಳ್ಳಿ ಲಕ್ಷ್ಮಿ ನರಸಿಂಹಸ್ವಾಮಿ ದೊಡ್ಡ ಗರುಡೋತ್ಸವ ಬುಧವಾರ ವೈಭವದಿಂದ ನಡೆಯಿತು. ರಥದ ಮೇಲೆ ದೊಡ್ಡ ಗರುಡದೇವರ ಕಂಚಿನ ಪುತ್ಥಳಿಯೊಂದಿಗೆ ನರಸಿಂಹ ಸ್ವಾಮಿ ಉಭಯ ಅಮ್ಮನವರ ಸಹಿತ ಅಲಂಕೃತ ಉತ್ಸವ ಮೂರ್ತಿಗಳನ್ನು ಅಲಂಕರಿಸಲಾಗಿತ್ತು. ಶಾಸಕ ಎಚ್.ಸಿ.ಬಾಲಕೃಷ್ಣ ಲಕ್ಷ್ಮಿ ನರಸಿಂಹಸ್ವಾಮಿ ಮೂಲ ದೇವರಿಗೆ ಪೂಜೆ ಸಲ್ಲಿಸಿದರು. ನಂತರ ದೊಡ್ಡ ಗರುಡೋತ್ಸವಕ್ಕೆ ಚಾಲನೆ ನೀಡಿದರು. ಈ ವೇಳೆ ಮುಖಂಡರಾದ ಜಯಶಂಕರ್, ಸಾರಂಗಪಾಣಿ, ಕೃಷ್ಣಪ್ಪ, ಗ್ರಾಮ ಪಂಚಾಯಿತಿ ಸದಸ್ಯ ಮಹದೇವಯ್ಯ, ಭಕ್ತಾಧಿಗಳು ಇದ್ದರು.


ಉದಯವಾಹಿನಿ ಚಿತ್ರ

## ದೇವರ ವಾರ್ಷಿಕ ಮಹೋತ್ಸವ ಸಂಪನ್ನ

• ಉದಯವಾಹಿನಿ, ಶನಿವಾರಸಂತೆ

ಇಲ್ಲಿಗೆ ಸಮೀಪದ ಮಾಲಂಬಿ ಗ್ರಾಮದ ಮಲ್ಲಿಕಾರ್ಜುನಸ್ವಾಮಿ, ಬಸವಣ್ಣ ದೇವರು ಮತ್ತು ಕನ್ನಂಬಾಡಿ ಅಮ್ಮ ದೇವರ ವಾರ್ಷಿಕೋತ್ಸವ ಮಂಗಳವಾರ ಸಂಪನ್ನಗೊಂಡಿತು. ವಾರ್ಷಿಕ ಪೂಜಾ ಮಹೋತ್ಸವದ ಅಂಗವಾಗಿ ಸೋಮವಾರದಿಂದಲೇ ವಿವಿಧ ಧಾರ್ಮಿಕ ಕೈಂಕರ್ಯಗಳು ಆರಂಭಗೊಂಡಿದ್ದವು. ಬೆಳಿಗ್ಗೆ 9 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಗ್ರಾಮದ ದೇವಸ್ಥಾನಗಳಲ್ಲಿ ವಿವಿಧ ಪೂಜಾ ವಿಧಿ ವಿಧಾನಗಳನ್ನು ನೆರವೇರಿಸಲಾಯಿತು.


ಉದಯವಾಹಿನಿ ಚಿತ್ರ

ಸಂಜೆ 7 ಗಂಟೆಗೆ ದೇವಸ್ಥಾನಗಳಲ್ಲಿ ಆರತಿಯೊಂದಿಗೆ ದೇವರ ಮೂರ್ತಿಗಳನ್ನು ಗಂಗಾಸ್ನಾನ ವಾದ್ಯಗೋಷ್ಠಿ, ಕುಂಭ ಮೆರವಣಿಗೆಯೊಂದಿಗೆ ಕೊಂಡೊಯ್ಯಲಾಯಿತು. ಮಲ್ಲಿಕಾರ್ಜುನ ಸ್ವಾಮಿ ಮತ್ತು ಬಸವಣ್ಣ ದೇವಸ್ಥಾನದಲ್ಲಿ ದೇವರಿಗೆ ವಿಶೇಷ ಪೂಜೆಯನ್ನು ನೆರವೇರಿಸಿದ ಬಳಿಕ ರಾತ್ರಿಯಿಂದ ಮಂಗಳವಾರ ಬೆಳಗ್ಗೆಯವರೆಗೂ ದೇವರ ಉತ್ಸವವನ್ನು ನಡೆಸಲಾಯಿತು. ಮಂಗಳವಾರ ಬೆಳಿಗ್ಗೆ 8.30ರಿಂದ ಕನ್ನಂಬಾಡಿ ಅಮ್ಮನವರ ದೇವಸ್ಥಾನದಲ್ಲಿ ಕನ್ನಂಬಾಡಿ ಅಮ್ಮನವರಿಗೆ ವಿಶೇಷ ಪೂಜೆ ನೆರವೇರಿಸಲಾಯಿತು. ಮಹಾ ಮಂಗಳಾರತಿ, ಭಕ್ತಾದಿಗಳಿಗೆ ಪ್ರಸಾದ ವಿನಿಯೋಗದೊಂದಿಗೆ ವಾರ್ಷಿಕ ಪೂಜಾ ಮಹೋತ್ಸವ ಸಂಪನ್ನಗೊಂಡಿತು. ಪೂಜಾ ಮಹೋತ್ಸವದಲ್ಲಿ ಗ್ರಾಮ ಸೇರಿದಂತೆ ಅಕ್ಕಪಕ್ಕದ ಗ್ರಾಮಗಳಿಂದ ನೂರಾರು ಭಕ್ತರು ಪಾಲ್ಗೊಂಡಿದ್ದರು. ದೇವಸ್ಥಾನ ಸಮಿತಿ ಭಕ್ತರಿಗೆ ಅನ್ನಸಂತರ್ಪಣೆ ಏರ್ಪಡಿಸಿತ್ತು.

## ಹಳೆ ದ್ವೇಷ ರಾಗಿ ಮೆದೆಗೆ ಬೆಂಕಿ

• ಉದಯವಾಹಿನಿ, ಕನಕಪುರ

ರಾಗಿ ಬೆಳೆ ಕಟಾವು ಮಾಡಿ ಒಕ್ಕಣೆ ಮಾಡಿದ್ದ ಹುಲ್ಲಿನ ಮೆದೆಗೆ ದುಷ್ಕರ್ಮಿಗಳು ಜಮೀನು ವ್ಯಾಜ್ಯದ ದ್ವೇಷದಿಂದ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿರುವ ಘಟನೆ ತಾಲ್ಲೂಕಿನ ಸಾತನೂರು ಹೋಬಳಿ ಹೊಸಕಬ್ಬಾಳು ಗ್ರಾಮದಲ್ಲಿ ನಡೆದಿದೆ.

ಗ್ರಾಮದ ನಿಂಗಣ್ಣ ಅವರಿಗೆ ಸೇರಿದ ಹುಲ್ಲಿನ ಮೆದೆ ನಾಶವಾಗಿದೆ. ದುಷ್ಕರ್ಮಿಗಳು ಪೆಟ್ರೋಲ್ ಸುರಿದು ಬೆಂಕಿಹಚ್ಚಿ ಸುಟ್ಟು ಹಾಕಿರುವುದರಿಂದ ರೂ.35 ಸಾವಿರ ನಷ್ಟವಾಗಿದೆ. ಕಿಟ್ಟಪ್ಪನದೊಡ್ಡಿ ಕಾಂತರಾಜು, ಅಭಿ, ಕನ್ನೇಗೌಡ ಎಂಬುವರು ಜಮೀನು ವ್ಯಾಜ್ಯಕ್ಕೆ ಸಂಬಂಧಿಸಿದಂತೆ ಹಳೆ ದ್ವೇಷದಿಂದ ಹುಲ್ಲಿನ ಮೆದೆಗೆ ಬೆಂಕಿ ಹಾಕಿಸಿದ್ದಾರೆ. ಅವರ ವಿರುದ್ಧ ಕಾನೂನು ಕ್ರಮಕೈಗೊಳ್ಳಬೇಕೆಂದು ದೂರಿನಲ್ಲಿ ತಿಳಿಸಿದ್ದಾರೆ.ಸಾತನೂರು ಪೊಲೀಸರು ಪ್ರಕರಣ ದಾಖಲಿಸಿಕೊಂಡಿಸಿಕೊಂಡಿದ್ದಾರೆ.

## ದಾಟಿತು 38 ಡಿಗ್ರಿ ತಾಪಮಾನ


• ಉದಯವಾಹಿನಿ, ಮಡಿಕೇರಿ

ರಾಜ್ಯದ ಇತರೆ ಜಿಲ್ಲೆಗಳಂತೆ ಕೊಡಗಿನಲ್ಲೂ ತಾಪಮಾನ ಹೆಚ್ಚುತ್ತಿದೆ. ತಂಪು ಜಿಲ್ಲೆ ಎಂಬ ಖ್ಯಾತಿ ತೆರೆಮರೆಗೆ ಸರಿಯುತ್ತಿದ್ದು, ಬೇಸಿಗೆಯ ಬಿಸಿಯಲ್ಲಿ ಜನರು ಬಸವಳಿಯುತ್ತಿದ್ದಾರೆ. ಏಪ್ರಿಲ್ 29ರ ಬೆಳಿಗ್ಗೆ 8.30ರಿಂದ ಏಪ್ರಿಲ್ 30ರ ಬೆಳಿಗ್ಗೆ 8.30ತರ ಅವಧಿಯಲ್ಲಿ ಕೊಡಗಿನಲ್ಲಿ ದಾಖಲಾದ ಗರಿಷ್ಠ ತಾಪಮಾನ ಬರೋಬರಿ 38.6. ಕನಿಷ್ಠ ತಾಪಮಾನ 23.5. ಇತ್ತೀಚಿನ ವರ್ಷಗಳಲ್ಲಿ ಇಷ್ಟು ಹೆಚ್ಚಿನ ತಾಪಮಾನ ದಾಖಲಾಗಿರಲಿಲ್ಲ. ಮುಂದಿನ ಕೆಲವು ದಿನಗಳಲ್ಲೂ ತಾಪಮಾನ ಇಳಿಕೆಯಾಗುವ ಸೂಚನೆಗಳು ಇಲ್ಲ. ಬಿಸಿಗಾಳಿ ಹಾಗೂ ಒಣಹವೆಯ ವಾತಾವರಣವೇ ಮುಂದುವರಿಯುವುದರಿಂದ ತಾಪಮಾನ ಇನ್ನಷ್ಟು ಏರಿಕೆಯಾಗುವ ಸಂಭವಗಳೇ ಅಧಿಕ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

## ಪ್ರಜ್ವಲ್ ರೇವಣ್ಣ ಪ್ರಕರಣ: ಪ್ರತಿಕ್ರಿಯೆಗೆ ನಿರಾಕರಿಸಿದ ಡಾ. ಮಂಜುನಾಥ್

• ಉದಯವಾಹಿನಿ, ರಾಮನಗರ

ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪ ಎದುರಿಸುತ್ತಿರುವ ಹಾಸನ ಸಂಸದ ಪ್ರಜ್ವಲ್ ರೇವಣ್ಣ ಪ್ರಕರಣ ಕುರಿತು, ಪ್ರತಿಕ್ರಿಯೆ ನೀಡಲು ಬಿಜೆಪಿ ಅಭ್ಯರ್ಥಿ ಡಾ. ಸಿ.ಎನ್. ಮಂಜುನಾಥ್ ನಿರಾಕರಿಸಿದರು. ನಗರದ ಸರ್ಕಾರಿ ಎಂಜಿನಿಯರಿಂಗ್ ಕಾಲೇಜಿನಲ್ಲಿರುವ ಸ್ಟ್ರಾಂಗ್ ರೂಂಗೆ ಮಂಗಳವಾರ ಭೇಟಿ ನೀಡಿದ ನಂತರ ಸುದ್ದಿಗಾರರು ಕೇಳಿದ ಪ್ರಶ್ನೆಗೆ, ಬಗ್ಗೆ ನಾನು ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ' ಎಂದರು. ಚುನಾವಣೆಯಲ್ಲಿ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರು ಹುರುಪಿನಿಂದ ಕೆಲಸ ಮಾಡಿದ್ದಾರೆ. ಯಾವುದೇ ಪ್ರತಿಫಲಾಪೇಕ್ಷೆಯಿಲ್ಲದೆ ಸ್ವಯಂ ಪ್ರೇರಣೆಯಿಂದ ನನ್ನ ಪರ ಶ್ರಮಿಸಿದ್ದಾರೆ. ಮತದಾನ ಮುಗಿದ ಬಳಿಕ ಕ್ಷೇತ್ರದ ವಿವಿಧೆಡೆಗೆ ಭೇಟಿ ನೀಡಿದಾಗ, ಅವರ ನೀಡಿರುವ ಪ್ರತಿಕ್ರಿಯೆಯು ನನ್ನ ಗೆಲುವಿನ ಆತ್ಮವಿಶ್ವಾಸವನ್ನು ಇಮ್ಮಡಿಗೊಳಿಸಿದೆ' ಎಂದರು. ನಗರ ಪ್ರದೇಶವಷ್ಟೇ ಅಲ್ಲದೆ ಗ್ರಾಮೀಣ ಭಾಗದಲ್ಲಿ ನನ್ನ ಪರ ಉತ್ತಮ ಅಲೆ ಇತ್ತು. ಅದೆಲ್ಲವೂ ಮತಗಳಾಗಿ ಬದಲಾಗಿವೆ. ಸ್ಥಳೀಯ ಮತದಾರರು, ಮುಖಂಡರು ಸಹ ಈ ವಿಷಯವನ್ನು ಹೆಮ್ಮೆಯಿಂದ ಹೇಳುತ್ತಿದ್ದಾರೆ. ಈ ಸಲದ ಚುನಾವಣೆಯಲ್ಲಿ ಮತದಾನ ಪ್ರಮಾಣ ಶೇ 2.5ರಷ್ಟು ಹೆಚ್ಚಾಗಿದೆ. ಮತ ಪ್ರಮಾಣ ಹೆಚ್ಚಾಗಬೇಕಾದರೆ ಚುನಾವಣಾ ಆಯೋಗವು ವಾರಂತ್ಯದ ಬದಲು, ವಾರದ ದಿನಗಳಲ್ಲೇ ಮತದಾನ ದಿನ ನಿಗದಿಪಡಿಸಬೇಕು' ಎಂದು ಅಭಿಪ್ರಾಯಪಟ್ಟರು.



# ಅಂತರಾಳದಿಂದ.. EDITORIAL

## ಕೋವಿಶೀಲ್ಡ್ ಲಸಿಕೆಯ ಅಡ್ಡ ಪರಿಣಾಮ ಆತಂಕಕಾರಿ

ಕೋವಿಡ್ ನಂತರದ ದಿನಗಳಲ್ಲಿ ಯುವಜನರಲ್ಲಿಯೂ ವಿವರಿಸಲಾಗದ ತೀವ್ರ ಅಸ್ವಸ್ಥತೆ, ಹೃದಯಸ್ತಂಭನ ಮುಂತಾದವುಗಳು ಕಂಡುಬಂದಿವೆ. ಭಾರತದಲ್ಲಿಯೂ ಹಲವಾರು ಪ್ರಕರಣಗಳು ನಡೆದಿದ್ದು, ಕೋವಿಡ್ ಹಾಗೂ ಅದರ ಲಸಿಕೆಯ ಬಗ್ಗೆ ಅನುಮಾನ ಮೂಡಿಸಿದ್ದವು. ಕಳೆದ ವರ್ಷ ಕೇಂದ್ರ ಸರ್ಕಾರ, ''ಕೊರೊನಾ ವೇಳೆ ಸಾವು ಗೆದ್ದು ಬಂದವರು ಜಾಸ್ತಿ ಕೆಲಸ ಮಾಡಬಾರದು'' ಎಂದು ಸೂಚಿಸಿತ್ತು. ಕೊರೊನಾ ಸೋಂಕು ಎದುರಿಸಲು ನಾವು ನೀವೆಲ್ಲ ತೆಗೆದುಕೊಂಡ ಕೋವಿಶೀಲ್ಡ್ ಲಸಿಕಅಡ್ಡ ಪರಿಣಾಮವನ್ನು ಹೊಂದಿದೆ ಎಂದು ಸ್ವತಃ ಅದನ್ನು ತಯಾರಿಸಿದ ಕಂಪನಿಯೇ ಇದೀಗ ಒಪ್ಪಿಕೊಂಡಿದೆ. ಇದರೊಂದಿಗೆ, ಕೊರೊನಾ ನಂತರದ ದಿನಗಳ ಅಸ್ವಸ್ಥತೆ, ಹೃದಯಾಘಾತಗಳ ಬಗ್ಗೆ ಮೂಡಿದ್ದ ಆತಂಕಕ್ಕೆ ಇನ್ನಷ್ಟು ಆಧಾರ ದೊರೆತಿದೆ. ಬ್ರಿಟಿಷ್ ಫಾರ್ಮಾ ದೈತ್ಯ ಅಸ್ಟ್ರಾಜೆನೆಕಾ ತನ್ನ ಕೋವಿಡ್ ಲಸಿಕೆ ಕೋವಿಶೀಲ್ಡ್ ಅಪರೂಪವಾಗಿ ಅಡ್ಡ ಪರಿಣಾಮವನ್ನು ಉಂಟುಮಾಡಬಹುದು ಎಂದು ನ್ಯಾಯಾಲಯದಲ್ಲಿ ಒಪ್ಪಿಕೊಂಡಿದೆ. ರಕ್ತ ಹೆಪ್ಪುಗಟ್ಟುವಿಕೆ ಮತ್ತು ರಕ್ತದಲ್ಲಿ ಪ್ಲೇಟ್‌ಲೆಟ್ ಕಡಿಮೆಯಾಗುವ ಪರಿಸ್ಥಿತಿಯನ್ನು ಉಂಟುಮಾಡಬಹುದು ಎಂದು ಲಸಿಕೆ ತಯಾರಕರು ಹೇಳಿದ್ದಾರೆ. ಆದರೆ ಇದು ಅಪರೂಪದ ಸಂದರ್ಭಗಳಲ್ಲಿ ಆಗಬಹುದು ಎಂದಿದ್ದಾರೆ.

ಸಾಂಕ್ರಾಮಿಕ ಸಮಯದಲ್ಲಿ ಅಸ್ಟ್ರಾಜೆನೆಕಾ ಮತ್ತು ಆಕ್ಸ್‌ಫರ್ಡ್ ವಿಶ್ವವಿದ್ಯಾನಿಲಯದಿಂದ ಅಭಿವೃದ್ಧಿಪಡಿಸಲಾದ ಕೋವಿಶೀಲ್ಡ್ ಅನ್ನು ಸೀರಮ್ ಇನ್‌ಸ್ಟಿಟ್ಯೂಟ್ ಆಫ್ ಇಂಡಿಯಾ ಉತ್ಪಾದಿಸಿತ್ತು. ಭಾರತದಲ್ಲಿ ವ್ಯಾಪಕವಾಗಿ ಬಳಕೆಯಾದ ಲಸಿಕೆ ಇದೇ ಆಗಿದೆ. ಅಸ್ಟ್ರಾಜೆನೆಕಾ ಯುಕೆಯಲ್ಲಿ ತನ್ನ ಲಸಿಕೆಯು ಹಲವಾರು ಪ್ರಕರಣಗಳಲ್ಲಿ ಸಾವುಗಳು ಮತ್ತು ತೀವ್ರ ಅಸ್ವಸ್ಥತೆಗೆ ಕಾರಣವಾಯಿತು ಎಂಬ ಆರೋಪದ ಮೇಲೆ ಮೊಕದ್ದಮೆಯನ್ನು ಎದುರಿಸುತ್ತಿದೆ. 51 ಪ್ರಕರಣಗಳಲ್ಲಿ ಸಂತ್ರಸ್ತರು ಲಕ್ಷಗಟ್ಟಲೆ ಪೌಂಡ್ ನಷ್ಟ ಪರಿಹಾರ ಬಯಸಿದ್ದಾರೆ. ಅಸ್ಟ್ರಾಜೆನೆಕಾ ಒಪ್ಪಿಕೊಂಡಿರುವ ಆರೋಗ್ಯ ಸಮಸ್ಯೆಯ ಹೆಸರು ಥ್ರಂಬೋಸಿಸ್ ವಿಥ್ ಥ್ರಂಬೋಸೈಟೋಪೆನಿಯಾ ಸಿಂಡ್ರೋಮ್ ಇದರಲ್ಲಿ ದೇಹದಲ್ಲಿನ ಅಸಾಮಾನ್ಯ ಸ್ಥಳಗಳಲ್ಲಿ ರಕ್ತ ಹೆಪ್ಪುಗಟ್ಟುವಿಕೆ ಉಂಟಾಗುತ್ತದೆ. ರಕ್ತದಲ್ಲಿನ ಪ್ಲೇಟ್‌ಲೆಟ್‌ಗಳ ಸಂಖ್ಯೆಯು ಕಡಿಮೆಯಾಗುತ್ತದೆ. ಪ್ಲೇಟ್‌ಲೆಟ್‌ಗಳು ರಕ್ತ ಹೆಪ್ಪುಗಟ್ಟಲು ಸಹಾಯ ಮಾಡುವ ಸಣ್ಣ ಕೋಶಗಳು. ಆದ್ದರಿಂದ ಅವು ತುಂಬಾ ಕಡಿಮೆ ಇರುವುದು ಅಪಾಯಕಾರಿ. ದೇಹದ ರೋಗನಿರೋಧಕ ವ್ಯವಸ್ಥೆಯು ಲಸಿಕೆಗೆ ಪ್ರತಿಕ್ರಿಯಿಸಿ, ರಕ್ತದ ಹೆಪ್ಪುಗಟ್ಟುವಿಕೆಯಲ್ಲಿ ಒಳಗೊಂಡಿರುವ ಪ್ರೋಟೀನ್ ಮೇಲೆ ದಾಳಿ ಮಾಡುವ ಪ್ರತಿಕಾಯಗಳನ್ನು ತಯಾರಿಸುವುದರಿಂದ ಸಂಭವಿಸುತ್ತದೆ. ಕೋವಿಡ್ ನಂತರದ ದಿನಗಳಲ್ಲಿ ಯುವಜನರಲ್ಲಿಯೂ ವಿವರಿಸಲಾಗದ ತೀವ್ರ ಅಸ್ವಸ್ಥತೆ, ಹೃದಯಸ್ತಂಭನ ಮುಂತಾದವುಗಳು ಕಂಡುಬಂದಿವೆ. ಭಾರತದಲ್ಲಿಯೂ ಹಲವಾರು ಪ್ರಕರಣಗಳು ನಡೆದಿದ್ದು, ಕೋವಿಡ್ ಹಾಗೂ ಅದರ ಲಸಿಕೆಯ ಬಗ್ಗೆ ಅನುಮಾನ ಮೂಡಿಸಿದ್ದವು. ಕಳೆದ ವರ್ಷ ಕೇಂದ್ರ ಸರ್ಕಾರ, ''ಕೊರೊನಾ ವೇಳೆ ಸಾವು ಗೆದ್ದು ಬಂದವರು ಜಾಸ್ತಿ ಕೆಲಸ ಮಾಡಬಾರದು'' ಎಂದು ಸೂಚಿಸಿತ್ತು. ''ಕೊರೊನಾ ಸೋಂಕು ತಗುಲಿ, ಐಸಿಯುನಲ್ಲಿ ಚಿಕಿತ್ಸೆ ಪಡೆಯುವುದು ಸೇರಿ ಆರೋಗ್ಯ ಸ್ಥಿತಿ ಗಂಭೀರವಾಗಿ, ಬದುಕಿ ಬಂದವರು ಯಾವುದೇ ಕಾರಣಕ್ಕೂ ಹೆಚ್ಚು ದಣಿಯುವ ಕೆಲಸ ಮಾಡಬಾರದು. ಭಾರತೀಯ ವೈದ್ಯಕೀಯ ಸಂಶೋಧನಾ ಸಂಸ್ಥೆ ಅಧ್ಯಯನ ವರದಿ ಪ್ರಕಾರ, ಹೃದಯಾಘಾತದ ಭೀತಿ ಇರುವ ಕಾರಣ ಒಂದಷ್ಟು ಸಮಯದವರೆಗೆ ಕೊರೊನಾ ಸೋಂಕಿತರು ಹೆಚ್ಚು ಸಮಯದವರೆಗೆ ಅಥವಾ ಹೆಚ್ಚು ಭಾರ ಹೊರುವ ಕೆಲಸ ಮಾಡಬಾರದು. ಒಂದು ವರ್ಷ ಅಥವಾ ಎರಡು ವರ್ಷಗಳವರೆಗೆ ಇಂತಹ ವ್ಯಕ್ತಿಗಳು ಅತಿಯಾದ ವ್ಯಾಯಾಮ, ಜಿಮ್‌ನಲ್ಲಿ ವರ್ಕೌಟ್ ಕೂಡ ಮಾಡಬಾರದು'' ಎಂದು ಅಧ್ಯಯನ ವರದಿ ಉಲ್ಲೇಖಿಸಿ ಕೇಂದ್ರ ಆರೋಗ್ಯ ಸಚಿವರು ತಿಳಿಸಿದ್ದರು. ಈಗ ಯುವಕರಿಗೂ ಹೃದಯಾಘಾತ ಹೆಚ್ಚುತ್ತಿದೆ. ಅಧಿಕ ಒತ್ತಡ, ಜೀವನ ಶೈಲಿ, ಆಹಾರ ಶೈಲಿ ಇದಕ್ಕೆ ಕಾರಣವಾಗಿದೆ ಎಂದಿದ್ದಾರೆ. ಇದರ ಜೊತೆಗೆ ಕೋವಿಶೀಲ್ಡ್ ಲಸಿಕೆಯ ಅಡ್ಡ ಪರಿಣಾಮ ಕೂಡ ಸೇರಿಕೊಂಡಿರುವುದು ಆತಂಕಕಾರಿ. ಇವೆಲ್ಲ ಕಾರಣಗಳಿಂದಾಗಿ, ಕೊರೊನಾದಿಂದಾಗಿ ಪೀಡಿತರಾದವರು ಈ ಬಗ್ಗೆ ಅತೀವ ಎಚ್ಚರ ವಹಿಸಲೇಬೇಕಿದೆ. ಸೂಕ್ತ ಆಹಾರ ಸೇವನೆ, ವ್ಯಾಯಾಮ ಸೇರಿದಂತೆ ಆರೋಗ್ಯಕರ ಜೀವನಶೈಲಿಯನ್ನು ಬರಮಾಡಿಕೊಳ್ಳಬೇಕು. ಸರ್ಕಾರ ಎಷ್ಟೇ ಆರೋಗ್ಯಸೇವೆ ನೀಡಿದರೂ ವ್ಯಕ್ತಿ ತನ್ನ ಆರೋಗ್ಯವನ್ನು ನೋಡಿಕೊಳ್ಳದಿದ್ದರೆ ಯಾರೂ ಏನೂ ಮಾಡಲು ಸಾಧ್ಯವಿಲ್ಲ. ಕೋವಿಡ್ ಹಾಗೂ ಲಸಿಕೆಯಿಂದ ಉಂಟಾಗಿರಬಹುದಾದ ಆರೋಗ್ಯ ಸಮಸ್ಯೆಗಳನ್ನೂ ಇನ್ನೊಂದು ತುರ್ತುಸ್ಥಿತಿ ಎಂದೇ ತಿಳಿದು ಸರ್ಕಾರ ಕೂಡ ಕಾರ್ಯಪ್ರವೃತ್ತವಾಗಬೇಕು.

> **ಕೊರೊನಾ ಸೋಂಕಿನ ನಂತರ ಹೃದಯಾಘಾತ ಪ್ರಮಾಣ ಏರಿಕೆಯಾಗಿರುವುದನ್ನು ಜಾಗತಿಕ ವರದಿಗಳೇ ದೃಢಪಡಿಸಿವೆ. ಜಾಗತಿಕ ವರದಿಯೊಂದರ ಪ್ರಕಾರ, ಸಾಂಕ್ರಾಮಿಕದ ನಂತರ 24-45 ವರ್ಷದೊಳಗಿನವರಲ್ಲಿ ಹೃದಯಾಘಾತ ಪ್ರಮಾಣ ಶೇ.30ರಷ್ಟು ಏರಿಕೆಯಾಗಿದೆ. ಆ ಮೂಲಕ ಅಂತಾರಾಷ್ಟ್ರೀಯವಾಗಿಯೂ ಕೊರೊನಾ ನಂತರ ಹೃದಯಾಘಾತ ಪ್ರಮಾಣ ಹೆಚ್ಚಾಗಿದೆ ಎಂಬುದು ದೃಢಪಟ್ಟಿದೆ. ಕೊರೊನಾ ನಂತರ ಹೃದಯಾಘಾತ ಪ್ರಮಾಣ ಶೇ.3ರಿಂದ ಶೇ.5ರಷ್ಟು ಏರಿಕೆಯಾಗಿದೆ ಎಂದು ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ನಿರ್ದೇಶಕರಾಗಿದ್ದ ಡಾ.ಸಿ.ಎನ್.ಮಂಜುನಾಥ್ ಕೂಡ ಹೇಳಿದ್ದರು.**


ಉದಯವಾಹಿನಿ ಚಿತ್ರ




• ಹಿಂದಿನ ಸಂಚಿಕೆಯಿಂದ

ಅಂಥ ಮಹತ್ವಾಕಾಂಕ್ಷೆಯೇಕೆ? ಪಾಂಡವರ ಹಿರಿಮೆಯನ್ನು ಹೀಗಳೆಯಲು ನಿನಗೆ ಅದೆಷ್ಟು ಧೈರ್ಯ? ನೀನು ಹೀಗೆ ಗಳುಹುವುದು ಅರ್ಜುನನ ಗಾಂಡೀವಧ್ವನಿಯನ್ನು ಕೇಳುವವರೆಗೆ, ಭೀಮನು ಗಜಸೈನ್ಯವನ್ನು ತರಿಯುವುದನ್ನು ನೋಡುವವರೆಗೆ, ಯುಧಿಷ್ಠಿರ ಮತ್ತು ಅವನ ಸೋದರರ ಬಾಣಗಳ ರುಚಿಯನ್ನು ನೋಡುವವರೆಗೆ. ಅನಂತರ ನೀನು ಹೀಗೆ ಮಾತನಾಡಲಾರೆ. ಪಾಂಡವರ ಶಕ್ತಿ ನನಗೆ ಗೊತ್ತಿರುವಷ್ಟು ನಿನಗೆ ತಿಳಿಯದು ಎನ್ನಲು, ರಾಧೇಯನು, ''ಮಹಾರಾಜ, ನಾನು ನಿನ್ನನ್ನು ವಿರೋಧಿಸಿ ನಿನ್ನ ಮನಸ್ಸಿಗೆ ಬೇಸರವನ್ನುಂಟುಮಾಡುವುದಿಲ್ಲ; ಮುಂದಕ್ಕೆ ಹೋಗೋಣ ಎಂದನು. ರಥವು ಓಡುತ್ತಿತ್ತು. ಶಕುನಗಳ ಬಗ್ಗೆ ಚೆನ್ನಾಗಿ ತಿಳಿದಿದ್ದ ರಾಧೇಯನಿಗೆ ತನಗೆ ಶುಭವನ್ನು ಸೂಚಿಸುವ ಶಕುನಗಳು ಕಾಣಿಸುವ ಬದಲು, ಕೆಟ್ಟ ಕೆಟ್ಟ ಶಕುನಗಳೇ ದಾರಿಯುದ್ದಕ್ಕೂ ಕಂಡವು. ಆದರೆ ಇವಕ್ಕೆಲ್ಲ ಗಮನ ಕೊಡುವ ಸ್ಥಿತಿ ಅವನದಾಗಿರಲಿಲ್ಲ. ಕಹಿಯಾದ ಕಿರುನಗೆಯೊಂದಿಗೆ ಮುನ್ನಡೆದನು. ದಾರಿಯುದ್ದಕ್ಕೂ ಶಲ್ಯನು ಪಾಂಡವರನ್ನು ಹೊಗಳಿದ್ದೇ ಹೊಗಳಿದ್ದು. ಅರ್ಜುನನನ್ನು ಹೊಗಳುವುದು, ರಾಧೇಯನನ್ನು ಬೈಯ್ಯುವುದು. ಇದರಿಂದ ನೊಂದ ಅವನು,

'ಶಲ್ಯ, ನಿನ್ನ ಹೆಸರಿಗೆ ತಕ್ಕಂತೆ ನೀನು ನನ್ನನ್ನು ಚುಚ್ಚುತ್ತಿರುವೆ. ನಿನ್ನ ಮಾತುಗಳು ಕೂರಲಗಿನಂತೆ ನನ್ನ ಹೃದಯವನ್ನು ಹೊಕ್ಕು ನೋಯಿಸುತ್ತಿವೆ. ನೀನೇಕೆ ಹೀಗೆ ಮಾಡುತ್ತಿರುವೆಯೋ ನನಗೆ ತಿಳಿಯದು. ಆದರೆ ನಾನು ಇದಕ್ಕೆಲ್ಲ ಸೊಪ್ಪುಹಾಕುವವನಲ್ಲ. ಇಂದು ನಾನು ನನ್ನ ಕರ್ತವ್ಯವನ್ನು ನೆರವೇರಿಸುವೆ. ಮನುಷ್ಯರ ಬದುಕಿನ ಮೇಲೆ ವಿಧಿ ಕಣ್ಣಿಟ್ಟಿರುತ್ತದೆ; ಲೋಕ ನಿದ್ರಿಸಿದಾಗಲೂ ಅದು ಎಚ್ಚೆತ್ತಿರುತ್ತದೆ. ಅದು ಕೆಲಸಮಾಡುವುದು ವಿಚಿತ್ರ ರೀತಿಯಲ್ಲಿ. ಭೀಷ್ಮ ಬಿದ್ದಾಗ, ವಿಧಿಯೆದುರು ಮನುಷ್ಯ ಅಸಹಾಯನೆಂದು ನನಗನಿಸಿತು. ಆದರೆ, ಸ್ವಲ್ಪಮಟ್ಟಿಗೆ ಮಾನವನ ಭವಿಷ್ಯ ಅವನ ಕೈಯಲ್ಲಿರುವುದೂ ನಿಜ. ರಣರಂಗದಲ್ಲಿ ಸಾಯುವುದೇ ಮಾನವನ ವಿಧಿ ಎನ್ನುವುದಾದರೆ, ಸಾಧ್ಯವಾದಷ್ಟುಮಟ್ಟಿಗೂ ಚೆನ್ನಾಗಿ ಹೋರಾಡಿ ಅವನು ಒಳ್ಳೆಯ ಹೆಸರು ಸಂಪಾದಿಸುವುದಕ್ಕೇನೂ ಅದು ಅಡ್ಡಿಯಾಗಲಾರದು. ಹಾಗೆ ಮಾಡಿ ಅವನು ತನ್ನ ದುರ್ವಿಧಿಯನ್ನು ಸ್ವಲ್ಪವಾದರೂ ತಿದ್ದಿಕೊಳ್ಳಬಹುದು. ಅರ್ಜುನನನ್ನು ಗೆಲ್ಲುವ ಸಂಭವವಿಲ್ಲವೆಂದು ಹಿಂದಿನಿಂದಲೂ ನನಗೆ ಗೊತ್ತು. ಆದರೂ, ನನಗಾಗಿ ಹೃದಯವನ್ನಿತ್ತ ರಾಜನಿಗಾಗಿ ನಾನು ಯುದ್ಧಮಾಡುತ್ತೇನೆ; ನನ್ನ ಜೀವನವನ್ನು ಬಲಿಕೊಟ್ಟು ಅವನನ್ನು ಸಂತೋಷಪಡಿಸುತ್ತೇನೆ. ಈ ಯಜ್ಞಕ್ಕೆ ನೀನು ದಯವಿಟ್ಟು ಸಹಾಯಮಾಡು. ನಾನು ಈಗಾಗಲೇ ದುರ್ವಿಧಿಗೆ ಬಲಿಯಾದವನು. ಅರ್ಜುನನನ್ನು ಹೊಗಳುತ್ತ ಉಳಿದಿರುವ ನನ್ನ ಕೆಲವೇ ಗಂಟೆಗಳ ಬದುಕನ್ನೂ ನೋಯಿಸಬೇಡ. ನನ್ನ ಉತ್ಸಾಹವನ್ನು ತಗ್ಗಿಸುವುದೇ ನಿನ್ನ ಉದ್ದೇಶವಾಗಿದ್ದರೆ, ನೀನು ಅದರಲ್ಲಿ ಯಶಸ್ವಿಯಾಗಿರುವೆ. ಇನ್ನಾದರೂ ಸುಮ್ಮನಿರು ಎಂದನು. ಶಲ್ಯನು ಮುಂದೆ ಮಾತನಾಡಲಿಲ್ಲ.

**ಮುಂದುವರಿಯುವುದು...**

# ಪೆನ್ ಡ್ರೈವ್ ಎಂಬ ನಿಗೂಢದ ಸುತ್ತ

• ಉದಯವಾಹಿನಿ, ವಿಶೇಷ


ಸಾಮಾಜಿಕ ಕಳಕಳಿ
**ಹೆಚ್.ಎಸ್. ಪ್ರತಿಮಾ**
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ
ಶಿಕ್ಷಕಿ, ಹಾಸನ

ಸುತ್ತವದು ಹರಡುತಿರೆ ಪಾಪವದು ಹೇಳುತಲಿ
ಹುತ್ತವದು ಆಗಿರಲು ಹೆದರುತಿರಲು
ಮತ್ತದುವೆ ಹೇಳಲದು ಆಗದಿರೆ ಮಾತಿನಲಿ
ಸತ್ತಿಹುದು ಭಾವನೆಯು ಲಕ್ಷ್ಮಿ ದೇವಿ.....

ನಮ್ಮ ಪರಿಸರ ಚೆನ್ನಾಗಿ ಇರಬೇಕು. ಇಲ್ಲದಿದ್ರೆ ಅಲ್ಲಿ ಒಳಿತನ್ನು ಬಯಸುವ ಆಕಾಂಕ್ಷೆಗಳನ್ನು ಕಾಣಲಾಗುವುದಿಲ್ಲ. ನಮ್ಮ ಸುತ್ತಮುತ್ತ ಕೆಟ್ಟ ವಿಚಾರಗಳು ಹರಿದಾಡುತ್ತಿದ್ದರೆ ಸಮಾಜದಲ್ಲಿ ಯಾರು ಸಹ ಶಾಂತಿಯಿಂದ ಬದುಕಲು ಸಾಧ್ಯವಿಲ್ಲ. ಹುತ್ತದೊಳಗಿನ ಹಾವು ಯಾವ ಹಾವು ಎಂದು ತಿಳಿಯಲು ಹಾವನ್ನು ವೀಕ್ಷಿಸಿದ ಕ್ಷಣದಲ್ಲೇ ತಿಳಿಯಬೇಕೆ ಹೊರತು ಊಹಿಸಲಾಗದು. ಯಾವುದೇ ವಿಚಾರವಾಗಲಿ ಮಾತನಾಡುವಾಗ ಯೋಚಿಸಿ ಮಾತನಾಡಬೇಕು. ನಾವು ಕೆಲವು ವಿಚಾರಗಳನ್ನು ಮಾತನಾಡಬೇಕಾದರೆ ಹೆದರುತ್ತೇವೆ. ಕೆಲವು ವಿಚಾರಗಳು ಭಾವನೆಗಳೇ ಇರದಂತಹ ವಿಚಾರಗಳಾಗಿರುತ್ತವೆ. ಅವುಗಳನ್ನು ಮಾತನಾಡಲು ಸಹ ಅಸಹ್ಯವಾಗುತ್ತದೆ. ಇಂತಹದೊಂದು ಕರ್ಮಕಾಂಡದ ವಿಚಾರವೆಂದರೆ ಪೆನ್ ಡ್ರೈವ್.

ಈಗಿನ್ನು ನೇಹಾ ಪ್ರಕರಣದಲ್ಲೇ ಸರಿಯಾಗಿ ನ್ಯಾಯ ಸಿಕ್ಕಿಲ್ಲವೆಂದು ಜನರು ಬೇಸರವಾಗಿರುವ ಸಮಯದಲ್ಲಿ ಹಾಸನದಲ್ಲಿ ದೊಡ್ಡದೊಂದು ಸುದ್ದಿ ಹರಿದಾಡುತ್ತಿರುವುದು ನಾಚಿಕೆಗೇಡಿನ ವಿಷಯವಾಗಿದೆ. ಪೆನ್ ಡ್ರೈವ್ಗಳನ್ನು ಮಾಡಿ. ಎಲ್ಲೆಡೆಯೂ ಎಸೆದು ಎಲ್ಲರಿಗೂ ಇಂತಹ ವಿಚಾರಗಳು ತಲುಪಬೇಕೆಂದಿಲ್ಲ, ಅದಕ್ಕೆ ಕಾನೂನು ಇದೆ.ಆ ಕಾನೂನಿನ ಚೌಕಟ್ಟಿನಲ್ಲೇ ಕಾರ್ಯವನ್ನು ನಿರ್ವಹಿಸುವುದು ಉತ್ತಮ. ಪೆನ್ ಡ್ರೈವ್ಗಳನ್ನು ಎಲ್ಲೆಡೆಯೂ ಎಸೆದು ಮಾಡಿದ ಕಾರ್ಯದಿಂದ ಯುವ ಪೀಳಿಗೆ ಗೆ ಬಹಳಷ್ಟು ತೊಂದರೆ ಯಾಗುತ್ತಿದೆ. ಯಾವುದನ್ನು ನೋಡಬಾರದು ಅದನ್ನೆಲ್ಲಾ ನೋಡುವಂತೆ ಮಾಡುತ್ತಿರುವುದು ವೈರಲ್ ಮಾಡಿರುವ ವ್ಯಕ್ತಿಗಳಿಗೆ ಎಷ್ಟು ಶಾಪ ಹಾಕಿದರು ಕಡಿಮೆ. ಯಾವುದೇ ವಿಚಾರವಾಗಲಿ ಅತಿಯಾದರೆ ಅದು ಸರಿ ಇರದು. ಇಂದಿನ ವಿದ್ಯಾರ್ಥಿಗಳ ಮನೋಭಾವದಲ್ಲಿ ಇಂತಹ ಕೃತ್ಯಗಳು ನೋಡುವುದರಿಂದ ಬಹಳಷ್ಟು ನಷ್ಟವನ್ನು ನಮ್ಮ ಯುವ ಪೀಳಿಗೆಗೆ ಸಮಾಜದ ಇಂತಹ ಘಟನೆಗಳು ನೀಡುತ್ತಿದ್ದಾವೆ . ತಿಳಿದೋ ತಿಳಿಯದೆಯೋ ಮಾಡಿದ ತಪ್ಪಿಗೆ ನಮ್ಮ


ಉದಯವಾಹಿನಿ ಚಿತ್ರ

ಪುಟ್ಟ ಪುಟ್ಟ ಮಕ್ಕಳು ಸಹ ಕೆಟ್ಟ ಕೆಟ್ಟ ದೃಶ್ಯಗಳನ್ನು ನೋಡುವಂತಹ ಕರ್ಮದ ಸ್ಥಿತಿ ಬಂದಿದೆ. ಇಂತಹ ಕೃತ್ಯಗಳಿಂದ ಕೆಟ್ಟ ಕೆಟ್ಟ ವಿಷಯಗಳನ್ನು ನೋಡಿ ಕೆಟ್ಟ ವಿಚಾರಗಳನ್ನು ತಿಳಿದುಕೊಳ್ಳುವುದರಲ್ಲಿ ವೈರಲ್ ಮಾಡುತ್ತಿರುವ ವ್ಯಕ್ತಿಗಳು ಯಶಸ್ವಿಯಾಗಿ ದೇಶಕ್ಕೆ ಅಪಾಯಕಾರಿ ವ್ಯಕ್ತಿಗಳಾಗುತ್ತಿದ್ದಾರೆ. ನಮ್ಮದು ಸಂಸ್ಕೃತಿಯ ನಾಡು ದೇವತೆಯರು ನೆಲೆಸಿರುವ ಬೀಡು. ಇಂತಹ ನಾಡಿನಲ್ಲಿ ಈ ಪರಿಸ್ಥಿತಿಯನ್ನು ಕಾಣಬೇಕಾದ ದಿನಗಳು ಬರುತ್ತಿವೆ. ಮಹಿಳೆಯರ ಮೇಲೆ ನಡೆದಿರುವ ಹೀನಾಯ ಕೃತ್ಯಗಳನ್ನು ಪ್ರತಿಯೊಬ್ಬರು ಖಂಡಿಸಲೇಬೇಕು. ಆದರೆ ಪ್ರಸ್ತುತ ದಿನಗಳಲ್ಲಿ ಹಾಸನದ ಹೆಸರನ್ನೇ ಹಾಳು ಮಾಡಿದ ವೈರಲ್ ವ್ಯಕ್ತಿಗಳಿಗೆ ಯಾವ ಶಿಕ್ಷೆ ಕೊಟ್ಟರೂ ಕಡಿಮೆ. ಮಹಿಳೆಯರ ಮಾನ ಮರ್ಯಾದೆ ಒಂದು ಕಡೆಯಾದರೆ, ಅವರನ್ನು ಆಂತರಿಕವಾಗಿ ಕುಗ್ಗುವಂತೆ ಮಾಡಿರುವ ಈ ಪೆನ್ ಡ್ರೈವ್ಗಳು ದೊಡ್ಡ ಆತಂಕದ ವಿಚಾರವಾಗಿದೆ. ಮೊದಲೆಲ್ಲ ಸಿಡಿ, ಸಿಡಿ ಪ್ರಕರಣ ಎನ್ನುತ್ತಿದ್ದವರು. ಈಗ ಪೆನ್ ಡ್ರೈವ್ ಎಂದರೆ ಸಾಕು ಹೆದರುವಂತೆ ಮಾಡಿದ್ದಾರೆ. ಆಟವಾಡುವ ಸಣ್ಣ ಮಕ್ಕಳಿಂದ ಹಿಡಿದು ದೊಡ್ಡವರವರೆಗೂ ಈ ಪೆನ್ ಡ್ರೈವ್ಗಳ ಮಾಯೆ ಹರಡುತ್ತಿದೆ. ಎಲ್ಲರೂ ಪಿಸಿ ಪಿಸಿ ಎಂದು ಮಾತನಾಡುತ್ತಿದ್ದ ವಿಚಾರ ಹೀಗಾ ಯಾವುದನ್ನು ಮಾತನಾಡಲು ಹೆದುರುತ್ತಿದ್ದ ಜನ ಗಟ್ಟಿ ಧ್ವನಿಯಲ್ಲಿ ವಿಚಾರವನ್ನು ಮಾತನಾಡುತ್ತಿದ್ದಾರೆ ಎಂದರೆ ಎಷ್ಟರಮಟ್ಟಿಗೆ ಆ ಕೃತ್ಯಗಳು ತಮ್ಮ ಪ್ರಭಾವವನ್ನು ಸಮಾಜದಲ್ಲಿ ಬೀರಿದೆ ಹೇಳಿ. ಇದರ ಅವಶ್ಯಕತೆ ಇರಲಿಲ್ಲ ಸಾವಿರಾರು ಹೆಣ್ಣು ಮಕ್ಕಳ ಜೀವನದೊಂದಿಗೆ ಚೆಲ್ಲಾಟವಾಡುವ ಅವಶ್ಯಕತೆ ಇರಲಿಲ್ಲ. ಮಾಡಿರುವ ಕೃತ್ಯ ಹೇಳುವುದಕ್ಕೂ ಹೆದರಬೇಕಿದೆ . ಆದರೆ ಅಲ್ಲಿ ಇರುವಂತಹ ಹೆಣ್ಣು ಮಕ್ಕಳ ಕಥೆ ಏನಾಗಬೇಕು. ಅವರ ಜೀವನದ ಸ್ಥಿತಿ -ಗತಿಗಳು ಏನಾಗಬೇಕು ಯೋಚಿಸಿ ಒಮ್ಮೆ.

ಇಂತಹ ಹೀನಾಯ ಕೃತ್ಯಗಳನ್ನು ಮಾಡಿದಂತಹ ಯಾರೇ ಆಗಲಿ ಅವರಿಗೆ ಶಿಕ್ಷೆ ಆಗಲಿ. ಒಟ್ಟಾರೆ ಕಾನೂನು ಕಟ್ಟಳೆಯ ಒಳಗೆ ಮಾಡಬೇಕಿದ್ದ ಇಂತಹ ವಿಚಾರಗಳನ್ನು ಜನಸಮೂಹದಾಯಕ್ಕೆ ತಿಳಿಯುವಂತೆ ಮಾಡಿ ವೈರಲ್ ಮಾಡಿದಂತಹ ವ್ಯಕ್ತಿಯು ಯುವ ಪೀಳಿಗೆ ಮತ್ತೆ ಸಣ್ಣ ಮಕ್ಕಳ ಬಗ್ಗೆ ಯೋಚನೆ ಮಾಡಿಲ್ಲ. ಒಟ್ಟಾರೆ ಆದ ಅನ್ಯಾಯಕ್ಕೆ ನ್ಯಾಯ ಸಿಗಲಿ ಇನ್ನು ಮುಂದಾದರೂ ನಮ್ಮ ಸಮಾಜಕ್ಕೆ ಇಂತಹ ಕಾಮುಕರು, ಅತ್ಯಾಚಾರಿಗಳು ಕೊನೆಯಾಗಬೇಕು. ಹೆಣ್ಣು ಮಕ್ಕಳೆಲ್ಲ ಒಳ್ಳೆಯ ಸಂಸ್ಕಾರದಲ್ಲಿ ನಯ, ವಿನಯ , ಹಿರಿಯರ ಮಾರ್ಗದರ್ಶನದಿಂದ ಬೆಳೆಯಬೇಕು. ಅತಿಯಾದ ನಂಬಿಕೆಯನ್ನು ಮಾಡುವುದನ್ನು ಬಿಡಬೇಕು. ಮೊಬೈಲ್ಗಳ ಅತಿಯಾದ ಬಳಕೆ, ವಿಡಿಯೋ ಕಾಲ್ಗಳ ಚಾಟಿಂಗ್ ಎಲ್ಲವನ್ನು ತ್ಯಜಿಸಬೇಕು. ಸಮಾಜಕ್ಕೆ ಒಳಿತನ್ನು ಮಾಡಲು ಮಾತ್ರ ಬಳಸಿಕೊಳ್ಳಬೇಕೆ ಹೊರತು. ಜೈ ಹಿಂದ್ ಜೈ ಭಾರತ್ ಮಾತೆ.

> **ಸಮಾಜಕ್ಕೆ ಕಂಟಕ ವಾಗುವಂತಹ ಕೆಲಸಗಳನ್ನು ಮಾಡಬಾರದು. ಒಟ್ಟಾರೆ ಪೆನ್ ಡ್ರೈ ಎಂಬ ಹಾವಿನ ಸುತ್ತ ಹುತ್ತವು ಇಡೀ ಪ್ರಪಂಚದಾದ್ಯಂತ ಎಲ್ಲರನ್ನು ನಡುಗುವಂತೆ ಮಾಡಿದೆ. ಮುಂದೆ ಇಂತಹ ಕೃತ್ಯಗಳು ನಡೆಯದಂತೆ ಕಡಿವಾಣ ಹಾಕುವುದರಲ್ಲಿ ಜನತೆ, ಸರ್ಕಾರ, ಎಚ್ಚೆತ್ತುಕೊಂಡು ಕೆಲಸ ಮಾಡಬೇಕು. ಪ್ರತಿಯೊಬ್ಬರು ಅರಿತುಕೊಂಡು ಜೀವನ ಮಾಡುವುದನ್ನು ಕಲಿಯೋಣ. ಒಳ್ಳೆಯ ಸನ್ಮಾರ್ಗಗಳನ್ನು ಕಲಿಸೋಣ. ಸಮಾಜದ ಒಳಿತಿಗಾಗಿ ಬಾಳೋಣ ಎಂದು ಹೇಳುತ್ತಾ ಬೇಸರದಿಂದಲೇ ಹೇಳುತ್ತಿದ್ದೇನೆ.**

# ಮೇ.4ಕ್ಕೆ ಜಗದ್ಗುರು ರೇಣುಕಾಚಾರ್ಯ ಜಯಂತಿ; ಎಸ್.ಎಂ.ಕೃಷ್ಣಗೆ ಪ್ರಶಸ್ತಿ

• ಉದಯವಾಹಿನಿ, ಬೆಂಗಳೂರು

ಹುಟ್ಟಿದ ಪ್ರತಿಯೊಬ್ಬ ಜೀವಿಯೂ ತನ್ನ ಅಧ್ಯಾತ್ಮ ಸಾಧನೆಯಿಂದ ಭಗವಂತನೊಂದಿಗೆ ಅನುಸಂಧಾನ ಮಾಡಲು ಸಾಧ್ಯವೆಂದು ಸಾರಿದ ಶ್ರೀಜಗದ್ಗುರು ರೇಣುಕಾಚಾರ್ಯರ ಜಯಂತಿ ಯುಗಮಾನೋತ್ಸವವು ಪಾಲ್ಗುಣ ಶುದ್ಧ ತ್ರಯೋದಶಿಯಂದಾದರೂ ವರ್ಷಪೂರ್ತಿ ಜಯಂತಿ ಕಾರ್ಯಕ್ರಮ ನಡೆಯುತ್ತವೆ . ಅಂತೆಯೇ ರಾಜಧಾನಿ ಬೆಂಗಳೂರಿನಲ್ಲಿ ಇದೇ ಮೇ .4 ರಂದು ಶ್ರೀಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವವನ್ನು ಹಮ್ಮಿಕೊಳ್ಳಲಾಗಿದೆ. ಆನಂದರಾವ್ ವೃತ್ತದಲ್ಲಿರುವ ಶ್ರೀಜಗದ್ಗುರು ರೇಣುಕಾಚಾರ್ಯ ವಿದ್ಯಾಸಂಸ್ಥೆಯ ಸಭಾಂಗಣದಲ್ಲಿ ಬೆಳಗ್ಗೆ 10 ಗಂಟೆಗೆ ಹಮ್ಮಿಕೊಂಡಿರುವ ಕಾರ್ಯಕ್ರಮದ ದಿವ್ಯಸಾನ್ನಿಧ್ಯವನ್ನು ಬಾಳೆಹೊನ್ನೂರು ಶ್ರೀರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ವಹಿಸಲಿದ್ದಾರೆ.

ಧಾರವಾಡದ ಉನ್ನತ ಶಿಕ್ಷಣ ಅಕಾಡೆಮಿ ಡೀನ್ ಡಾ.ಎ.ಸಿ.ವಾಲಿಯವರು ಶ್ರೀಜಗದ್ಗುರು ರೇಣುಕರ ಕ್ರಾಂತಿ ಎಂಬ ವಿಷಯದ ಕುರಿತು ಉಪನ್ಯಾಸ ನೀಡಲಿದ್ದಾರೆ.


ಉದಯವಾಹಿನಿ ಚಿತ್ರ

ತುಮಕೂರು ವಿವಿ ವಿಶ್ರಾಂತ ಪ್ರಾಧ್ಯಾಪಕಿ ಡಾ.ಮೀನಾಕ್ಷಿ ಖಂಡಿಮಠ ವೀರಶೈವ ಸಿದ್ಧಾಂತ ಕುರಿತು ಉಪನ್ಯಾಸ ನೀಡಲಿದ್ದಾರೆ.

ಅಂದು ಬಿಡುಗಡೆಯಾಗಲಿರುವ ಸಿದ್ಧಾಂತ ಶಿಖಾಮಣಿ ಗ್ರಂಥದ ಕುರಿತು ವಿದ್ವಾಂಸರಾದ ಡಾ.ಸಿ.ಶಿವಕುಮಾರಸ್ವಾಮಿ ಮಾತನಾಡಲಿದ್ದಾರೆ. ಸಮಾರಂಭದಲ್ಲಿ ವಿವಿಧ ವಿಶ್ವವಿದ್ಯಾಲಯಗಳಿಂದ ಅತ್ಯುನ್ನತ ಪದವಿ ಪಡೆದ ಪ್ರಾಧ್ಯಾಪಕರಿಗೆ ಹಾಗೂ ಪರೀಕ್ಷೆಗಳಲ್ಲಿ ಅತ್ಯುನ್ನತ ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರಶಂಸಾ ಪತ್ರ ನೀಡಿ ಗೌರವಿಸಲಾಗುವುದು ಎಂದು ಎಸ್‌ಜೆಆರ್ ವಿದ್ಯಾಸಂಸ್ಥೆಯ ಅಧ್ಯಕ್ಷರಾದ ಯು.ಎಂ. ಬಸವರಾಜ ತಿಳಿಸಿದ್ದಾರೆ.

'ಶ್ರೀ ಜಗದ್ಗುರು ರೇಣುಕ ಸಿರಿ' ಪ್ರಶಸ್ತಿ: ಬಾಳೆಹೊನ್ನೂರು ಧರ್ಮಪೀಠ ಹಾಗೂ ಇನ್ನಿತರೆ ಮಠಗಳಲ್ಲಿ ನಡೆಯುತ್ತಿದ್ದ ಶ್ರೀಜಗದ್ಗುರು ರೇಣುಕಾಚಾರ್ಯ ಜಯಂತಿ ಕಾರ್ಯಕ್ರಮವನ್ನು ಇದೇ ಮೊದಲ ಬಾರಿಗೆ ಬೆಂಗಳೂರಿನ ಎಸ್‌ಜೆಆರ್ ವಿದ್ಯಾಸಂಸ್ಥೆಯಲ್ಲಿ ಬೃಹತ್ ಮಟ್ಟದಲ್ಲಿ ಆಯೋಜಿಸಲಾಗಿದ್ದು, ಶ್ರೀಜಗದ್ಗುರು ರೇಣುಕ ಸಿರಿ ಎಂಬ ಪ್ರಶಸ್ತಿಯನ್ನು ಸ್ಥಾಪಿಸಲಾಗಿದೆ. ಸಮಾಜದಲ್ಲಿ ಅತ್ಯುನ್ನತ ಸಾಧನೆ ಮಾಡಿದ ಸಾಧಕರಿಗೆ ಕೊಡಮಾಡುವ ಪ್ರಶಸ್ತಿಯನ್ನು ಮೊದಲ ಬಾರಿ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರಿಗೆ ನೀಡಲು ಆಯ್ಕೆ ಮಾಡಲಾಗಿದೆ. 1965ರ ಸಂದರ್ಭದಲ್ಲಿ ಎಸ್.ಎಂ.ಕೃಷ್ಣ ಅವರು ರೇಣುಕಾಚಾರ್ಯ ಕಾನೂನು ಕಾಲೇಜಿನಲ್ಲಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ್ದು ಇಲ್ಲಿ ಗಮನಾರ್ಹ. ಮೇ.4ರಂದು ನಡೆಯುವ ಸಮಾರಂಭದಲ್ಲಿ ಶ್ರೀರಂಭಾಪುರಿ ಜಗದ್ಗುರುಗಳು ಪ್ರಶಸ್ತಿಯನ್ನು ಪ್ರದಾನ ಮಾಡಲಿದ್ದಾರೆಂದು ವಿದ್ಯಾಸಂಸ್ಥೆಯು ಪ್ರಕಟಿಸಿದೆ.

# ಸಮಾಜದ ಅಂಕು-ಡೊಂಕು ತಿದ್ದುವುದೇ ಪತ್ರಿಕೋದ್ಯಮ


ಎನ್.ಎನ್.ಕಬ್ಬೂರ
• ಉದಯವಾಹಿನಿ, ವಿಶೇಷ

ಪ್ರಾದೇಶಿಕ, ರಾಷ್ಟ್ರೀಯ ಅಂತ ರಾಷ್ಟ್ರೀಯ ವಿದ್ಯಮಾನಗಳನ್ನು ಕ್ಷಣ ಕ್ಷಣದ ಮಾಹಿತಿಗಳನ್ನು ಜನರಿಗೆ ತಲುಪಿಸಿ, ಸಮಾಜದ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲುವ ಪತ್ರಿಕಾ ಮಾಧ್ಯಮದ ಎಲ್ಲಾ ಮಿತ್ರರಿಗೆ ರಾಷ್ಟ್ರೀಯ ಪತ್ರಿಕಾ ದಿನಾಚರಣೆಯ ಶುಭಾಶಯಗಳು. ವಿಶ್ವ ಪತ್ರಿಕಾ ಸ್ವಾತಂತ್ರ್ಯ ದಿನವನ್ನು ವಿಶ್ವಸಂಸ್ಥೆಯ ಜನರಲ್ ಅಸೆಂಬ್ಲಿಯು ಡಿಸೆಂಬರ್ 1993 ರಲ್ಲಿ ಯುನೆಸ್ಕೋದ ಸಾಮಾನ್ಯ ಸಮ್ಮೇಳನದ ಶಿಫಾರಸಿನ ಮೇರೆಗೆ ಘೋಷಿಸಿತು. ಅಂದಿನಿಂದ ವಿಂಡ್‌ಹೋಕ್ ಘೋಷಣೆಯ (ಮೇ-03) ವಾರ್ಷಿಕೋತ್ಸವವನ್ನು ವಿಶ್ವ ಪತ್ರಿಕಾ ಸ್ವಾತಂತ್ರ್ಯ ದಿನವಾಗಿ ವಿಶ್ವಾದ್ಯಂತ ಆಚರಿಸಲಾಗುತ್ತದೆ. ಪತ್ರಿಕಾ ಸ್ವಾತಂತ್ರ್ಯದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು, ಹಕ್ಕನ್ನು ಗೌರವಿಸುವ ಮತ್ತು ಎತ್ತಿಹಿಡಿಯುವ, ಸರ್ಕಾರಗಳ ಕರ್ತವ್ಯವನ್ನು ನೆನಪಿಸಲು ಆಚರಿಸಲಾಗುತ್ತದೆ. 1948 ರ ಮಾನವ ಹಕ್ಕುಗಳ ಸಾರ್ವತ್ರಿಕ ಘೋಷಣೆಯ ಆರ್ಟಿಕಲ್ 19 ರ ಅಡಿಯಲ್ಲಿ ಪ್ರತಿಪಾದಿಸಲಾದ ಅಭಿವ್ಯಕ್ತಿ ಸ್ವಾತಂತ್ರ್ಯ ಎತ್ತಿ ಹಿಡಿಯಲು ಈ ದಿನ ಆಚರಣೆ ಮಾಡಲಾಗುತ್ತದೆ.

**ಪ್ರಶಸ್ತಿ-ಪುರಸ್ಕಾರ:-** ವಿಶ್ವದಲ್ಲಿ ಎಲ್ಲಿಯಾದರೂ ಪತ್ರಿಕಾ ಸ್ವಾತಂತ್ರ್ಯದ ರಕ್ಷಣೆ ಅಥವಾ ಪ್ರಚಾರಕ್ಕೆ ಮಹೋನ್ನತ ಕೊಡುಗೆ ನೀಡಿದ ಅರ್ಹ ವ್ಯಕ್ತಿ, ಸಂಸ್ಥೆಗೆ UNESCO/ಗಿಲ್ಲೆರ್ಮೊ ಕ್ಯಾನೊ ವರ್ಲ್ಡ್ ಪ್ರೆಸ್ ಫ್ರೀಡಂ ಪ್ರಶಸ್ತಿಯನ್ನು ನೀಡುವ ಮೂಲಕ UNESCO ವಿಶ್ವ ಪತ್ರಿಕಾ ಸ್ವಾತಂತ್ರ್ಯ ದಿನವನ್ನು ಗುರುತಿಸುತ್ತದೆ. 1986 ರ ಡಿಸೆಂಬರ್ 17 ರಂದು ಬೊಗೋಟಾದಲ್ಲಿ ಎಲ್ ಎಸ್ಪೆಕ್ಟಡಾರ್ ತನ್ನ ಪತ್ರಿಕೆಯ ಕಚೇರಿಯ ಮುಂದೆ ಹತ್ಯೆಗೀಡಾದ ಕೊಲಂಬಿಯಾದ ಪತ್ರಕರ್ತ ಗಿಲ್ಲೆರ್ಮೊ ಕ್ಯಾನೊ




ಇಸಾಜಾ ಅವರ ಗೌರವಾರ್ಥವಾಗಿ ಈ ಪ್ರಶಸ್ತಿಯನ್ನು ನೀಡಲಾಗಿದೆ.

1997 ರಲ್ಲಿ ರಚಿಸಲಾದ ಈ ಬಹುಮಾನವನ್ನು 14 ಸುದ್ದಿ ವೃತ್ತಿಪರರ ಸ್ವತಂತ್ರ ತೀರ್ಪುಗಾರರ ಶಿಫಾರಸಿನ ಮೇರೆಗೆ ನೀಡಲಾಗುತ್ತದೆ. ಪತ್ರಿಕಾ ಸ್ವಾತಂತ್ರ್ಯಕ್ಕಾಗಿ ಕೆಲಸ ಮಾಡುತ್ತಿರುವ ಪ್ರಾದೇಶಿಕ ಮತ್ತು ಅಂತರಾಷ್ಟ್ರೀಯ ಸರ್ಕಾರೇತರ ಸಂಸ್ಥೆಗಳು ಮತ್ತು UNESCO ಸದಸ್ಯ ರಾಷ್ಟ್ರಗಳಿಂದ ಹೆಸರುಗಳನ್ನು ಸಲ್ಲಿಸಲಾಗುತ್ತದೆ. 2022 ರಲ್ಲಿ ಬೆಲಾರಸ್ ದೇಶದ ಬೆಲರೂಸಿಯನ್ ಅಸೋಸಿಯೇಷನ್ ಆಫ್ ಜರ್ನಲಿಸ್ಟ್ಸ್ ಎಂಬ ಸಂಸ್ಥೆಯು ಪ್ರಶಸ್ತಿಯನ್ನು ಪಡೆದುಕೊಂಡಿದ್ದರೆ, 2023ರಲ್ಲಿ ಇರಾನ್ ದೇಶದ ನಿಲೂಫರ್ ಹಮೇದಿ, ಎಲಾಹೆ ಮೊಹಮ್ಮದಿ, ನರ್ಗೆಸ್ ಮೊಹಮ್ಮದಿ ಎಂಬುವವರು ಜಂಟಿಯಾಗಿ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದ್ದಾರೆ. ಅದೇನೇ ಇದ್ದರೂ ಸಹ, ದಮನಿತರ ನೋವಿಗೆ ಧ್ವನಿಯಾಗಿ ನ್ಯಾಯ ಒದಗಿಸಿಕೊಡುವ ಅಕ್ಷರ ಲೋಕವಾಗಿ ಪತ್ರಿಕೋದ್ಯಮ ಕಾರ್ಯನಿರ್ವಹಿಸುತ್ತದೆ. ಪತ್ರಿಕೋದ್ಯಮ ಪ್ರಜಾಪ್ರಭುತ್ವದ ನಾಲ್ಕನೆಯ ಸ್ತಂಭವಾಗಿದ್ದು ಜನಸಾಮಾನ್ಯರು ಮತ್ತು ಸರ್ಕಾರಗಳ ನಡುವೆ ಸಂವಹನ ಸೇತುವೆಯಾಗಿ ಕಾರ್ಯನಿರ್ವಹಿಸುತ್ತದೆ. ಪ್ರಭಾವಿಗಳ ಪ್ರಭಾವ, ಮಾಧ್ಯಮ ಕಾರ್ಯಕರ್ತರಿಗೆ ಪ್ರಾಣ ಬೆದರಿಕೆಗಳಂತಹ ಸಮಸ್ಯೆಗಳು ಭಾರತೀಯ ಮಾಧ್ಯಮಗಳು ಎದುರಿಸುತ್ತಿರುವ ಕೆಲವು ಸವಾಲುಗಳಾಗಿವೆ. ಈ ಸವಾಲುಗಳು ಪತ್ರಿಕಾ ಅಸ್ತಿತ್ವದ ಕಾರಣವನ್ನು ಪ್ರಶ್ನಿಸುತ್ತವೆ ಮತ್ತು ಇದರಿಂದಾಗಿ ದೇಶದ ಪ್ರಜಾಪ್ರಭುತ್ವ ರಚನೆಗೆ ಭಾರಿ ಅಪಾಯವಾಗಿದೆ.

ಪತ್ರಿಕಾ ಮಾಧ್ಯಮ ಎಂಬುದು ಸಮಾಜದ ಕನ್ನಡಿ ಎಂದು ಹೇಳಲಾಗುತ್ತದೆ, ಸತ್ಯವನ್ನು ಪ್ರತಿಬಿಂಬಿಸುತ್ತದೆ.

ಪತ್ರಿಕಾ ಸ್ವಾತಂತ್ರ್ಯ ಮತ್ತು ಸಮಾಜದ ಬಗ್ಗೆ ಅದು ಹೊಂದಿರುವ ಜವಾಬ್ದಾರಿಗಳ ಸಂಕೇತವಾಗಿದೆ, ಈ ದಿನವು ವಿಶ್ವದಲ್ಲೇ ಪತ್ರಿಕಾ ಸ್ವಾತಂತ್ರ್ಯವನ್ನು ಗುರುತಿಸುತ್ತದೆ. ಸಮಾಜದ ಅಂಕುಡೊಂಕುಗಳನ್ನು ಜಗದ ಮುಂದಿಡುವ ನಿರ್ಭೀತ ರಂಗದ ಸೇವೆಗೆ ಒಂದು ಸೆಲ್ಯೂಟ್ ಹೇಳೋಣವೇ...

> **ಅಂತರರಾಷ್ಟ್ರೀಯ ಪತ್ರಿಕಾ ಸ್ವಾತಂತ್ರ್ಯ ದಿನ**

> **ಪತ್ರಿಕಾ ಸೂಚ್ಯಂಕ,ಭಾರತ**
>
> **ವಿಶ್ವ ಪತ್ರಿಕಾ ಸ್ವಾತಂತ್ರ್ಯ ಸೂಚ್ಯಂಕದಲ್ಲಿ ಭಾರತವು ಸ್ಥಿರವಾಗಿ ಕಳಪೆ ಶ್ರೇಯಾಂಕವನ್ನು ಹೊಂದಿದೆ, ಇದು 2022 ರಲ್ಲಿ 150 ನೇ ಸ್ಥಾನದಲ್ಲಿದ್ದದ್ದು, 2023 ರಲ್ಲಿ 161 ಕ್ಕೆ ಇಳಿದಿದೆ. ಇತ್ತೀಚಿನ ಪತ್ರಕರ್ತರ ವಿರುದ್ಧದ ಹಿಂಸಾಚಾರಕ್ಕೆ ಇದಕ್ಕೆ ಕಾರಣವಾಗಿರಲೂಬಹುದು. 2021 ರಲ್ಲಿ ಈ ಸಮೀಕ್ಷೆಯನ್ನು ನಡೆಸುವವರೆಗೆ ದೇಶದಲ್ಲಿ ನಾಲ್ಕು ಪತ್ರಕರ್ತರು ಕೊಲ್ಲಲ್ಪಟ್ಟಿದ್ದರು ಮತ್ತು ಏಳು ಪತ್ರಕರ್ತರನ್ನು ಜೈಲಿನಲ್ಲಿಡಲಾಗಿತ್ತು. ವಿಶ್ವ ಪತ್ರಿಕಾ ಸ್ವಾತಂತ್ರ್ಯ ಸೂಚ್ಯಂಕವು ಕೇವಲ ಮಾಧ್ಯಮ ಸ್ವಾತಂತ್ರ್ಯದ ಸೂಚ್ಯಂಕವಲ್ಲ. ಇದು ರಾಜತಾಂತ್ರಿಕ ಸಾಧನವಾಗಿದೆ. ಸೂಚ್ಯಂಕದಲ್ಲಿನ ಶ್ರೇಯಾಂಕವು ಸಂಬಂಧಪಟ್ಟ ದೇಶಕ್ಕೆ ಅಂತರರಾಷ್ಟ್ರೀಯ ಮಟ್ಟದಲ್ಲಿ ಹಿನ್ನಡೆಯನ್ನು ತರಬಹುದು.**

# ಅಶ್ಲೀಲ ವಿಡಿಯೋ ಕುರಿತು ಮೌನಮುರಿದ ಪ್ರಜ್ವಲ್ ರೇವಣ್ಣ

• ಉದಯವಾಹಿನಿ, ಬೆಂಗಳೂರು

ರಾಷ್ಟ್ರ ರಾಜಕಾರಣದಲ್ಲಿ ವ್ಯಾಕ ಚರ್ಚೆಗೆ ಆಸ್ಪದ ಮಾಡಿಕೊಟ್ಟಿರುವ ಸಂಸದ ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪ್ರಕರಣ ಕ್ಷಣಕ್ಕೊಂದು ತಿರುವು ಪಡೆದುಕೊಳ್ಳುತ್ತಿದ್ದು, ಮಹತ್ವದ ಬೆಳವಣಿಗೆಯಲ್ಲಿ ಪ್ರಕರಣದ ಕುರಿತು ಪ್ರಜ್ವಲ್ ಮಾತನಾಡಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿರುವ ಸಂಸದ ಪ್ರಜ್ವಲ್ ರೇವಣ್ಣ, ಸತ್ಯ ಆದಷ್ಟು ಬೇಗ ಹೊರಬರಲಿದೆ ವಿಚಾರಣೆಗೆ ಹಾಜರಾಗಲು ನಾನು ಬೆಂಗಳೂರಿನಲ್ಲಿ ಇಲ್ಲದ ಕಾರಣ, ನಾನು ನನ್ನ ವಕೀಲರ ಮೂಲಕ ಅಖಆಗೆ ಮನವಿ ಮಾಡಿರುವುದಾಗಿ ತಿಳಿಸಿದ್ದಾರೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನನ್ನ ಕಕ್ಷಿದಾರರಾದ ಪ್ರಜ್ವಲ್ ರವರ ಮನೆಯ ಮೇಲೆ ತಮ್ಮ ಕಛೇರಿಯಿಂದ ಕಳುಹಿಸಿರುವ ನೋಟಿಸನ್ನು ಅಂಟಿಸಿರುವ ಬಗ್ಗೆ ನನಗೆ ನನ್ನ ಕಕ್ಷಿದಾರರಾದ ಶ್ರೀ ಪ್ರಜ್ವಲ್ ರವರ ಕುಟುಂಬದವರಿಂದ ಬಂದ ಮಾಹಿತಿ ಪ್ರಕಾರ ಕಲಂ 41 (ಎ) ಸಿ.ಆರ್.ಪಿ.ಸಿ ದಿನಾಂಕ:30-04-2024ರ ತಮ್ಮ ನೋಟಿಸ್?ನಲ್ಲಿ ತಾವು ದಿನಾಂಕ: 01-05-2024 ರಂದು ತಮ್ಮ ಮುಂದೆ. ಹಾಜರಾಗಲು ತಿಳಿಸಿರುತ್ತೀರಿ.

ಛಂಥ: ಆದರೆ ನನ್ನ ಕಕ್ಷಿದಾರರಾದಪ್ರಜ್ವಲ್ ರೇವಣ್ಣ ರವರು ಬೆಂಗಳೂರಿನಿಂದ ಹೊರಗಡೆ ಪ್ರವಾಸದಲ್ಲಿದ್ದು ಅವರಿಗೆ ನೋಟಿಸ್‌ನ ಬಗ್ಗೆ ವಿಷಯ ತಿಳಿಸಿದ್ದು, ನನ್ನ ಕಕ್ಷಿದಾರರು ಬೆಂಗಳೂರಿಗೆ ಬಂದು ತಮ್ಮ ಮುಂದೆ ನೋಟಿಸ್‌ನ ಸೂಚನೆಯಂತೆ ಹಾಜರಾಗಲು 7 ದಿನಗಳ ಕಾಲಾವಕಾಶ ಅಗತ್ಯವಿರುವುದಾಗಿ ತಿಳಿಸಿದ್ದು, ನನ್ನ ಕಕ್ಷಿದಾರರಿಗೆ ಸುಮಾರು 7 ದಿನಗಳ ಕಾಲಾವಕಾಶ ಕೊಟ್ಟು ಮತ್ತೊಂದು ದಿನಾಂಕದಂದು ತಮ್ಮ ಮುಂದೆ ವಿಚಾರಣೆಗಾಗಿ ಹಾಜರಾಗಲು ಅವಕಾಶ ನೀಡಬೇಕೆಂದು ಈ ಮೂಲಕ ತಮ್ಮಲ್ಲಿ ನನ್ನ ಕಕ್ಷಿದಾರರ ಪರವಾಗಿ ಕೋರುತ್ತೇನೆ ಎಂದು ಪ್ರಜ್ವಲ್ ವಕೀಲರು ಅಖಆಗೆ ನೀಡಲಾಗಿರುವ ಪತ್ರದಲ್ಲಿ ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

# ಕಾನೂನು ಸುವ್ಯವಸ್ಥೆ ಚೆನ್ನಾಗಿದೆ: ಗೃಹ ಸಚಿವರ ತಿರುಗೇಟು

## ಸುವ್ಯವಸ್ಥೆ ಹಿಂದಿನ ಸರ್ಕಾರದ ಅವಧಿಗಿಂತಲೂ ಚೆನ್ನಾಗಿಯೇ ಇದೆ: ಗೃಹ ಸಚಿವ ಡಾ. ಜಿ.ಪರಮೇಶ್ವರ್ ಆರೋಪ

• ಉದಯವಾಹಿನಿ, ದಾವಣಗೆರೆ

ಹಾಸನ ಸಂಸದ ಪ್ರಜ್ವಲ್ ರೇವಣ್ಣ ದೇಶ ಬಿಟ್ಟು ಪರಾರಿಯಾಗದಂತೆ ತಡೆಯುವಲ್ಲಿ ಕೇಂದ್ರ ಗುಪ್ತದಳ ವಿಫಲವಾಗಿದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಿಂದಿನ ಸರ್ಕಾರದ ಅವಧಿಗಿಂತಲೂ ಚೆನ್ನಾಗಿಯೇ ಇದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಅವರು ಆರೋಪಿಸಿದರು.

ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಅವರ ನಿವಾಸಕ್ಕೆ ಭೇಟಿ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಏರ್‌ಪೋರ್ಟ್, ಪಾಸ್‌ಪೋರ್ಟ್ ಕಚೇರಿ ಯಾರ ಅಧೀನದಲ್ಲಿ ಕೆಲಸ ಮಾಡುತ್ತಿವೆ. ಪ್ರಜ್ವಲ್ ರೇವಣ್ಣ ದೇಶ ಬಿಟ್ಟು ಹೋಗುತ್ತಿರುವ ಮಾಹಿತಿ ಕೇಂದ್ರ ಗುಪ್ತದಳಕ್ಕೆ ಇರಲಿಲ್ಲವೇ? ದೇಶ ಬಿಟ್ಟು ಹೋಗದಂತೆ ಪ್ರಜ್ವಲ್‌ನನ್ನು ನೀವೇಕೆ ತಡೆಯಲಿಲ್ಲ ಎಂದು ಪ್ರಶ್ನಿಸಿದರು.

ಪ್ರಜ್ವಲ್ ರೇವಣ್ಣ ದೇಶ ಬಿಟ್ಟು ಹೋದ ತಕ್ಷಣ ಪ್ರಕರಣದಿಂದ ಬಿಟ್ಟು ಬಿಡಲು ಸಾಧ್ಯವಿಲ್ಲ. ಪ್ರಜ್ವಲ್‌ಗೆ 41ಎ ಅಡಿ ನೋಟಿಸ್ ನೀಡಲಾಗಿದೆ. ವಿಚಾರಣೆಗಾಗಿ ಎಸ್‌ಐಟಿ ಮುಂದೆ ಹಾಜರಾಗಬೇಕು. ಆತನನ್ನು ವಿದೇಶದಿಂದ ಹೇಗೆ ಕರೆತರಬೇಕು ಎಂಬ ನಿಟ್ಟಿನಲ್ಲಿ ಎಸ್‌ಐಟಿ ಕೆಲಸ ಮಾಡುತ್ತಿದೆ. ಇದಕ್ಕೆ ಕೇಂದ್ರ ಸರ್ಕಾರದ ನೆರವು ಬೇಕಾಗುತ್ತದೆ ಎಂದು ತಿಳಿಸಿದರು. ಕೇಂದ್ರ ಗೃಹ ಸಚಿವ ಅಮಿತ್ ಷಾ ಹೇಳಿಕೆಯ ಕುರಿತು ಪ್ರತಿಕ್ರಿಯಿಸಿದ ಜಿ.ಪರಮೇಶ್ವರ, ರಾಜ್ಯದಲ್ಲಿ ಕಾನೂನು ಸುವಸ್ಯಸ್ಥೆ ಹಾಳಾಗಿದೆ ಎಂದು ಹೇಳಿರುವ ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರಿಗೆ ಮಾಹಿತಿ ಕೊರತೆ ಇದೆ. ತಮ್ಮ ಪಕ್ಷದ ರಾಜ್ಯ ಮುಖಂಡರಿಂದ ಮಾಹಿತಿ ತರಿಸಿಕೊಂಡು ಮಾತನಾಡಬೇಕಿತ್ತು. ಬಿಜೆಪಿ ಸರ್ಕಾರದ ಅವಧಿಯಲ್ಲಿ ರಾಜ್ಯದಲ್ಲಿ ಎಷ್ಟು ಕೊಲೆ ಸುಲಿಗೆ, ಅತ್ಯಾಚಾರ ಪ್ರಕರಣಗಳಾಗಿವೆ. ಡ್ರಗ್ಸ್ ದಂಧೆ ಯಾವ ಮಟ್ಟದಲ್ಲಿತ್ತು ಎಂಬುದನ್ನು ಅಂಕಿ-ಅಂಶ ಸಮೇತ ಸದನದಲ್ಲಿ ಉತ್ತರಿಸುತ್ತೇನೆ ಎಂದು ಹೇಳಿದರು.

ಬಿಜೆಪಿ ಸರ್ಕಾರದ ಅವಧಿಗಿಂತಲೂ ಕಾನೂನು ಸುವ್ಯವಸ್ಥೆ ಚೆನ್ನಾಗಿದೆ. ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣದ ಶಂಕಿತ ಉಗ್ರರನ್ನು ತ್ವರಿತಗತಿಯಲ್ಲಿ ಹಿಡಿಯುವಲ್ಲಿ ರಾಜ್ಯ ಪೊಲೀಸರ ಪಾತ್ರ ದೊಡ್ಡದಿದೆ. ಶಂಕಿತರು ಚೆನ್ನೈನಲ್ಲಿ ಟೋಪಿ ಖರೀದಿಸಿರುವ ಮಾಹಿತಿ ಸೇರಿದಂತೆ ಇನ್ನಿತರ ಮಾಹಿತಿಯನ್ನು ಕಲೆಹಾಕಿ, ಎನ್‌ಐಎ ಜೊತೆ ಹಂಚಿಕೊಳ್ಳಲಾಗಿತ್ತು. ರಾಜ್ಯ ಪೊಲೀಸರು ಮತ್ತು ಎನ್‌ಐಎ ಅಧಿಕಾರಿಗಳು ಜಂಟಿಯಾಗಿ ಆರೋಪಿಗಳನ್ನು ಹಿಡಿದಿದ್ದಾರೆ ಎಂದು ತಿಳಿಸಿದರು. ಹುಬ್ಬಳ್ಳಿ ಯವತಿ ನೇಹಾ ಹತ್ಯೆ ಪ್ರಕರಣದ ಆರೋಪಿಯನ್ನು ಘಟನೆ ನಡೆದ ಒಂದು ಗಂಟೆಯೊಳಗೆ ಹಿಡಿಯಲಾಗಿದೆ. ಕೂಲಂಕುಷವಾಗಿ ತನಿಖೆ ನಡೆಸಲು ಪ್ರಕರಣವನ್ನು ಸಿಐಡಿಗೆ ವಹಿಸಲಾಗಿದೆ. ಯಾವುದೇ ರೀತಿಯ ಕಾನೂನು ಬಾಹಿರ ಘಟನೆ ನಡೆದ ಕೂಡಲೇ ಕ್ರಮ ತೆಗೆದುಕೊಳ್ಳಲಾಗಿದೆ.


ಉದಯವಾಹಿನಿ ಚಿತ್ರ

> **ಪ್ರಕರಣದಲ್ಲಿ ಯಾರನ್ನು ರಕ್ಷಣೆ ಮಾಡುವ ಅಗತ್ಯ**
>
> **ಸಂಸದ ಪ್ರಜ್ವಲ್ ರೇವಣ್ಣ ಅವರದ್ದು ಎನ್ನಲಾದ ಅಶ್ಲೀಲ ವೀಡಿಯೋಗಳ ಕುರಿತು ರಾಜ್ಯ ಮಹಿಳಾ ಆಯೋಗವು ರಾಜ್ಯ ಸರ್ಕಾರಕ್ಕೆ ಪತ್ರ ಬರೆದ ಕೂಡಲೇ ಪ್ರಕರಣದ ಸೂಕ್ಷ್ಮತೆ ಮತ್ತು ಗಂಭೀರತೆಯನ್ನು ಅರಿತು ಎಡಿಜಿಪಿ ನೇತೃತ್ವದ ಎಸ್‌ಐಟಿ ತಂಡ ರಚಿಸಲಾಗಿದೆ. ತ್ವರಿತಗತಿಯಲ್ಲಿ ಕೂಲಂಕುಷವಾಗಿ ತನಿಖೆಗೆ ಸೂಚಿಸಿದ್ದೇವೆ. ಪ್ರಕರಣದಲ್ಲಿ ಯಾರನ್ನು ರಕ್ಷಣೆ ಮಾಡುವ ಅಗತ್ಯವಿಲ್ಲ ಎಂದರು.**

> **ಪ್ರಕರಣದ ಎಲ್ಲ ಸಂತ್ರಸ್ತರಿಗೆ ಸೂಕ್ತ ರಕ್ಷಣೆ ನೀಡಲಾಗುವುದು. ಅಶ್ಲೀಲ ದೃಶ್ಯಗಳು ಸಾಮಾಜಿಕ ಜಾಲತಾಣದಲ್ಲಿ ಹರಿದಾಡದಂತೆ ಕ್ರಮ ಕೈಗೊಳ್ಳಲಾಗುವುದು. ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ಎಲ್ಲಿಯೂ ಸಹ ಪೋಸ್ಟ್ ಆಗದಂತೆ ತಡೆಯುವ ನಿಟ್ಟಿನಲ್ಲಿ ಏಜೆನ್ಸಿಗಳಿಗೆ ಪತ್ರ ಬರೆಯಲಾಗುವುದು ಎಂದು ತಿಳಿಸಿದರು.**
>
> **- ಗೃಹ ಸಚಿವ ಡಾ. ಜಿ.ಪರಮೇಶ್ವರ್**

> **ಸಾವಿರಾರು ಕೋಟಿ ರೂ. ಮೌಲ್ಯದ ಡ್ರಗ್ಸ್ ನಾಶ ಪಡಿಸಲಾಗಿದೆ. ಡ್ರಗ್ಸ್ ಮುಕ್ತ ಕರ್ನಾಟಕ ನಿರ್ಮಾಣದ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಕೆಲಸ ಮಾಡುತ್ತಿದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಾಳಾಗಿದೆ ಎಂಬುದು ಸತ್ಯಕ್ಕೆ ದೂರವಾದುದು ಎಂದು ಹೇಳಿದರು.**
>
> **- ಗೃಹ ಸಚಿವ ಡಾ. ಜಿ.ಪರಮೇಶ್ವರ್**

## ದಿನ ಭವಿಷ್ಯ

| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
|---|---|---|
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ನಿಮಗಾಗಿ ಸಾಕಷ್ಟು ಸಮಯ ಹೊಂದಿರುವುದರಿಂದ ನಿಮ್ಮ ಒಳ್ಳೆಯ ಆರೋಗ್ಯದ ಸಲುವಾಗಿ ಒಂದು ಧೀರ್ಘ ನಡಿಗೆಗೆ ಹೋಗಿ. ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು.

**ವೃಷಭ** ನೀವು ಭಯವೆಂಬ ದೈತ್ಯನ ಜೊತೆ ಹೋರಾಡಲು ಸಿದ್ಧವಾಗುತ್ತಿದ್ದ ಹಾಗೆ ನಿಮ್ಮ ಆಲೋಚನೆಗಳನ್ನು ಸಕಾರಾತ್ಮಕವಾಗಿ ರೂಪಿಸಿಕೊಳ್ಳಿ. ಇಲ್ಲದಿದ್ದಲ್ಲಿ ನೀವು ಈ ರಾಕ್ಷಸನಿಗೆ ಒಬ್ಬ ಜಡ ಮತ್ತು ನಿಷ್ಕರುಣೆಯ ಬಲಿಯಾಗುತ್ತೀರಿ.

**ಮಿಥುನ** ನೀವು ನಿಮ್ಮ ದೈನಂದಿನ ಕಾರ್ಯಕ್ರಮಗಳಿಂದ ಬಿಡುವು ಮಾಡಿಕೊಂಡು ನಿಮ್ಮ ಸ್ನೇಹಿತರೊಂದಿಗೆ ಇಂದು ಹೊರಗೆ ಹೋಗಬೇಕು. ಪ್ರೀತಿಯ ಶಕ್ತಿ ನಿಮಗೆ ಪ್ರೀತಿಸಲು ಒಂದು ಕಾರಣ ನೀಡುತ್ತದೆ.

**ಕರ್ಕಾಟಕ** ನಿಮ್ಮ ಮನೆಯಲ್ಲಿ ಸ್ವಲ್ಪ ಸ್ವಚ್ಛತಾ ಕಾರ್ಯವನ್ನು ತಕ್ಷಣ ಕೈಗೊಳ್ಳಬೇಕು. ಪ್ರೀತಿಯಲ್ಲಿ ನಿರಾಶೆ ನಿಮ್ಮನ್ನು ಕಂಗೆಡಿಸುವುದಿಲ್ಲ. ನಿಮ್ಮ ಕೆಲಸದ ಪರಿಸರ ಇಂದು ಒಳ್ಳೆಯದಕ್ಕೆ ಬದಲಾಯಿಸಬಹುದು.

**ಸಿಂಹ** ಇಂದು ನೀವು ಹಣವನ್ನು ಉಳಿಸುವಲ್ಲಿ ಅನೇಕ ತೊಂದರೆಗಳನ್ನು ಎದುರಿಸಬೇಕಾಗುತ್ತದೆ ಕುಟುಂಬದವರು, ಮಕ್ಕಳು ಮತ್ತು ಸ್ನೇಹಿತರೊಂದಿಗೆ ಕಳೆದ ಸಮಯ ನಿಮ್ಮ ಚೈತನ್ಯವನ್ನು ಮರಳಿ ನೀಡಲು ಮುಕ್ತವಾಗಿರುತ್ತದೆ.

**ಕನ್ಯಾ** ಉತ್ತಮ ಆರೋಗ್ಯ ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸಲು ನಿಮ್ಮನ್ನು ಸಕ್ರಿಯಗೊಳಿಸುತ್ತದೆ. ಇಂದು ನೀವು ಸುಲಭವಾಗಿ ಬಂಡವಾಳ ಪಡೆಯಬಹುದು ?ಬಾಕಿಯಿರುವ ಸಾಲಗಳನ್ನು ಸಂಗ್ರಹಿಸಬಹುದು.

**ತುಲಾ** ಮಾದಕವಸ್ತುವಿನ ಅವಲಂಬನೆ ಹೆಚ್ಚುವ ಸಾಧ್ಯತೆಗಳಿರುವುದರಿಂದ ಸ್ವಯಂ ಔಷಧೋಪಚಾರ ಮಾಡಬೇಡಿ. ಆರ್ಥಿಕ ಸಮಸ್ಯೆ ರಚನಾತ್ಮಕವಾಗಿ ಯೋಚಿಸುವ ನಿಮ್ಮ ಸಾಮರ್ಥ್ಯವನ್ನು ಹಾಳುಮಾಡುತ್ತದೆ.

**ವೃಶ್ಚಿಕ** ಇಂದು ನಿಮ್ಮನ್ನು ಆವರಿಸುವ ಭಾವನಾತ್ಮಕ ಮನಸ್ಥಿತಿಯಿಂದ ನೀವು ಹೊರಬರಲು ಬಯಸಿದರೆ ಹಿಂದಿನದ್ದೆಲ್ಲವನ್ನೂ ಮರೆತುಬಿಡಬೇಕು. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು.

**ಧನಸ್ಸು** ನಿಮ್ಮ ಆರೋಗ್ಯದ ಬಗ್ಗೆ ವಿಶೇಷವಾಗಿ ರಕ್ತದೊತ್ತಡ ರೋಗಿಗಳ ಬಗ್ಗೆ ಸ್ವಲ್ಪ ಜಾಗ್ರತೆಯಿಂದಿರಿ. ದಿನದ ಆರಂಭದಲ್ಲಿ ಇಂದು ನೀವು ಯಾವುದೇ ಆರ್ಥಿಕ ನಷ್ಟವನ್ನು ಹೊಂದಿರಬಹುದು.

**ಮಕರ** ಯೋಗವನ್ನು ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗಾಗಿ ಆಚರಿಸಬೇಕು. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ಇತರರಿಗೆ ಪ್ರತಿಫಲಗಳು ತರುವ ನಿಮ್ಮ ಸಾಮರ್ಥ್ಯ ಪ್ರತಿಫಲ ತರುತ್ತದೆ.

**ಕುಂಭ** ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ನೀವು ನಿಮ್ಮ ಕೋಪವನ್ನು ನಿಯಂತ್ರಿಸಿ ಮತ್ತು ಕಚೇರಿಯಲ್ಲಿ ಎಲ್ಲರೊಂದಿಗೆ ಉತ್ತಮವಾಗಿ ವರ್ತಿಸಿ.

**ಮೀನ** ಅನಿರೀಕ್ಷಿತ ಅತಿಥಿಗಳು ಸಂಜೆ ನಿಮ್ಮ ಮನೆಯಲ್ಲಿ ತುಂಬಿರುತ್ತಾರೆ. ನಿಮ್ಮ ಮಾತುಗಳನ್ನು ಸರಿಯಾಗಿ ಸಾಬೀತುಪಡಿಸಲು ಇಂದು ನೀವು ನಿಮ್ಮ ಸಂಗಾತಿಯೊಂದಿಗೆ ಜಗಳವಾಡಬಹುದು.

## ಕಾಂಗ್ರೆಸ್ ಗ್ಯಾರಂಟಿ ಕಾರ್ಡ್ ವಿತರಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಇಂಡಿ

ಇಂಡಿ ತಾಲ್ಲೂಕಿನ ಅಥರ್ಗ. ಬೆನಕನಹಳ್ಳಿ. ಗೊರನಾಳ. ಪಡಗನೂರ ತಾಂಡಾ. ರಜನಾಳ ತಾಂಡಾ. ರಾಮಕೀರ್ತ ತಾಂಡಾ. ಶಿವಪುರ. ಸಿರಿಕ್ನಳ್ಳಿ ಗ್ರಾಮದಲ್ಲಿ ಸಾರ್ವಜನಿಕರಿಗೆ ಲೋಕಸಭೆ ಚುನಾವಣೆಯ ಕಾಂಗ್ರೆಸ್ ಗ್ಯಾರಂಟಿ ಕಾಡ್ರ್ಗಳನ್ನು ವಿತರಿಸಲಾಯಿತು. ಪಕ್ಷದ ಕಾರ್ಯಕರ್ತರು ಮನೆ ಮನೆಗೆ ತೆರಳಿ ಗ್ಯಾರಂಟಿ ಕಾರ್ಡ್ ವಿತರಣೆ ಮಾಡಿದರು. ಜಿಲ್ಲಾ ಎಸಿ. ಎಸ್ಟಿ. ಕಾಂಗ್ರೆಸ್ ಉಪಾಧ್ಯಕ್ಷ. ಶಿವಾನಂದ ಮುರಮಾನ. ಇವರ ನೇತೃತ್ವದಲ್ಲಿ ತಾಲ್ಲೂಕಿನ ಸುಮಾರು ಹಳ್ಳಿಗಳಲ್ಲಿ ಕಾಂಗ್ರೆಸ್ ಗ್ಯಾರಂಟಿ ಕಾರ್ಡಗಳು ಹಂಚಿಕೆ ಮಡ್ಡಿದರು. ಈ ಸಂದರ್ಭದಲ್ಲಿ ಕುಲಪ್ಪ ಸಿಂಗೆ. ರಾಕೇಶ್ ವಠಾರ. ರಾಕೇಶ್ ಕಬ್ಬೆ. ರಾಕೇಶ್ ಎಂಟಮನ. ರೇವಣ್ಣಸಿದ್ದ ಎಂಟಮನ. ಇನ್ನು ಅನೇಕ ಕಾಂಗ್ರೆಸ್ ಕಾರ್ಯಕರ್ತರು ಇದ್ದರು

## ನೀರಲ್ಲಿ ಮುಳುಗಿ ಇಬ್ಬರು ಯುವಕರ ಸಾವು


ಉದಯವಾಹಿನಿ ಚಿತ್ರ

• ಉದಯವಾಹಿನಿ ಲಿಂಗಸುಗೂರು

ತಾಲ್ಲೂಕಿನ ಜಾವೂರ ಕ್ರಾಸ್ ಬಳಿ ನಾರಾಯಣಪುರ ಬಲದಂಡೆ ಮುಖ್ಯ ನಾಲೆಗೆ ಬಟ್ಟೆ ತೊಳೆಯಲು ಹೋಗಿದ್ದ ಇಬ್ಬರು ಯುವಕರು ನೀರಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ. ಮೃತರನ್ನು ತಾಲ್ಲೂಕಿನ ಬೆಂಡೋಣಿ ಗ್ರಾಮದ ಲಕ್ಕಪ್ಪ ವಿರುಪಾಕ್ಷಪ್ಪ ಕಮರಿ (25), ಬಸವಂತ ಶರಣಪ್ಪ ಉಪ್ಪಾರ (27) ಎಂದು ಗುರುತಿಸಲಾಗಿದೆ. ಯುವಕರು ಕಾಲುವೆಯಲ್ಲಿ ಮುಳಗುತ್ತಿದ್ದಂತೆ ಸ್ಥಳೀಯರು ರಕ್ಷಣೆಗೆ ಮುಂದಾಗಿದ್ದಾರೆ. ಕಾಲುವೆಯಿಂದ ಹೊರಗಡೆ ತರುವಷ್ಟರಲ್ಲಿ ಯುವಕರು ಕೊನೆಯುಸಿರು ಎಳೆದಿದ್ದಾರೆ. ಘಟನಾ ಸ್ಥಳಕ್ಕೆ ತಲಪುವಷ್ಟರಲ್ಲಿ ಸ್ಥಳೀಯ ಈಜುಗಾರರು ಯುವಕರ ಮೃತದೇಹ ಹೊರಗಡೆ ತಂದಿದ್ದರು ಎಂದು ಅಗ್ನಿಶಾಮಕ ಠಾಣಾಧಿಕಾರಿ ಹೊನ್ನಪ್ಪ ದೊಡಮನಿ ತಿಳಿಸಿದರು.

## ಪ್ರಮುಖ ಬೀದಿಗಳಲ್ಲಿ ಪೊಲೀಸ್ ಪಥ ಸಂಚಲನ


ಉದಯವಾಹಿನಿ ಚಿತ್ರ

• ಉದಯವಾಹಿನಿ ಸಿರುಗುಪ್ಪ

ತಾಲ್ಲೂಕಿನ ತೆಕ್ಕಲಕೋಟೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಗುಜರಾತ್ ಪೊಲೀಸ್ ಪಡೆಯ 72 ಪೊಲೀಸರು ಲೋಕಸಭೆ ಚುನಾವಣೆ ಪ್ರಯುಕ್ತವಾಗಿ ಪೊಲೀಸ್ ಪಥ ಸಂಚಲನ ನಡೆಸಿದರು. ಈ ಸಂದರ್ಭದಲ್ಲಿ ತೆಕ್ಕಲಕೋಟೆ ವೃತ್ತದ ಸಿ ಪಿ ಐ ಸುಂದರೇಶ್ ಹೊಳೆಣ್ಣನವರ್, ಪಿಎಸ್ಐ ಗಳಾದ ತಾರಾಬಾಯಿ, ಪವರ್,ಎಂ. ವೆಂಕಟೇಶ್, ಗುಜರಾತ್ ಪೊಲೀಸ್ ಮೀಸಲು ಪಡೆಯ ಮುಖ್ಯಸ್ಥ ಜಡೇಜಾ ಇನ್ನೂ ಮುಂತಾದ ಪೊಲೀಸ್ ಮುಖ್ಯಸ್ಥರು ಭಾಗವಹಿಸಿದ್ದರು.

# ಪ್ರಜ್ವಲ್ ರೇವಣ್ಣಗೆ ಕಾನೂನಿನ ಪ್ರಕಾರ ಶಿಕ್ಷೆ ವಿಧಿಸಬೇಕು

### ಎಸ್.ಐ.ಟಿ ರಚನೆಗೂ ಮುನ್ನ ಪ್ರಜ್ವಲ್ ದೇಶ ಬಿಟ್ಟು ಹೋಗಿದ್ದಾನೆ, ಅದಕ್ಕೆ ಅವಕಾಶ ಮಾಡಿದ್ದು ಯಾರು?: ಪುಷ್ಪಾ ಅಮರನಾಥ್

• ಉದಯವಾಹಿನಿ ಬೀದರ್

ವಿಕೃತಕಾಮಿ ಉಮೇಶ್ ರೆಡ್ಡಿಗಿಂತ ಹತ್ತು ಪಟ್ಟು ಹೆಚ್ಚು ವಿಕೃತಕಾಮಿ ಸಂಸದ ಪ್ರಜ್ವಲ್ ರೇವಣ್ಣ ಎಂದು ಕಾಂಗ್ರೆಸ್ ಮಹಿಳಾ ಘಟಕದ ರಾಜ್ಯ ಅಧ್ಯಕ್ಷೆ ಪುಷ್ಪಾ ಅಮರನಾಥ್ ಆರೋಪಿಸಿದರು.

ಪ್ರಜ್ವಲ್ ರೇವಣ್ಣ ಒಬ್ಬ ನಾಲಾಯಕ್ ಸಂಸದ. ನಿರ್ಭಯಾ ಅತ್ಯಾಚಾರ, ವಿಕೃತಕಾಮಿ ಉಮೇಶ್ ರೆಡ್ಡಿ ಪ್ರಕರಣದ ಮಾದರಿಯಲ್ಲಿ ಅವರಿಗೆ ಕಾನೂನಿನ ಪ್ರಕಾರ ಶಿಕ್ಷೆ ವಿಧಿಸಬೇಕು. ಭವಿಷ್ಯದಲ್ಲಿ ಈ ರೀತಿಯ ಘಟನೆಗಳು ಮರುಕಳಿಸಬಾರದು ಎಂದು ಆಗ್ರಹಿಸಿದರು. ತಾಯಿ ಸ್ಥಾನದಲ್ಲಿರುವ ಪ್ರಧಾನಿ ನರೇಂದ್ರ ಮೋದಿಯವರು ಸಂತ್ರಸ್ತ ಮಹಿಳೆಯರಿಗೆ ರಕ್ಷಣೆ ಕೊಡುತ್ತೇನೆ ಎಂದು ಹೇಳಬೇಕಿತ್ತು. ಆದರೆ, ಅವರು ಹಾಗೇ ಮಾಡಿಲ್ಲ, ಅವರು ವಿಶ್ವಗುರು ಅಂತ ಅವರನ್ನು ಕರೆದುಕೊಳ್ಳುತ್ತಾರೆ. ಆದರೆ, ಸಂತ್ರಸ್ತೆಯರ ಪರ ಮಾತನಾಡಿಲ್ಲ. ಅವರ ಜೊತೆ ನಾವಿದ್ದೇವೆ ಎಂದು ಬಿಜೆಪಿ ಮುಖಂಡರಾದರೂ ಹೇಳಬೇಕಿತ್ತು ಎಂದರು. ಮೂರು ಸಾವಿರ ಹೆಣ್ಣು ಮಕ್ಕಳು ಇದ್ದೂ ಸತ್ತಂತಿದ್ದಾರೆ. ಅವರ ಬದುಕಿಗೆ ಭದ್ರತೆ ಇಲ್ಲದಂತಾಗಿದೆ. ಅದರ ಬಗ್ಗೆ ಬಿಜೆಪಿಯವರೇಕೆ ಮಾತನಾಡುತ್ತಿಲ್ಲ, ಮೋದಿ ಅವರ ಪರಿವಾರದಲ್ಲಿ ಕೊಳೆಗಟುಕರು ಇದ್ದಾರೆಯೇ? ಇಂತವರ ರಕ್ಷಣೆಗೆ ಕೇಂದ್ರ ಸರ್ಕಾರ ನಿಂತಿದೆಯೇ? ಬಿಲ್ಕಿಸ್ ಬಾನು, ಉನ್ನಾವ್‌ದಲ್ಲಿ ಜೀವಂತ ಸುಟ್ಟರೂ ಕೇಂದ್ರ ಸರ್ಕಾರ ಕ್ರಮ ಕೈಗೊಳ್ಳಲಿಲ್ಲ ಎಂದು ಆರೋಪಿಸಿದರು.

ಬದುಕಿಗೆ ಭದ್ರತೆ ಇಲ್ಲ

ಎಸ್.ಐ.ಟಿ ರಚನೆಗೂ ಮುನ್ನ ಪ್ರಜ್ವಲ್ ದೇಶ ಬಿಟ್ಟು ಹೋಗಿದ್ದಾನೆ. ಅದಕ್ಕೆ ಅವಕಾಶ ಮಾಡಿದ್ದು ಯಾರು? ವಿಮಾನ ನಿಲ್ದಾಣ ಪ್ರಾಧಿಕಾರ, ಪಾಸ್ ಪೋರ್ಟ್ ಇಲಾಖೆ ಕೇಂದ್ರದ ವ್ಯಾಪ್ತಿಗೆ ಬರುತ್ತೆ. ಹೀಗಿದ್ದರೂ ತಡೆಯಲಿಲ್ಲವೇಕೆ? ಎಂದು ಕೇಳಿದರು. ಹಾಸನದಲ್ಲಿ ನಡೆದ ಪೆನ್ ಡ್ರೈವ್ ಘಟನೆ ಇಡೀ ಜಗತ್ತನ್ನೇ ಬೆಚ್ಚಿ ಬೀಳಿಸಿದೆ. ಮನುಷ್ಯನ ಮನಃಸ್ಥಿತಿ ಈ ರೀತಿ ಇರುತ್ತದೆಯೇ? ಒಬ್ಬ ಬಿಜೆಪಿ ನಾಯಕ ಇದರ ಬಗ್ಗೆ ಮಾನವೀಯತೆ ದೃಷ್ಟಿಯಿಂದ ಪ್ರತಿಕ್ರಿಯಿಸಿಲ್ಲ. ನಾರಿಶಕ್ತಿ, ಮಹಿಳಾ ಸಬಲೀಕರಣ, ಬೇಟಿ ಬಚಾವೋ ಬೇಟಿ ಪಡಾವೋ ಎಂದು ಬಿಜೆಪಿಯವರು ಹೇಳುತ್ತಾರೆ. ಪ್ರಧಾನಿ ಮೋದಿ ಅವರು ಅವರ ಭಾಷಣಗಳಲ್ಲಿ ಮಹಿಳೆಯರ ಬದುಕು ಬಂಗಾರ ಮಾಡುತ್ತೇವೆ ಎನ್ನುತ್ತಾರೆ. ಮನೆಯ ವಯಸ್ಸಾದ ಅಡುಗೆ ಮಾಡುವವಳ ಮೇಲೆಯೂ ಪ್ರಜ್ವಲ್ ಅತ್ಯಾಚಾರ ಎಸಗಿ ವಿಕೃತಿ ತೋರಿಸಿದ್ದಾನೆ. ಮೋದಿ, ಕುಮಾರಸ್ವಾಮಿ ನೈತಿಕ ಹೊಣೆ ಹೊತ್ತು ರಾಜೀನಾಮೆ ಕೊಡಬೇಕು ಎಂದು ಆಗ್ರಹಿಸಿದರು. ಕಾಂಗ್ರೆಸ್ ಜಿಲ್ಲಾಧ್ಯಕ್ಷೆ ಪೂಜಾ ಜಾರ್ಜ್ ಸ್ಯಾಮುವೆಲ್, ರಾಜ್ಯ ಪ್ರಧಾನ ಕಾರ್ಯದರ್ಶಿ ವನಿಲಾ ಸೂರ್ಯವಂಶಿ, ಕೆಪಿಸಿಸಿ ಸದಸ್ಯೆಯರಾದ ಗುರಮ್ಮ ಸಿದ್ದಾರೆಡ್ಡಿ, ರಾಜಶ್ರೀ ಸ್ವಾಮಿ, ಅಕ್ಕಮಹಾದೇವಿ ಹಾಜರಿದ್ದರು.



> ಹಾಸನದ ಘಟನೆಯನ್ನು ಎನ್ ಡಿಎ ನಾಯಕರು ಸುಳ್ಳು ಎಂದು ಹೇಳುತ್ತಿದ್ದಾರೆ. ಒಂದುವೇಳೆ ಇದು ಸುಳ್ಳಾಗಿದ್ದರೆ ಪ್ರಜ್ವಲ್ ರೇವಣ್ಣ ದೇಶಬಿಟ್ಟು ಏಕೆ ಹೋಗುತ್ತಿದ್ದರು. ಮಾಧ್ಯಮಗಳಲ್ಲಿ ತನ್ನ ವಿರುದ್ಧ ಸುದ್ದಿ ಪ್ರಕಟಿಸಬಾರದು ಎಂದು ಇಂಜೆಕ್ಷನ್ ಆರ್ಡರ್ ತಂದಿದ್ದೇಕೆ? ತಪ್ಪು ಮಾಡಿರದಿದ್ದರೆ ಪ್ರಜ್ವಲ್ ನನ್ನು ಪಕ್ಷದಿಂದ ಉಚ್ಛಾಟಿಸಿದ್ದು ಏಕೆ? ಎಚ್.ಡಿ. ರೇವಣ್ಣ ವಿರುದ್ಧವೂ ಆರೋಪ ಕೇಳಿ ಬಂದಿದ್ದು ಅವರ ವಿರುದ್ಧವೂ ತನಿಖೆ ನಡೆಸಬೇಕಿದೆ - ಪುಷ್ಪಾ ಅಮರನಾಥ್

**ದಾರಿ ತಪ್ಪಿದವರು ಯಾರು**

ಗ್ಯಾರಂಟಿ ಯೋಜನೆಗಳಿಂದ ಹೆಣ್ಣು ಮಕ್ಕಳು ದಾರಿ ತಪ್ಪಿದ್ದಾರೆ ಎಂದು ಎಚ್.ಡಿ. ಕುಮಾರಸ್ವಾಮಿ ಹೇಳಿದ್ದಾರೆ. ಈಗ ದಾರಿ ತಪ್ಪಿದವರು ಯಾರು ಅಂತ ಹೇಳಬೇಕು? ಬಿಜೆಪಿ ನಾಯಕಿಯರಾದ ಸ್ಮೃತಿ ಇರಾನಿ, ಶೋಭಾ ಕರಂದ್ಲಾಜೆ, ಶ್ರುತಿ, ಮಾಳವಿಕಾ ಅವರು ಈಗೇಕೆ ಮಾತನಾಡುತ್ತಿಲ್ಲ ಎಂದು ಪ್ರಶ್ನಿಸಿದರು.

**ಸಾಲು ಸಾಲು ಪ್ರಶ್ನೆ**

ಕಾಂಗ್ರೆಸ್ ಮಹಿಳಾ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಮಂಜುಳಾ ನಾಯ್ಡು ಮಾತನಾಡಿ, ದೇಶದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ಮಹಿಳೆಯರ ಮಾಂಗಲ್ಯ ಕಸಿದುಕೊಳ್ಳುತ್ತಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸುಮಾರು ಮೂರು ಸಾವಿರ ಜನರ ಮಾಂಗಲ್ಯಸೂತ್ರ ಕಸಿದಿದ್ದರೂ ಮೋದಿಯವರೇಕೆ ಏನು ಮಾತಾಡುತ್ತಿಲ್ಲ. ಪ್ರಜ್ವಲ್‌ಗೆ ಚುನಾವಣೆಗೆ ಸ್ಪರ್ಧಿಸಲು ಅವಕಾಶ ಮಾಡಿಕೊಟ್ಟದ್ದೇಕೆ? ಪುರಾವೆ ಕೊಟ್ಟದ್ದರೂ ಟಿಕೆಟ್ ಕೊಟ್ಟದ್ದೇಕೆ? ಹೀಗೆ ಸಾಲು ಸಾಲು ಪ್ರಶ್ನೆಗಳನ್ನು ಕೇಳಿದರು.

## ತೆಕ್ಕಲಕೋಟೆ ಪಟ್ಟಣದಲ್ಲಿ ಕಾಂಗ್ರೆಸ್ ಗ್ಯಾರಂಟಿ ಕಾರ್ಡ್ ವಿತರಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಸಿರುಗುಪ್ಪ

ತಾಲ್ಲೂಕಿನ ತೆಕ್ಕಲಕೋಟೆ ಪಟ್ಟಣದ ಮೂರನೇ ವಾರ್ಡ, ಐದನೇ ವಾರ್ಡ್ ,ಆರನೇ ವಾರ್ಡ್ ಮತ್ತು ಏಳನೇ ವಾರ್ಡಪ್ರದೇಶಗಳಲ್ಲಿ ಆ ವಾರ್ಡಿನ ಸದಸ್ಯ ಎಂ. ನಸುರುದ್ದೀನ್, ಏನ್ .ಮಾಬುಸಾಬ್ , ಎಂ ಖಾದರ್ ವಲಿ ಇವರಗಳು.

ಸಿರುಗುಪ್ಪ ಕ್ಷೇತ್ರದ ಶಾಸಕರಾದ ಬಿ. ಎಂ. ನಾಗರಾಜ್ ರವರ ಆದೇಶದಂತೆ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಪಕ್ಷ ನುಡಿದಂತೆ ನಡೆದು 5 .ಗ್ಯಾರಂಟಿಗಳನ್ನು ಈಡೇರಿಸಿದಂತೆ ಮುಂದೆ ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ತಂದರೆ ಮಹಿಳಾ ನ್ಯಾಯ ಯೋಜನೆಯಲ್ಲಿ ಪ್ರತಿ ಬಡ ಕುಟುಂಬದ ಒಬ್ಬ ಮಹಿಳೆಗೆ ಪ್ರತಿ ವರ್ಷ ಒಂದು ಲಕ್ಷ ರೂಪಾಯಿ, ಹಾಗೂ ಯುವ ನ್ಯಾಯದಲ್ಲಿ, ಪ್ರತಿ ವಿದ್ಯಾವಂತ ಯುವಕರಿಗೆ ವರ್ಷಕ್ಕೆ ಒಂದು ಲಕ್ಷ ಶಿಷ್ಯವೇತನ, ರೈತ ನ್ಯಾಯದಲ್ಲಿ ,ಕೃಷಿ ಸಾಲ ಮನ್ನಾ ಪರಿಣಾಮಕಾರಿಯಾಗಿ ಜಾರಿಗೊಳಿಸಲು ಶಾಶ್ವತ ಆಯೋಗವನ್ನು ರಚಿಸುವುದು, ಶ್ರಮಿಕ ನ್ಯಾಯದಲ್ಲಿ, ಪ್ರತಿ ದಿನ 400 ರಾಷ್ಟ್ರೀಯ ಕನಿಷ್ಠ ವೇತನ, ಹಾಗೂ ಪಾಲುದಾರಿಕೆಯ ನ್ಯಾಯದಲ್ಲಿ, ಸಾಮಾಜಿಕ ಮತ್ತು ಆರ್ಥಿಕ ಸಮಾನತೆಯನ್ನು ಖಚಿತಪಡಿಸಿಕೊಳ್ಳಲು ರಾಷ್ಟ್ರವ್ಯಾಪ್ತಿ ಜನಗಣತಿ, ಹೀಗೆ ಸುಮಾರು 25 ಭರವಸೆಗಳ ಕಾಂಗ್ರೆಸ್ ಗ್ಯಾರಂಟಿ ಕಾರ್ಡುಗಳನ್ನು ಮನೆಮನೆಗೆ ತೆರಳಿ ಯೋಜನೆಗಳ ಬಗ್ಗೆ ಜನರಿಗೆ ಅರ್ಥವಾಗುವಂತೆ ತಿಳಿ ಹೇಳಿ ಕಾರ್ಡುಗಳನ್ನು ವಿತರಿಸಿ ಕೊಪ್ಪಳ ಲೋಕಸಭಾ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ಕೆ.ರಾಜಶೇಖರ್ ಹಿಟ್ನಾಳ್ ರವರ ಹಸ್ತದ ಗುರುತಿಗೆ ಮತ ಹಾಕಿ ಹಾಕಿಸುವಂತೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರಾದ ಹೆಚ್.ಎಂ ಮಲ್ಲಿಕಾರ್ಜುನ ಬಾಲಪ್ಪ , ಟಿ.ಎಂ. ಸಿದ್ದರಾಮಯ್ಯ ಸ್ವಾಮಿ, ಎಸ್. ನರೇಂದ್ರ ಸಿಂಹ, ಎಂ.ಎಸ್.ಬಂದೇನವಾಜ್,ಜಿ.ವೀರೇಶಪ್ಪ, ಹಾಗೂ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಸೇರಿ ಗ್ಯಾರಂಟಿ ಕಾರ್ಡ್ ವಿತರಿಸಿ ಕಾಂಗ್ರೆಸ್ ಪಕ್ಷದ ಹಸ್ತದ ಗುರುತಿಗೆ ಮತಯಾಚನೆ ಮಾಡಿದರು.

**25 ಭರವಸೆಗಳ ಕಾಂಗ್ರೆಸ್ ಗ್ಯಾರಂಟಿ**

## ದೇಶದ ಕಾರ್ಮಿಕರು ಹಿಂದೂಗಳಲ್ಲವೇ: ವರಲಕ್ಷ್ಮಿ

• ಉದಯವಾಹಿನಿ ಬೀದರ್

ಕೇಸರಿ ಶಾಲು ಧರಿಸಿದವರು ಹಿಂದೂಗಳು, ದೇಶದ ಕಾರ್ಮಿಕರು ಹಿಂದೂಗಳಲ್ಲವೇ ಎಂದು ಸಿಐಟಿಯು ರಾಜ್ಯ ಘಟಕದ ಅಧ್ಯಕ್ಷೆ ಎಸ್. ವರಲಕ್ಷ್ಮಿ ಪ್ರಶ್ನಿಸಿದರು.

ನಗರದಲ್ಲಿ ಬುಧವಾರ 18ನೇ ಲೋಕಸಭಾ ಚುನಾವಣೆ ಮತ್ತು ಕಾರ್ಮಿಕರು ಸಿಐಟಿಯು ಪ್ರಣಾಳಿಕೆ ಬಿಡುಗಡೆಗೊಳಿಸಿ ಮಾತನಾಡಿದರು.

ಕೇಂದ್ರದ ಬಿಜೆಪಿ ಸರ್ಕಾರ ಹಿಂದುತ್ವ, ಹಿಂದೂಗಳ ಬಗ್ಗೆ ಮಾತನಾಡುತ್ತದೆ. ಆದರೆ, ಈ ದೇಶದ ಕಾರ್ಮಿಕರು ಹಿಂದೂಗಳಲ್ಲವೇ? ಅವರ ಹಕ್ಕಿನ ಬಗ್ಗೆ ಏಕೆ ಮಾತನಾಡುವುದಿಲ್ಲ ಎಂದು ಕೇಳಿದರು. ಕೇಂದ್ರ ಸರ್ಕಾರದ ಅಡಿಯಲ್ಲಿರುವ 'ಇಂಡಿಯನ್ ಲೇಬರ್ ಕಾನ್ಫರೆನ್ಸ್'ಗೆ ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷರಾಗಿದ್ದಾರೆ.


ಉದಯವಾಹಿನಿ ಚಿತ್ರ

ಆದರೆ, ಹತ್ತು ವರ್ಷಗಳಲ್ಲಿ ಅವರು ಒಂದೇ ಒಂದು ಸಭೆ ನಡೆಸಿ ಕಾರ್ಮಿಕರ ಅಹವಾಲು ಆಲಿಸಿಲ್ಲ. ಬೌದ್ಧಿಕ, ದೈಹಿಕ ಶ್ರಮಶಕ್ತಿ ಇಲ್ಲದಿದ್ದರೆ ಸಮಾಜವಿರಲು ಸಾಧ್ಯವೇ? 45 ಕಾರ್ಮಿಕ ಕಾನೂನುಗಳನ್ನು ಕೇಂದ್ರ ನಾಲ್ಕು ಸಂಹಿತೆಗಳಾಗಿ ಮಾಡಿ, ಕಾರ್ಮಿಕರ ಹಕ್ಕುಗಳನ್ನು ಮೊಟಕುಗೊಳಿಸಲು ಮುಂದಾಗಿದೆ. ಕಾರ್ಮಿಕ ವಿರೋಧಿ ನೀತಿ ಅನುಸರಿಸುತ್ತಿರುವ ಎನ್ ಡಿಎ ಮೈತ್ರಿಕೂಟದ ಅಭ್ಯರ್ಥಿಗಳ ವಿರುದ್ಧ ಕಾರ್ಮಿಕರು ಮತ ಚಲಾಯಿಸಬೇಕು ಎಂದು ಹೇಳಿದರು.

## ಲೀಡ್ ಕೊಡದಿದ್ದರೆ ಕರೆಂಟ್ ಕಟ್: ರಾಜು ಕಾಗೆ

• ಉದಯವಾಹಿನಿ ಚಿಕ್ಕೋಡಿ

ಲೋಕಸಭಾ ಚುನಾವಣೆ ಪ್ರಚಾರದ ವೇಳೆ ಶಾಸಕ ರಾಜು ಕಾಗೆ ಯಡವಟ್ಟು ಹೇಳಿಕೆ ನೀಡಿ ಜನರ ಆಕ್ರೋಶಕ್ಕೆ ಗುರಿಯಾಗಿದ್ದಾರೆ. ಹೇಗಾದರೂ ಮತ ಸೆಳೆಯುವ ಭರದಲ್ಲಿ ಕಾಂಗ್ರೆಸ್‌ಗೆ ಲೀಡ್ ಕೊಡದಿದ್ದರೆ ಕರೆಂಟ್ ಕಟ್ ಮಾಡುತ್ತೇವೆ ಎಂದು ಹೇಳಿದ್ದು ವಿವಾದಕ್ಕೆ ಕಾರಣವಾಗಿದೆ.

ಕಾಗವಾಡ ತಾಲ್ಲೂಕಿನ ಜುಗುಳ ಗ್ರಾಮದ ಪ್ರಚಾರ ಸಭೆಯಲ್ಲಿ ಮಾತನಾಡುತ್ತಾ ಶಾಸಕ ರಾಜು ಕಾಗೆ, ' ವಿಧಾನಸಭಾ ಚುನಾವಣೆಯಲ್ಲಿ 400 ಮತಗಳು ಕಡಿಮೆ ಬಂದ ಕಾರಣಕ್ಕೆ ಕರೆಂಟ್ ಮಾತ್ರ ತೆಗಿತಿದಿವಿ, ಈ ಲೋಕಸಭಾ ಚುನಾವಣೆಯಲ್ಲಿ ಪಕ್ಷಕ್ಕೆ ಲೀಡ್ ಬರದಿದ್ದರೆ ಕರೆಂಟ್ ಕೊಡಲ್ಲ ಎಂದು ಮತದಾರರಿಗೆ ಬೆದರಿಕೆ ಹಾಕಿದ್ದಾರೆ . ಈ ಬಗ್ಗೆ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದೆ. ಕಾಗವಾಡದ ಮಮದಾಪುರ ಗ್ರಾಮದಲ್ಲಿ ಮಾತನಾಡುತ್ತಾ ಶಾಸಕ ರಾಜು ಕಾಗೆ 'ಮೋದಿ ಒಮ್ಮೆ ಸತ್ತರೆ ದೇಶದಲ್ಲಿ ಯಾರೂ ಪ್ರಧಾನಿ ಆಗುವುದೇ ಇಲ್ಲವೇ? ಯುವಕರು ಮೋದಿ ಮೋದಿ ಅಂತೀರಲ್ಲ ಮೋದಿದು ತಗೊಂಡು ಏನಾದ್ರೂ ನೆಕ್ಕೊದಕ್ಕೆ ಬೇಕಾ? ' ಎಂದು ಹೇಳಿದ್ದಾರೆ.




> ನಾನು ಒಬ್ಬ ಪದವೀಧರ ದೇಶವನ್ನು ಸಮರ್ಥವಾಗಿ ಮುನ್ನಡೆಸುತ್ತೇನೆ. ರಾಜ್ಯದಲ್ಲಿ ಸತೀಶ್ ಜಾರಕಿಹೊಳಿ, ರಾಜು ಕಾಗೆ, ಲಕ್ಷ್ಮಣ ಸವದಿ ಬೇಕು ಆದರೆ ಕೇಂದ್ರದಲ್ಲಿ ಮೋದಿನೇ ಬೇಕು . ಮೋದಿ ಅವರ ಪರವಾಗಿ ಮತ ಹಾಕಿ ಅಂತ ಅಭ್ಯರ್ಥಿ ಕೇಳ್ತಾನೆ ಆದರೆ ಅವನೇನು ಮಾಡಿದ್ದಾನೆ ಅಂತ ಹೇಳಲ್ಲ? ಇದರಿಂದ ಸುಖನೂ ಇಲ್ಲ ದಃಖನೂ ಇಲ್ಲ ಏನು ಪ್ರಯೋಜನಾ ಇಲ್ಲ -ರಾಜು ಕಾಗೆ

## ಅಂಬೇಡ್ಕರ್ ಪುತ್ಥಳಿಗೆ ಅಪಮಾನ: ಆರೋಪಿ ಕುಟುಂಬಸ್ಥರ ಮೇಲೆ ಹಲ್ಲೆ, ಪ್ರತಿಭಟನೆ

• ಉದಯವಾಹಿನಿ ಕಲಬುರಗಿ

ಕೋಟನೂರು (ಡಿ) ಪ್ರದೇಶದ ಡಾ. ಬಿ.ಆರ್. ಅಂಬೇಡ್ಕರ್ ಪುತ್ಥಳಿಗೆ ಅಪಮಾನ ಮಾಡಿದ್ದ ಆರೋಪಿಯೊಬ್ಬರ ಮನೆಗೆ ನುಗ್ಗಿದ ಗುಂಪೊಂದು ಕುಟುಂಬ ಸದಸ್ಯರ ಮೇಲೆ ಹಲ್ಲೆ ಮಾಡಿದ್ದಾರೆ ಎಂದು ಆರೋಪಿಸಿದ ಕುಟುಂಬಸ್ಥರು ಹಾಗೂ ಅವರ ಬೆಂಬಲಿಗರು ಬುಧವಾರ ಪ್ರತಿಭಟನೆ ನಡೆಸಿದರು.

ಜನವರಿ 23ರಂದು ಅಂಬೇಡ್ಕರ್ ಪುತ್ಥಳಿಗೆ ಅಪಮಾನ ಮಾಡಿದ ಪ್ರಕರಣದ ಆರೋಪಿ ಸಂಗಮೇಶ ಅವರು ಮಂಗಳವಾರ ಜಾಮೀನಿನ ಮೇಲೆ ಬಿಡುಗಡೆ ಯಾಗಿದ್ದರು. ಇದನ್ನು ತಿಳಿದ ಗುಂಪೊಂದು ಮಂಗಳವಾರ ರಾತ್ರಿ ಸಂಗಮೇಶ ಅವರ ಮನೆಗೆ ನುಗ್ಗಿ, ಕುಟುಂಬ ಸದಸ್ಯರ ಮೇಲೆ ಹಲ್ಲೆ ಮಾಡಿದ್ದಾರೆ ಎಂದು ಸಂಗಮೇಶ ಸಹೋದರ ಶಿವಕುಮಾರ ಹೇಳಿದರು. ಸಂಗಮೇಶ ಅವರ ಅಣ್ಣನ ಪತ್ನಿ ರಾಜೇಶ್ವರಿ, ತಮ್ಮ ಅನಿಲ್ ಕುಮಾರ್, ಚಿಕ್ಕಪ್ಪ


ಉದಯವಾಹಿನಿ ಚಿತ್ರ

ಮಹಾದೇವಪ್ಪ, ತಾಯಿಯಾದ ತಂಗೆಮ್ಮ ಅವರು ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಮನೆಯ ಸಮೀಪ ನಿಲ್ಲಿಸಿದ್ದ ಒಂದು ಕಾರು, ನಾಲ್ಕು ಬೈಕ್‌ಗಳಿಗೆ ಹಾನಿಯಾಗಿದೆ.

ಇದುವರೆಗೂ ಪ್ರಕರಣ ದಾಖಲಿಸಿಕೊಂಡಿಲ್ಲ ಎಂದು ಆರೋಪಿಸಿದರು. ಪುತ್ಥಳಿಗೆ ಅಪಮಾನ ಪ್ರಕರಣದಲ್ಲಿ ನನ್ನ ಪತಿ ಬಂಧಿತನಾಗಿ ವಿಚಾರಣೆ ಎದುರಿಸುತ್ತಿದ್ದಾರೆ. ಅವರು ತಪ್ಪು ಮಾಡಿದ್ದು ಸಾಬೀತಾದರೆ ಕಾನೂನಿನ ಅನ್ವಯ ಶಿಕ್ಷೆಯಾಗಲಿ ನಮ್ಮದು ಯಾವುದೇ ತಕರಾರು ಇಲ್ಲ. ಆದರೆ, ಜಾಮೀನಿನ ಮೇಲೆ ಬಿಡುಗಡೆಯಾಗಿದ್ದಕ್ಕೆ ಕುಟುಂಬ ಸದಸ್ಯರ ಮೇಲೆ ಹಲ್ಲೆ ಮಾಡುವುದು ಎಷ್ಟು ಸರಿ? ಇದು ಯಾವ ನ್ಯಾಯ? ಮನೆಗೆ ನುಗ್ಗಿ ಹೊಡೆದಿದ್ದಾರೆ. ರಕ್ಷಣೆಗೆ ಪೊಲೀಸರು ಬರಲಿಲ್ಲ' ಎಂದು ಸಂಗಮೇಶ ಪತ್ನಿ ಪ್ರಿಯಾಂಕಾ ಹೇಳಿದರು.

**ಹಲ್ಲೆ ಮಾಡುವುದು ಎಷ್ಟು ಸರಿ? ಇದು ಯಾವ ನ್ಯಾಯ?**

## ಪ್ರಜ್ವಲ್ ಪ್ರಕರಣ ಸಿಬಿಐಗೆ ವಹಿಸಿ: ಬೈರತಿ ಬಸವರಾಜ್

• ಉದಯವಾಹಿನಿ ಹೊಸಪೇಟೆ

ಪ್ರಜ್ವಲ್ ರೇವಣ್ಣ ಭಾಗಿಯಾಗಿದ್ದಾರೆಂದು ಹೇಳಲಾಗಿರುವ ಲೈಂಗಿಕ ಹಗರಣದ ತನಿಖೆಯನ್ನು ಸಿಬಿಐಗೆ ವಹಿಸಬೇಕು, ಸಿಐಡಿ ತನಿಖೆಯಿಂದ ವಾಸ್ತವ ಅಂಶ ಹೊರಬರುವ ವಿಶ್ವಾಸ ಇಲ್ಲ ಎಂದು ಬಿಜೆಪಿ ಶಾಸಕ ಬೈರತಿ ಬಸವರಾಜ್ ಹೇಳಿದರು.

ಇಲ್ಲಿ ಬುಧವಾರ ಬಳ್ಳಾರಿ ಲೋಕಸಭಾ ಅಭ್ಯರ್ಥಿ ಬಿ.ಶ್ರೀರಾಮುಲು ಅವರ ಜತೆಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿಐಡಿ ತನಿಖೆಯಿಂದ ವಾಸ್ತವ ಹೊರಬರಲಾರದು ಎಂದು ಎಚ್.ಡಿ.ಕುಮಾರಸ್ವಾಮಿ ಅವರು ಸಂಶಯ ವ್ಯಕ್ತಪಡಿಸಿದ್ದರಲ್ಲಿ ಅರ್ಥವಿದೆ.

ಹೀಗಾಗಿ ಸಿಬಿಐ ತನಿಖೆ ನಡೆಸಿದರೆ ಮಾತ್ರ ವಾಸ್ತವ ಹೊರಬರಲಿದೆ ಎಂಬುದು ಬಿಜೆಪಿಯ ನಿಲುವೂ ಆಗಿದೆ ಎಂದರು.

'ಪ್ರಜ್ವಲ್ ಪ್ರಕರಣದಿಂದ ಚುನಾವಣೆಯ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ. ಉತ್ತರ ಕರ್ನಾಟಕ ಭಾಗದಲ್ಲಿ ಮತದಾರರು ಈಗಾಗಲೇ ಮೋದಿ ಅವರ ಕೈ ಬಲಪಡಿಸಲು ನಿರ್ಧರಿಸಿದ್ದಾರೆ. ಹೆಣ್ಣುಮಕ್ಕಳನ್ನು ಲೈಂಗಿಕ ದೌರ್ಜನ್ಯಕ್ಕೆ ಒಳಪಡಿಸಿದವರನ್ನು ರಕ್ಷಿಸುವ ಪ್ರಶ್ನೆಯೇ ಇಲ್ಲ. ಈಗಾಗಲೇ ಕೇಂದ್ರ ಗೃಹ ಸಚಿವರೇ ಈ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ' ಎಂದು ಬೈರತಿ ಬಸವರಾಜ್ ಹೇಳಿದರು.


ಉದಯವಾಹಿನಿ ಚಿತ್ರ

> ನೇಹಾ ಪ್ರಕರಣಕ್ಕೆ ಪ್ರಜ್ವಲ್ ಪ್ರಕರಣವನ್ನು ಹೋಲಿಸಲಾಗದು. ನೇಹಾ ಅವರನ್ನು ಚಾಕುವಿನಿಂದ ಚುಚ್ಚಿ ಚುಚ್ಚಿ ಕೊಂದದ್ದನ್ನು ಇಡೀ ದೇಶ ನೋಡಿ ಬೆಚ್ಚಿಬಿದ್ದಿದೆ. ಲೈಂಗಿಕ ಹಗರಣದಲ್ಲಿ ಸಾವಿರಾರು ಮಹಿಳೆಯರಿಗೆ ಅನ್ಯಾಯ ಆಗಿರುವ ವಿಚಾರ ಇದೀಗ ತನಿಖೆಯ ಹಂತದಲ್ಲಿದೆ. ಸತ್ಯ ಹೊರಬಂದೇ ಬರುತ್ತದೆ, ತಪ್ಪು ಮಾಡಿದವರಿಗೆ ಶಿಕ್ಷೆ ಆಗಲೇಬೇಕು' ಎಂದು ಅವರು ಹೇಳಿದರು. -ಬೈರತಿ ಬಸವರಾಜ್

## ನೀಟ್ ಆಕಾಂಕ್ಷಿ ಆತ್ಮಹತ್ಯೆ: 48 ಗಂಟೆಗಳಲ್ಲಿ 2ನೇ ಪ್ರಕರಣ

• ಉದಯವಾಹಿನಿ ಕೋಟಾ

ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ (ನೀಟ್) ಪರೀಕ್ಷೆಯಲ್ಲಿ ತೇರ್ಗಡೆಯಾಗುವ ಮೂರನೇ ಪ್ರಯತ್ನಕ್ಕೆ ಕೆಲವೇ ದಿನಗಳ ಮೊದಲು 20 ವರ್ಷದ ವೈದ್ಯಕೀಯ ಆಕಾಂಕ್ಷಿಯೊಬ್ಬ ತನ್ನ ಕೋಣೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಕೋಟಾದಲ್ಲಿ ನಡೆದಿದೆ.

ಮೃತ ವಿದ್ಯಾರ್ಥಿಯನ್ನು ರಾಜಸ್ಥಾನದ ಧೋಲ್ಪುರ್ ನಿವಾಸಿ ಭರತ್ ಕುಮಾರ್ ರಜಪೂತ್ ಎಂದು ಗುರುತಿಸಲಾಗಿದೆ. ಅವರು ಮಂಗಳವಾರ ಬೆಳಿಗ್ಗೆ ಸೀಲಿಂಗ್ ಫ್ಯಾನ್ ಗೆ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ. ಈ ಘಟನೆಯು ಕಳೆದ 48 ಗಂಟೆಗಳಲ್ಲಿ ಕೋಟಾದಲ್ಲಿ ನಡೆದ ಎರಡನೇ ಶಂಕಿತ ಆತ್ಮಹತ್ಯೆ ಪ್ರಕರಣವಾಗಿದೆ. ರಜಪೂತ್ ಈ ಹಿಂದೆ ಎರಡು ಬಾರಿ ನೀಟ್ ಪರೀಕ್ಷೆ ಬರೆದಿದ್ದರು ಮತ್ತು ಮೇ 5 ರಂದು ಮೂರನೇ ಪ್ರಯತ್ನಕ್ಕೆ ಹಾಜರಾಗಲು ಸಜ್ಜಾಗಿದ್ದರು ಎಂದು ಜವಾಹರ್ ನಗರ ಸಬ್ ಇನ್ಸ್ಪೆಕ್ಟರ್ ಗೋಪಾಲ್ ಸಿಂಗ್ ತಿಳಿಸಿದ್ದಾರೆ. ಕೋಣೆಯಲ್ಲಿ ಕಂಡುಬಂದ ಒಂದು ಸಾಲಿನ ಟಿಪ್ಪಣಿಯಲ್ಲಿ, ಕ್ಷಮಿಸಿ ಅಪ್ಪಾ, ಈ ವರ್ಷವೂ ನಾನು ಅದನ್ನು ಮಾಡಲು ಸಾಧ್ಯವಾಗಲಿಲ್ಲ ಎಂದು ಡೆತ್ ನೋಟ್ ಬರೆದಿಟ್ಟಿದ್ದಾರೆ. ವರದಿಯಾದ ಪ್ರಕರಣವು ಜನವರಿಯಿಂದ ಕೋಟಾದಲ್ಲಿ ಕೋಚಿಂಗ್ ವಿದ್ಯಾರ್ಥಿ ಆತ್ಮಹತ್ಯೆ ಮಾಡಿಕೊಂಡ ಒಂಬತ್ತನೇ ಪ್ರಕರಣವಾಗಿದೆ. ಕಳೆದ ವರ್ಷ, ಕೋಚಿಂಗ್ ಹಬ್ನಲ್ಲಿ ವಿದ್ಯಾರ್ಥಿಗಳ ಆತ್ಮಹತ್ಯೆಗಳ ಸಂಖ್ಯೆ 26 ಕ್ಕೆ ತಲುಪಿದೆ. ಮೃತ ವಿದ್ಯಾರ್ಥಿ ರಾಜೀವ್ ಗಾಂಧಿ ನಗರ ಪ್ರದೇಶದಲ್ಲಿ ಪೇಯಿಂಗ್ ಗೆಸ್ಟ್ ಆಗಿ ವಾಸಿಸುತ್ತಿದ್ದು, ಕಳೆದ ಒಂದು ವರ್ಷದಿಂದ ವೈದ್ಯಕೀಯ ಪ್ರವೇಶ ಪರೀಕ್ಷೆಗೆ ತಯಾರಿ ನಡೆಸುತ್ತಿದ್ದ ಎಂದು ಪೊಲೀಸರು ತಿಳಿಸಿದ್ದಾರೆ. ಅವರ ಸೋದರಳಿಯ ರೋಹಿತ್ ಅವರೊಂದಿಗೆ ಕೊಠಡಿಯನ್ನು ಹಂಚಿಕೊಂಡರು ಮತ್ತು ನೀಟ್ ಪರೀಕ್ಷೆಗಳಿಗೆ ತಯಾರಿ ನಡೆಸುತ್ತಿದ್ದರು.

# ಲಂಬಾಣಿ ತಾಂಡಾ ಅಭಿವೃದ್ಧಿಗೆ ಬಿಜೆಪಿ ಕಾರಣ: ಬೊಮ್ಮಾಯಿ

### • ನಾನು ನಿಮ್ಮ ಸಹೋದರನಾಗಿ ಸಮುದಾಯಕ್ಕೆ ಸಿಗಬೇಕಾದ ನ್ಯಾಯಯುತ ಮೀಸಲಾತಿ ಕೊಡಿಸಲು ಬದ್ದನಾಗಿದ್ದೇನೆ

• ಉದಯವಾಹಿನಿ ಹಾವೇರಿ

ಕಾಂಗ್ರೆಸ್‌ನವರು ಲಂಬಾಣಿ ಸಮುದಾಯದ ಮೀಸಲಾತಿಯನ್ನು ಕಡಿಮೆ ಮಾಡಿದ್ದಾರೆ. ನಾನು ನಿಮ್ಮ ಸಹೋದರನಾಗಿ ಸಮುದಾಯಕ್ಕೆ ಸಿಗಬೇಕಾದ ನ್ಯಾಯಯುತ ಮೀಸಲಾತಿ ಕೊಡಿಸಲು ಬದ್ದನಾಗಿದ್ದೇನೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.ಅವರು ಇಂದು ಬಂಜಾರ ಸಮುದಾಯದ ಕೃಷ್ಣಾಪುರ ಮಠದ ಆವರಣದಲ್ಲಿ ಲಂಬಾಣಿ ಸಮುದಾಯದ ಸಮಾವೇಶ ಉದ್ಘಾಟಿಸಿ ಮಾತನಾಡಿದರು.

ಪ್ರಜಾಪ್ರಭುತ್ವದಲ್ಲಿ ಅತ್ಯಂತ ಕಟ್ಟಕಡೆಯ ಸಮಾಜದ ಧ್ವನಿ ಕೇಳಬೇಕು. ಅದು ಕೇಳಲು ಸಮಾಜ ಸಂಘಟನೆ ಆಗಬೇಕು. ಈ ಸಮಾಜ ದೇವರ ವರದಾನ ಇರುವ ಸಮಾಜ, ಸಂತ ಸೇವಾಲಾಲ್ ಅವರ ಆಶೀರ್ವಾದ ಇರುವ ಸಮಾಜ, ಅತ್ಯಂತ ಕಷ್ಟದಲ್ಲಿರುವ ಜನರು ನೀವು. ನೀವು ಬಹಳ ಕಷ್ಟಪಟ್ಟು ನಿಮ್ಮ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಿದ್ದೀರಿ, ಅವರಿಗೆ ಅವಕಾಶ ಕೊಟ್ಟರೆ ದೊಡ್ಡ ಸ್ಥಾನಗಳನ್ನು ಪಡೆಯುತ್ತಾರೆ. ಸರ್ಕಾರ ಕೈ ಹಿಡಿದರೆ ಈ ಸಮುದಾಯದ ಯುವಕರು ಉನ್ನತ ಸ್ಥಾನ ಪಡೆಯುತ್ತಾರೆ ಎಂದರು.

ದೇಶದ ಎಲ್ಲಾ ಭಾಗಗಳಲ್ಲಿ ಇರುವ ಕೆಲವೇ ಕೆಲವು ಸಮುದಾಯಗಳಲ್ಲಿ ಬಂಜಾರ ಸಮುದಾಯವೂ ಒಂದು. ಈ ಸಮುದಾಯ ಮುಂದೆ ಬರಲು ವಿದ್ಯೆ ಮತ್ತು ಉದ್ಯೋಗದಲ್ಲಿ ಅವಕಾಶ ದೊರೆಯಬೇಕು.

ಈ ಸಮುದಾಯ ಅಂಬೇಡ್ಕರ್ ಅವರನ್ನು ನೆನಪಿಡಬೇಕು. ಅಂಬೇಡ್ಕರ್ ಅವರು ಎಸ್ಸಿ ಎಸ್ಟಿಗೆ ವಿಶೇಷ ಮೀಸಲಾತಿ ನೀಡಿ ಅವಕಾಶ ಕೊಟ್ಟರು. ಬಂಜಾರಾ ಸಮಾಜವನ್ನು ಎಸ್ಸಿಗೆ ಸೇರಿಸಿದ್ದು ದೇವರಾಜ ಅರಸರು. ಈ ರಾಜ್ಯದಲ್ಲಿ ಸಾಮಾಜಿಕ ನ್ಯಾಯದ ಹರಿಕಾರರು ದೇವರಾಜ ಅರಸರು ಮಾತ್ರ, ಎಂದರು.

ಕಾಂಗ್ರೆಸ್ ನ ಒಬ್ಬ ನಾಯಕರು ಬಂಜಾರ ಸಮುದಾಯವನ್ನು ಎಸ್ಸಿ ಪಟ್ಟಿಯಿಂದ ಕೈ ಬಿಡಬೇಕು ಎಂದು ಸುಪ್ರೀಂ ಕೋರ್ಟ್‌ಗೆ ಹೋಗಿದ್ದರು.

ಸುಪ್ರೀಂ ಕೋರ್ಟ್ ರಾಜ್ಯ ಸರ್ಕಾರದ ಅಭಿಪ್ರಾಯ ಕೇಳಿತ್ತು ನಾನು ಸಮುದಾಯದ ಬಗ್ಗೆ ಮೈಸೂರು ಮಹಾರಾಜರ ಕಾಲದಿಂದ ಸಂಪೂರ್ಣ ಅಧ್ಯಯನ ಮಾಡಿ ಈ ಸಮುದಾಯ ಎಸ್ಸಿಯಲ್ಲಿ ಇರಬೇಕು ಎಂದು ಆದೇಶ ಮಾಡಿದ್ದೇನೆ. ಅದು ಸುಪ್ರೀಂ ಕೋರ್ಟ್‌ನಲ್ಲಿ ವಿಚಾರಣೆ ನಡೆಯುತ್ತಿದೆ ಎಂದರು.

**ಸಮಾಜದ ಅಭಿವೃದ್ಧಿ ಆಗಬೇಕು**



> ಎಲ್ಲಾ ತಾಂಡಾಗಳು ಕಂದಾಯ ಗ್ರಾಮಗಳಾಗಿ ಪರಿವರ್ತನೆ ಆಗಬೇಕು. ಕೇಂದ್ರ, ರಾಜ್ಯದ ಎಲ್ಲಾ ಯೋಜನೆಗಳು ತಾಂಡಾಗಳಿಗೆ ಬರಬೇಕು ಇದು ನನ್ನ ಬದ್ದತೆ. ನಾನು ಬಂಜಾರ ಸ್ವಾಮೀಜಿ ಶ್ರೀ ಕುಮಾರ ಮಹಾರಾಜರ ಆಶೀರ್ವಾದ ಪಡೆದಿದ್ದೇನೆ. ಅವರು ಸಮಾಜದ ಅಭಿವೃದ್ಧಿ ಆಗಬೇಕು ಅಂತ ಹೇಳಿದ್ದಾರೆ. ನಾನು ಈ ಸಮುದಾಯದ ಸೋದರನಾಗಿ ಜೊತೆಯಲ್ಲಿರುತ್ತೇನೆ. ವಿಶೇಷವಾಗಿ ತಾಯಂದಿರು ಮುಖ್ಯವಾಹಿನಿಗೆ ಬರಬೇಕು. ನಿಮ್ಮ ಕೌಶಲ್ಯವನ್ನು ವಿಶ್ವಕ್ಕೆ ಪರಿಚಯಿಸಿ, ವಿಶೇಷ ಕಾರ್ಯಕ್ರಮ ರೂಪಿಸಿ ನಿಮ್ಮ ಆದಾಯ ಹೆಚ್ಚಳ ಮಾಡುವ ಎಲ್ಲಾ ಪ್ರಯತ್ನ ಮಾಡುತ್ತೇನೆ. ನಿಮ್ಮ ಸಹೋದರನಾಗಿ ಲೋಕಸಭೆಯಲ್ಲಿ ಧ್ವನಿ ಎತ್ತುತ್ತೇನೆ
> – ಬೊಮ್ಮಾಯಿ, ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ

### ಬಿಎಸ್‌ವೈ ಸಿಎಂ ಆಗಿದ್ದಾಗ ತಾಂಡಾ ಅಭಿವೃದ್ಧಿ ನಿಗಮ

ಲಂಬಾಣಿ ತಾಂಡಾಗಳ ಅಭಿವೃದ್ಧಿಗೆ ಬಿಜೆಪಿ ಕಾರಣ. ಯಡಿಯೂರಪ್ಪ ಸಿಎಂ ಆಗಿದ್ದಾಗ ತಾಂಡಾ ಅಭಿವೃದ್ಧಿ ನಿಗಮ ಮಾಡಿದ್ದೇವೆ. ನಾವು ಲಂಬಾಣಿ ಸಮುದಾಯದ ಮೀಸಲಾತಿಯನ್ನು 4.5 ಕ್ಕೆ ಹೆಚ್ಚಿಗೆ ಮಾಡಿದ್ದೇವೆ. ಕಾಂಗ್ರೆಸ್ ಅದನ್ನು 3% ಕ್ಕೆ ಇಳಿಸಿದೆ. ಈ ಬಗ್ಗೆ ಕಾಂಗ್ರೆಸ್ ನಾಯಕರನ್ನು ಪ್ರಶ್ನಿಸಬೇಕು ಎಂದು ಹೇಳಿದರು. ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಸಮಾವೇಶಕ್ಕೂ ಮುನ್ನ ಬಂಜಾರ ಸಮುದಾಯದ ಸ್ವಾಮೀಜಿ ಮಹಾನ್ ತಪಸ್ವಿ ಡಾ. ಶ್ರೀ ಕುಮಾರ ಮಹಾರಾಜರ ಆಶೀರ್ವಾದ ಪಡೆದರು.




# ಪ್ಲೇ ಆಫ್ ಆಸೆ ಜೀವಂತವಿರಿಸಿದ ಪಂಜಾಬ್

## ಈ ಆವೃತ್ತಿಯಲ್ಲಿ ಚೆನ್ನೈಗೆ ತವರಿನಲ್ಲಿ ಎದುರಾದ 2ನೇ ಸೋಲಾಗಿದೆ

ಪ್ಲೇಆಫ್ ಆಸೆಯನ್ನು ಜೀವಂತವಿರಿಸಲು ಗೆಲ್ಲಲೇ ಬೇಕಾದ ಮಹತ್ವದ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್‌ತಂಡ ಹಾಲಿ ಚಾಂಪಿಯನ್ ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ಅವರದ್ದೇ ನೆಲದಲ್ಲಿ 7 ವಿಕೆಟ್‌ಗಳಿಂದ ಮಗುಚಿ ಹಾಕಿದೆ. ಇದು ಈ ಆವೃತ್ತಿಯಲ್ಲಿ ಚೆನ್ನೈಗೆ ತವರಿನಲ್ಲಿ ಎದುರಾದ 2ನೇ ಸೋಲಾಗಿದೆ. ಇದಕ್ಕೂ ಮುನ್ನ ಲಕ್ನೋ ವಿರುದ್ಧ ಸೋಲು ಕಂಡಿತ್ತು. ಜಾನಿ ಬೇರ್‌ಸ್ಟೋ(46 ರನ್) ಮತ್ತು ರಾಹುಲ್ ಚಹರ್ (16ಕ್ಕೆ 2 ವಿಕೆಟ್) ಪಂಜಾಬ್ ಗೆಲುವಿನ ಪ್ರಮುಖ ರೂವಾರಿಗಳಾಗಿ ಮೂಡಿಬಂದರು.

ಇಲ್ಲಿನ ಎಂ.ಎ ಚಿದಂಬರಂ ಸ್ಟೇಡಿಯಂನಲ್ಲಿ ನಡೆದ ಐಪಿಎಲ್‌ನ 49 ಪಂದ್ಯದಲ್ಲಿ ಟಾಸ್ ಗೆದ್ದು ಬೌಲಿಂಗ್ ಆಯ್ದುಕೊಂಡ ಪಂಜಾಬ್ ಇದಕ್ಕೆ ತಕ್ಕ ಪ್ರದರ್ಶನ ನೀಡುವು ಮೂಲಕ ಚೆನ್ನೈ ತಂಡವನ್ನು 162 ರನ್‌ಗೆ ಕಟ್ಟಿಹಾಕಿತು. ಸಾಧಾರಣ ಮೊತ್ತದ ಗುರಿಯನ್ನು ಅಷ್ಟೇ ಸೊಗಸಾಗಿ ಬೆನ್ನಟ್ಟಿದ ಪಂಜಾಬ್ ಬ್ಯಾಟರ್‌ಗಳು 17.5 ಓವರ್‌ಗಳಲ್ಲಿ ಕೇವಲ 3 ವಿಕೆಟ್‌ಗೆ 163 ರನ್ ಬಾರಿಸಿ ಗೆಲುವಿನ ಪತಾಕೆ ಹಾರಿಸಿದರು. ಚೇಸಿಂಗ್ ವೇಳೆ ಕಳೆದ ಪಂದ್ಯದ ಶತಕ ವೀರ ಜಾನಿ ಬೇರ್‌ಸ್ಟೋ 46 ರನ್ ಬಾರಿಸಿ ಈ ಪಂದ್ಯದಲ್ಲಿಯೂ ತಮ್ಮ ಬ್ಯಾಟಿಂಗ್ ಪ್ರತಾಪ ತೋರಿದರು. ಆರಂಭದಿಂದಲೇ ಬಿರುಸಿನ ಬ್ಯಾಟಿಂಗ್‌ಗೆ ಒತ್ತು ಕೊಟ್ಟ ಅವರು ಪ್ರತಿ ಓವರ್‌ನಲ್ಲಿಯೂ ಕನಿಷ್ಠ ಒಂದು ಬೌಂಡರಿ ಅಥವಾ ಸಿಕ್ಸರ್ ಬಾರಿಸುತ್ತಲೇ ಮುನ್ನುಗಿದರು. ಇವರಿಗೆ 2ನೇ ಕ್ರಮಾಂಕದಲ್ಲಿ ಆಡಲಿಳಿದ ದಕ್ಷಿಣ ಆಫ್ರಿಕಾದ ಹಾರ್ಡ್ ಹಿಟ್ಟರ್ ರೀಲಿ ರೂಸೊ ಉತ್ತಮ ಸಾಥ್ ನೀಡಿದರು. ಬೇರ್‌ಸ್ಟೋ ವಿಕೆಟ್ ಪತನದ ಬಳಿಕ ಇವರು ತಂಡವನ್ನು ಆಧರಿಸಿದರು. 23 ಎಸೆತ ಎದುರಿಸಿ 43(5 ಬೌಂಡರಿ, 2 ಸಿಕ್ಸರ್) ರನ್ ಬಾರಿಸಿದರು. ಅಂತಿಮವಾಗಿ ಶಶಾಂಕ್ ಸಿಂಗ್(25) ಮತ್ತು ಹಂಗಾಮಿ ನಾಯಕ ಸ್ಯಾಮ್ ಕರನ್(26) ಅಜೇಯರಾಗಿ ಉಳಿದು ತಂಡವನ್ನು ಗೆಲುವಿನ ದಡ ಸೇರಿಸಿದರು. ಇದೇ ವೇಳೆ ಶಶಾಂಕ್ ಟಿ20 ಕ್ರಿಕೆಟ್‌ನಲ್ಲಿ 2 ಸಾವಿರ ರನ್‌ಗಳ ಗಡಿ ದಾಡಿದರು.




### ದುಬೆ ಬ್ಯಾಟಿಂಗ್ ವಿಫಲ

ಈ ಆವೃತ್ತಿಯಲ್ಲಿ ಇಂಪ್ಯಾಕ್ಟ್ ಆಟಗಾರನಾಗಿ ಕಣಕ್ಕಿಳಿಯುತ್ತಿದ್ದ ಶಿವಂ ದುಬೆ ಎಲ್ಲಾ ಪಂದ್ಯಗಳಲ್ಲಿಯೂ ಉತ್ತಮ ಬ್ಯಾಟಿಂಗ್ ಪ್ರದರ್ಶನ ತೋರಿದ್ದರು. ಆದರೆ ಟಿ20 ವಿಶ್ವಕಪ್‌ಗೆ ಆಯ್ಕೆಯಾದ ಮರು ಪಂದ್ಯದಲ್ಲಿಯೇ ಗೋಲ್ಡನ್ ಡಕ್ ಸಂಕಟಕ್ಕೆ ಸಿಲುಕಿದರು. ಹರ್‌ಪ್ರೀತ್ ಬ್ರಾರ್ ಎಸೆತದಲ್ಲಿ ಎಲ್ ಬಿಡಬ್ಲ್ಯು ಬಲೆಗೆ ಬಿದ್ದರು. ಮೊಯಿನ್ ಅಲಿ ಕ್ಯಾಚ್‌ನಿಂದ ಒಂದು ಜೀವದಾನ ಪಡೆದರೂ ಕೂಡ ಇದರ ಲಾಭವೆತ್ತಲು ವಿಫಲರಾದರು. 15 ರನ್ ಗಳಿಸಿ ರಾಹುಲ್ ಚಹರ್ ಎಸೆತದಲ್ಲಿ ಕ್ಲೀನ್ ಬೌಲ್ಡ್ ಆದರು. ಮಹೇಂದ್ರ ಸಿಂಗ್ ಧೋನಿ 11 ಎಸೆತಗಳಿಂದ 14 ರನ್ ಗಳಿಸಿ ರನೌಟ್ ಆದರು.

### ಚೆನ್ನೈಗೆ ಗಾಯಕ್ವಾಡ್ ಆಸರೆ

ಮೊದಲು ಬ್ಯಾಟಿಂಗ್ ನಡೆಸಿದ ಚೆನ್ನೈ ತಂಡ ಉತ್ತಮ ಆರಂಭವೇನೊ ಪಡೆಯಿತು. ನಾಯಕ ಋತುರಾಜ್ ಗಾಯಕ್ವಾಡ್ ಮತ್ತು ಅನುಭವಿ ಹಾಗೂ ಹಿರಿಯ ಆಟಗಾರ ಅಜಿಂಕ್ಯ ರಹಾನೆ ಸೇರಿಕೊಂಡು ಮೊದಲ ವಿಕೆಟ್‌ಗೆ 64 ರನ್ ಒಟ್ಟುಗೂಡಿಸಿದರು. ರಹಾನೆ 29 ರನ್ ಗಳಿಸಿ ವಿಕೆಟ್ ಕಳೆದುಕೊಂಡರು. ಉತ್ತಮ ಸ್ಥಿತಿಯಲ್ಲಿದ್ದ ಚೆನ್ನೈ ರಹಾನೆ ವಿಕೆಟ್ ಪತನದ ಬಳಿಕ ದಿಢೀರ್ ಕುಸಿತ ಕಂಡಿತು. ಸತತವಾಗಿ ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿತು. ಒಂದೆಡೆ ಸಹ ಆಟಗಾರರ ವಿಕೆಟ್ ಬೀಳುತ್ತಿದ್ದರೂ ಕೂಡ ಮತ್ತೊಂದು ತುದಿಯಲ್ಲಿ ಕ್ರೀಸ್ ಕಚ್ಚಿ ನಿಂತ ಗಾಯಕ್ವಾಡ್ ತಮ್ಮ ಶಕ್ತಿ ಮೀರಿದ ಬ್ಯಾಟಿಂಗ್ ಪ್ರದರ್ಶನದ ಮೂಲಕ ತಂಡದ ಮೊತ್ತವನ್ನು ಹಿಗ್ಗಿಸುವ ಪ್ರಯತ್ನ ಮುಂದುವರಿಸಿದರು. ಒಂದು ಹಂತದಲ್ಲಿ ಸಮೀರ್ ರಿಜ್ವಿ ಅವರಿಂದ ಸಣ್ಣ ಮಟ್ಟದ ಜತೆಯಾಟದ ಬೆಂಬಲ ಸಿಕ್ಕರೂ ಕೂಡ ಇದು ಹೆಚ್ಚು ಹೊತ್ತು ಸಾಗಲಿಲ್ಲ. 21 ರನ್ ಗಳಿಸಿದ್ದ ವೇಳೆ ರಿಜ್ವಿ ಕೂಡ ಔಟಾದರು. ಗಾಯಕ್ವಾಡ್ 48 ಎಸೆತಗಳಿಂದ 5 ಬೌಂಡರಿ ಮತ್ತು 2 ಸಿಕ್ಸರ್ ಬಾರಿಸಿ 62 ರನ್ ಗಳಿಸಿದರು.

# ಹಾರ್ದಿಕ್ ಆಯ್ಕೆಗೆ ಮಾನದಂಡ

ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್ 2024) ಸೀಸನ್ 17ರ ಪ್ರದರ್ಶನದ ಆಧಾರದ ಮೇಲೆ ಟೀಮ್ ಇಂಡಿಯಾವನ್ನು ಆಯ್ಕೆ ಮಾಡಿರುವುದು ಸ್ಪಷ್ಟ. ಇದಕ್ಕೆ ಸಾಕ್ಷಿ ಸಂಜು ಸ್ಯಾಮ್ಸನ್, ರಿಷಭ್ ಪಂತ್ ಹಾಗೂ ಶಿವಂ ದುಬೆಗೆ ಭಾರತ ತಂಡದಲ್ಲಿ ಸ್ಥಾನ ಸಿಕ್ಕಿರುವುದು. ಆದರೆ ಇದೇ ಐಪಿಎಲ್‌ನಲ್ಲಿ ಕಳಪೆ ಪ್ರದರ್ಶನ ನೀಡಿರುವ ಹಾರ್ದಿಕ್ ಪಾಂಡ್ಯರನ್ನು ಯಾವ ಆಧಾರದ ಮೇಲೆ ಆಯ್ಕೆ ಮಾಡಲಾಗಿದೆ

ಟಿ20 ವಿಶ್ವಕಪ್‌ಗಾಗಿ 15 ಸದಸ್ಯರ ಭಾರತ ತಂಡವನ್ನು ಘೋಷಿಸಲಾಗಿದೆ. ಈ ತಂಡದ ನಾಯಕನಾಗಿ ರೋಹಿತ್ ಶರ್ಮಾ ಕಾಣಿಸಿಕೊಂಡರೆ, ಉಪನಾಯಕನಾಗಿ ಹಾರ್ದಿಕ್ ಪಾಂಡ್ಯ ಆಯ್ಕೆಯಾಗಿದ್ದಾರೆ. ಅಚ್ಚರಿ ಎಂದರೆ ಕಳಪೆ ಫಾಮ್‌ನಲ್ಲಿರುವ ಪಾಂಡ್ಯ ಈ ಬಾರಿಯ ಟಿ20 ವಿಶ್ವಕಪ್‌ಗೆ ಆಯ್ಕೆಯಾಗುವುದು ಡೌಟ್ ಎನ್ನಲಾಗಿತ್ತು.

ಆದರೆ ಉಪನಾಯಕನ ಸ್ಥಾನದೊಂದಿಗೆ ಹಾರ್ದಿಕ್ ಪಾಂಡ್ಯ ಟೀಮ್ ಇಂಡಿಯಾದಲ್ಲಿ ಕಾಣಿಸಿಕೊಂಡಿದ್ದಾರೆ. ಇದರ ಬೆನ್ನಲ್ಲೇ ಪಾಂಡ್ಯ ಆಯ್ಕೆಗೆ ಮಾನದಂಡವೇನು ಎಂಬ ಪ್ರಶ್ನೆಗಳು ಹುಟ್ಟಿಕೊಂಡಿದೆ. ಇದಕ್ಕೆ ಮುಖ್ಯ ಕಾರಣ ಮುಂಬೈ ಇಂಡಿಯನ್ಸ್ ತಂಡದ ನಾಯಕ ಕಳಪೆ ಫಾರ್ಮ್‌ನಲ್ಲಿರುವುದು.

ಈ ಹಿಂದೆ ಏಕದಿನ ವಿಶ್ವಕಪ್ ವೇಳೆ ಗಾಯಗೊಂಡು ಅರ್ಧದಲ್ಲೇ ಟೂರ್ನಿ ತೊರೆದಿದ್ದ ಹಾರ್ದಿಕ್ ಪಾಂಡ್ಯ ಈ ಬಾರಿಯ ಐಪಿಎಲ್ ಮೂಲಕ ಮತ್ತೆ ಮೈದಾನಕ್ಕಿಳಿದಿದ್ದರು. ಇದರ ನಡುವೆ ಯಾವುದೇ ಸ್ಪರ್ಧಾತ್ಮಕ ಪಂದ್ಯವಾಡಿಲ್ಲ ಎಂಬುದು ಇಲ್ಲಿ ಉಲ್ಲೇಖಾರ್ಹ. ಇನ್ನು ಮುಂಬೈ ಇಂಡಿಯನ್ಸ್ ತಂಡದ ನಾಯಕನಾಗಿ ಕಾಣಿಸಿಕೊಂಡ ಹಾರ್ದಿಕ್ ಪಾಂಡ್ಯ ಈ ಬಾರಿಯ ಐಪಿಎಲ್‌ನಲ್ಲಿ ನೀಡಿರುವ ಪ್ರದರ್ಶನ ಕೂಡ ಅಷ್ಟಕಷ್ಟೇ. ಅಂದರೆ ಈವರೆಗೆ 10 ಪಂದ್ಯಗಳನ್ನಾಡಿರುವ ಪಾಂಡ್ಯ 131 ಎಸೆತಗಳನ್ನು ಎದುರಿಸಿ ಕಲೆಹಾಕಿರುವುದು ಕೇವಲ 197 ರನ್‌ಗಳು ಮಾತ್ರ. ಮತ್ತೊಂದೆಡೆ ಪರಿಪೂರ್ಣ ಆಲ್‌ರೌಂಡರ್ ಆಗಿಯೂ ಕಾಣಿಸಿಕೊಂಡಿಲ್ಲ. ಅಂದರೆ 10 ಪಂದ್ಯಗಳಲ್ಲಿ ಪಾಂಡ್ಯ ಎಸೆದಿರುವುದು ಕೇವಲ 23 ಓವರ್‌ಗಳನ್ನು ಮಾತ್ರ. ಈ ವೇಳೆ 253 ರನ್‌ಗಳನ್ನು ನೀಡಿ ಕೇವಲ 6 ವಿಕೆಟ್ ಪಡೆದಿದ್ದಾರೆ.

ಅಂದರೆ ಬ್ಯಾಟಿಂಗ್‌ನಲ್ಲಿ ಕೇವಲ 21ರ ಸರಾಸರಿಯಲ್ಲಿ ರನ್ ಕಲೆಹಾಕಿರುವ ಹಾರ್ದಿಕ್ ಪಾಂಡ್ಯ, ಬೌಲಿಂಗ್‌ನಲ್ಲಿ ಪ್ರತಿ ಓವರ್‌ಗೆ 11 ರನ್‌ಗಳನ್ನು ಬಿಟ್ಟು ಕೊಟ್ಟಿದ್ದಾರೆ. ಇಂತಹ ಕಳಪೆ ಫಾರ್ಮ್‌ನಲ್ಲಿರುವ ಆಟಗಾರನನ್ನು ವಿಶ್ವಕಪ್ ಟೂರ್ನಿಗೆ ಯಾವ ಆಧಾರದ ಮೇಲೆ ಆಯ್ಕೆ ಮಾಡಲಾಗಿದೆ ಎಂಬುದೇ ಈಗ ಟೀಮ್ ಇಂಡಿಯಾ ಅಭಿಮಾನಿಗಳ ಪ್ರಶ್ನೆ.

ಟಿ20 ವಿಶ್ವಕಪ್‌ಗೆ ಭಾರತ ತಂಡ: ರೋಹಿತ್ ಶರ್ಮಾ (ನಾಯಕ), ಹಾರ್ದಿಕ್ ಪಾಂಡ್ಯ (ಉಪನಾಯಕ), ಯಶಸ್ವಿ ಜೈಸ್ವಾಲ್, ವಿರಾಟ್ ಕೊಹ್ಲಿ, ಸೂರ್ಯಕುಮಾರ್ ಯಾದವ್, ರಿಷಭ್ ಪಂತ್, ಸಂಜು ಸ್ಯಾಮ್ಸನ್, ಶಿವಂ ದುಬೆ, ರವೀಂದ್ರ ಜಡೇಜಾ, ಅಕ್ಸರ್ ಪಟೇಲ್, ಕುಲ್ದೀಪ್ ಯಾದವ್, ಯುಜ್ವೇಂದ್ರ ಚಹಲ್, ಅರ್ಷದೀಪ್ ಸಿಂಗ್, ಮೊಹಮ್ಮದ್ ಸಿರಾಜ್, ಜಸ್‌ಪ್ರೀತ್ ಬುಮ್ರಾ. ||| ಮೀಸಲು ಆಟಗಾರರು: ಶುಭ್‌ಮನ್ ಗಿಲ್, ಅವೇಶ್ ಖಾನ್, ರಿಂಕು ಸಿಂಗ್, ಖಲೀಲ್ ಅಹ್ಮದ್.



# ಟಿ20 ವಿಶ್ವಕಪ್ ತಂಡದ ಬದಲಾವಣೆಗೆ ಇನ್ನೂ ಇದೆ ಅವಕಾಶ!

ಟಿ20 ವಿಶ್ವಕಪ್‌ಗೆ ಆಯ್ಕೆ ಮಾಡಲಾದ 15 ಸದಸ್ಯರ ತಂಡದಲ್ಲಿ ರಿಂಕು ಸಿಂಗ್, ಶುಭ್‌ಮನ್ ಗಿಲ್ ಹಾಗೂ ಕೆಎಲ್ ರಾಹುಲ್‌ಗೆ ಚಾನ್ಸ್ ಸಿಕ್ಕಿಲ್ಲ. ಹಾಗೆಯೇ ಭರ್ಜರಿ ಫಾರ್ಮ್‌ನಲ್ಲಿರುವ ಆರ್‌ಸಿಬಿ ದಾಂಡಿಗ ದಿನೇಶ್ ಕಾರ್ತಿಕ್ ಅವರನ್ನು ಸಹ ಆಯ್ಕೆಗೆ ಪರಿಗಣಿಸಲಾಗಿಲ್ಲ. ಇದಾಗ್ಯೂ ಈ ಆಟಗಾರರನ್ನು ತಂಡಕ್ಕೆ ಆಯ್ಕೆ ಮಾಡಿಕೊಳ್ಳಲು ಮೇ 25 ರವರೆಗೆ ಅವಕಾಶವಿದೆ. ಟಿ20 ವಿಶ್ವಕಪ್‌ಗಾಗಿ 15 ಸದಸ್ಯರ ಭಾರತ ತಂಡವನ್ನು ಪ್ರಕಟಿಸಲಾಗಿದೆ. ಆದರೆ ಇದುವೇ ಫೈನಲ್ ತಂಡ ಎಂದೇಳಲು ಬರುವುದಿಲ್ಲ. ಏಕೆಂದರೆ ಮೇ 25 ರವರೆಗೆ ತಂಡದಲ್ಲಿ ಬದಲಾವಣೆ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ. ಅಂದರೆ ಟಿ20 ವಿಶ್ವಕಪ್ ಆರಂಭಕ್ಕೂ ಒಂದು ವಾರ ಮುಂಚಿತವಾಗಿ ತಂಡದಲ್ಲಿ ಬದಲಾವಣೆ ಮಾಡಿಕೊಳ್ಳಬಹುದು. ಇದಾದ ಬಳಿಕ ಗಾಯದ ಸಮಸ್ಯೆ ಅಥವಾ ಇನ್ನಿತರ ಕಾರಣಗಳಿಗಾಗಿ ಬದಲಿ ಆಟಗಾರರನ್ನು ಆಯ್ಕೆ ಮಾಡಬೇಕಾಗುತ್ತದೆ. ಆದರೆ ಈ ರೀತಿಯ ಬದಲಾವಣೆಗೂ ಮುನ್ನ ಐಸಿಸಿಯ ಟೆಕ್ನಿಕಲ್ ಕಮಿಟಿಯ ಅನುಮತಿ



ಪಡೆಯಬೇಕು. ಇದೇ ಕಾರಣದಿಂದಾಗಿ ಬಿಸಿಸಿಐ ಆಯ್ಕೆ ಸಮಿತಿ ನಾಲ್ವರು ಮೀಸಲು ಆಟಗಾರರನ್ನು ಆಯ್ಕೆ ಮಾಡಿಕೊಂಡಿದೆ. ಅಂದರೆ ಇಲ್ಲಿ ಯಾವುದಾದರೂ ಆಟಗಾರರು ಐಪಿಎಲ್‌ನಲ್ಲಿ ಅತ್ಯಂತ ಕಳಪೆ ಪ್ರದರ್ಶನ ನೀಡಿದರೆ ಅವರನ್ನು ತಂಡದಿಂದ ಕೈ ಬಿಡುವುದು ಖಚಿತ. ಏಕೆಂದರೆ ಈ ಹಿಂದೆ ಕೂಡ ಟೀಮ್ ಇಂಡಿಯಾ ಇಂತಹದೊಂದು ಬದಲಾವಣೆ ಮಾಡಿಕೊಂಡಿತ್ತು ಎಂಬುದು ಇಲ್ಲಿ ಉಲ್ಲೇಖಾರ್ಹ.

2021 ರ ಟಿ20 ವಿಶ್ವಕಪ್ ತಂಡಕ್ಕೆ ಅಕ್ಷರ್ ಪಟೇಲ್ ಆಯ್ಕೆಯಾಗಿದ್ದರು. ಆದರೆ ಟಿ20 ವಿಶ್ವಕಪ್ ಆರಂಭಕ್ಕೆ ದಿನಗಳು ಮಾತ್ರ ಉಳಿದಿರುವಾಗ ಮೀಸಲು ಆಟಗಾರರ ಪಟ್ಟಿಯಲ್ಲಿದ್ದ ಶಾರ್ದೂಲ್ ಠಾಕೂರ್‌ಗೆ ಚಾನ್ಸ್ ನೀಡಲಾಗಿತ್ತು. ಅಲ್ಲದೆ ಅಕ್ಷರ್ ಪಟೇಲ್ ಅವರನ್ನು ಮೀಸಲು ಆಟಗಾರರ ಪಟ್ಟಿಗೆ ಸೇರ್ಪಡೆಗೊಳಿಸಲಾಗಿತ್ತು.

ಹೀಗಾಗಿ ಟಿ20 ವಿಶ್ವಕಪ್ ಆರಂಭಕ್ಕೂ ಮುನ್ನ ಭಾರತ ತಂಡದಲ್ಲಿ ಮಹತ್ವದ ಬದಲಾವಣೆ ಕಂಡು ಬಂದರೂ ಅಚ್ಚರಿಪಡಬೇಕಿಲ್ಲ. ಅದರಂತೆ ಈ ಬಾರಿ ಕೊನೆ ಕ್ಷಣದಲ್ಲಿ ಯಾರಿಗೆ ಚಾನ್ಸ್ ಸಿಗಲಿದೆ ಎಂಬುದನ್ನು ಕಾದು ನೋಡಬೇಕಿದೆ.



# ಬಾಡಿ ಶೇಮಿಂಗ್ ಬಗ್ಗೆ ಮೌನ ಮುರಿದ ಮೃಣಾಲ್

ಬಾಲಿವುಡ್ ನಟಿ ಮೃಣಾಲ್ ಠಾಕೂರ್ ಸದ್ಯ ಹಿಂದಿ ಮತ್ತು ಸೌತ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಇದೀಗ ಸಂದರ್ಶನವೊಂದರಲ್ಲಿ ನಟಿ ಬಾಡಿ ಶೇಮಿಂಗ್ ಬಗ್ಗೆ ಮಾತನಾಡಿದ್ದಾರೆ. ಅನೇಕ ಸಿನಿಮಾಗಳ ಅವಕಾಶ ಕೈತಪ್ಪಿ ಹೋಗಿದ್ದರ ಬಗ್ಗೆ ಮೌನ ಮುರಿದಿದ್ದಾರೆ.

ಕೆರಿಯರ್ ಶುರುವಿನಲ್ಲಿ ಆಡಿಷನ್ ಕೊಡುವಾಗ ಹಳ್ಳಿ ಹುಡುಗಿಯಂತೆ ಕಾಣ್ತಾಳೆ, ನಮ್ಮ ಸಿನಿಮಾಗೆ ಸೂಟ್ ಆಗಲ್ಲ, ಸಿನಿಮಾದಲ್ಲಿ ಮಾಡ್ರನ್ ಆಗಿ ಕಾಣಿಸಿಕೊಳ್ಳಬೇಕು ಎಂದು ಕಾರಣ ನೀಡಿ ಸೆಲೆಕ್ಟ್ ಮಾಡಲಿಲ್ಲ ಎಂದು ನಟಿ ಮಾತನಾಡಿದ್ದಾರೆ. ಅಂದು ಎದುರಿಸಿದ ಬಾಡಿ ಶೇಮಿಂಗ್ ಬಗ್ಗೆ ನಟಿ ಹೇಳಿದ್ದಾರೆ. ಚಿತ್ರರಂಗದಲ್ಲಿ ಮೃಣಾಲ್‌ಗೆ ಉತ್ತಮ ಕಾಲ ಶುರುವಾಗಿದೆ. ಸೌತ್ ಸಿನಿಮಾಗಳಿಂದ ಉತ್ತಮ ಅವಕಾಶ ಸಿಗುತ್ತಿದೆ. ಬಾಲಿವುಡ್‌ನಲ್ಲಿಯೂ ನಟಿಗೆ ಕರೆ ಬರುತ್ತಿದೆ. ಹೃತಿಕ್ ರೋಷನ್ ನಟನೆಯ 'ಸೂಪರ್ 30' ಚಿತ್ರದಲ್ಲಿ ಮೃಣಾಲ್ ನಟಿಸಿದ್ದರು. ಬಳಿಕ ಸೀತಾರಾಮಂ, ಹಾಯ್ ನಾನಾ, ಫ್ಯಾಮಿಲಿ ಸ್ಟಾರ್ ಸಕ್ಸಸ್ ಕಂಡ ಮೇಲೆ ಮೃಣಾಲ್ ಅದೃಷ್ಟ ಬದಲಾಗಿದೆ.

**ಮೃಣಾಲ್‌ಗೆ ಉತ್ತಮ ಕಾಲ**



# ಟ್ಯಾಟೋ ಹಾಕಿಸಿಕೊಳ್ಳಲು ಶ್ರುತಿ ನಿರ್ಧಾರ

ನಟಿ ಶ್ರುತಿ ಹಾಸನ್ ಬ್ರೇಕಪ್ ಮಾಡಿಕೊಂಡ ಸುದ್ದಿ ತಮಿಳು ಸಿನಿಮಾ ರಂಗದಲ್ಲಿ ಗಿರಕಿ ಹೊಡೆಯುತ್ತಿದೆ. ಇದು ನಿಜ ಎಂದು ಅವರು ಆಪ್ತರು ಮಾತಾಡಿಕೊಳ್ಳುತ್ತಿದ್ದಾರೆ. ಈ ನಡುವೆ ಶ್ರುತಿ ಬೆನ್ನ ಮೇಲೆ ಮತ್ತೊಂದು ಟ್ಯಾಟೋ ಹಾಕಿಸಿಕೊಳ್ಳಲು ಮುಂದಾಗಿದ್ದಾರಂತೆ. ಇದು ನೋವು ಮರೆಯಲು ಮಾಡಿರುವ ಪ್ಲ್ಯಾನ್ ಎಂದು ಹೇಳಲಾಗುತ್ತಿದೆ.

ಶಂತನು ಜೊತೆ ಚೆನ್ನಾಗಿಯೇ ಇದ್ದ ಶ್ರುತಿ ಈಗ ಸಡನ್ನಾಗಿ ಬ್ರೇಕ್ ಅಪ್ ಮಾಡಿಕೊಳ್ಳಲು ಕಾರಣವೇನು ಎನ್ನುವ ಪ್ರಶ್ನೆ ಮೂಡಿದೆ. ಇದಕ್ಕೆ ಕಾರಣ ಮದುವೆ ವಿಚಾರ ಎಂದು ಗೊತ್ತಾಗಿದೆ. ಶಂತನು ಮತ್ತು ಶ್ರುತಿ ಮಧ್ಯೆ ಮದುವೆ ವಿಚಾರದಲ್ಲಿ ಗಲಾಟೆ ಕಾರಣದಿಂದಾಗಿ ಇಬ್ಬರೂ ದೂರವಾಗಿದ್ದಾರೆ ಎನ್ನುವುದು ಸದ್ಯದ ವರ್ತಮಾನ. ಮೂರು ವರ್ಷಗಳ ಹಿಂದೆಯಷ್ಟೇ ಶ್ರುತಿ ಅವರು ಮೈಕಲ್ ಕೊರ್ಸಲ್ ಎನ್ನುವವರ ಜೊತೆ ಓಡಾಡುತ್ತಿದ್ದರು. ಅವರೇ ತಮ್ಮ ಬಾಯ್ ಫ್ರೆಂಡ್ ಅಂತಾನೂ ಪರಿಚಯಿಸಿದ್ದರು. ಆನಂತರ ಅವರೊಂದಿಗೆ ಅಂತರ ಬಯಸಿದರು. ನಂತರ ಶಂತನು ಹಜಾರಿಕಾ ಜೊತೆ ಸ್ನೇಹ ಬೆಳೆಸಿದ್ದರು.

ಶ್ರುತಿ ಹಾಸನ್ ಮತ್ತು ಶಂತನು ಒಂದು ರೀತಿಯಲ್ಲಿ ಸಹ ಜೀವನವನ್ನೇ ನಡೆಸುತ್ತಿದ್ದರು. ಅದನ್ನು ಅವರೂ ಒಪ್ಪಿಕೊಂಡಿದ್ದರು. ಸದ್ಯ ಸಿಕ್ಕಿರುವ ಮಾಹಿತಿ ಪ್ರಕಾರ ಅವರೊಂದಿಗೂ ಶ್ರುತಿ ಸ್ನೇಹವನ್ನು ಕಡಿದುಕೊಂಡಿದ್ದಾರಂತೆ. ಅದಕ್ಕೆ ಸಾಕ್ಷಿ ಎನ್ನುವಂತೆ ತಮ್ಮ ಸೋಷಿಯಲ್ ಮೀಡಿಯಾ ಖಾತೆಯಿಂದ ಜೊತೆಗಿರುವ ಫೋಟೋ ಡಿಲಿಟ್ ಮಾಡಿದ್ದಾರೆ. ಮತ್ತು ಸೋಷಿಯಲ್ ಮೀಡಿಯಾ ಖಾತೆಯಿಂದ ಅನ್ ಫ್ರೆಂಡ್ ಮಾಡಿಕೊಂಡಿದ್ದಾರೆ. ಈ ಹಿಂದೆ ಶ್ರುತಿ ಹಾಸನ್ ಶಾಂತನೂ ಹಜಾರಿಕಾ ಜೊತೆ ಡೇಟ್ ಮಾಡ್ತಿರೋ ಬಗ್ಗೆ ರಿವೀಲ್ ಮಾಡಿದ್ದರು. ಇಬ್ಬರೂ ಲಿವಿಂಗ್ ರಿಲೇಷನ್‌ಶಿಪ್‌ನಲ್ಲಿದ್ದರು.

ಈ ನಡುವೆ ಬಾಯ್‌ಫ್ರೆಂಡ್ ಬಗ್ಗೆ ಸ್ವೀಟ್ ಆಗಿ ದೂರು ಹಂಚಿಕೊಂಡಿದ್ದರು. ತನ್ನ ಪಾರ್ಟನರ್ ಅದೆಷ್ಟರ ಮಟ್ಟಿಗೆ ಅನ್‌ರೊಮ್ಯಾಂಟಿಕ್ ಎಂದು ಕಂಪ್ಲೇಟ್‌ವೊಂದನ್ನ ಎಲ್ಲಾರ ಮುಂದಿಟ್ಟಿದ್ದರು.

ಆಗಾಗ ಸೋಶಿಯಲ್ ಮೀಡಿಯಾದಲ್ಲಿ ಶಾಂತನು ಜೊತಗಿನ ಹಲವು ಫೋಟೋಗಳನ್ನು ಅವರು ಹಂಚಿಕೊಳ್ಳುತ್ತಲೇ ಇರುತ್ತಾರೆ. ಈಗ ಗೆಳೆಯ ಶಾಂತನು ಅವರನ್ನು ಮೋಸ್ಟ್ ಅನ್ ರೊಮ್ಯಾಂಟಿಕ್ ವ್ಯಕ್ತಿ ಎಂದು ಕರೆದಿದ್ದಾರೆ.

**ಮದುವೆ ವಿಚಾರದಲ್ಲಿ ಗಲಾಟೆ**



# ತಮಿಳಿನ ರಿಮೇಕ್ ಸಿನಿಮಾದಲ್ಲಿ ಪೂಜಾ ಹೆಗ್ಡೆ

ಕರಾವಳಿ ಕುವರಿ ಪೂಜಾ ಹೆಗ್ಡೆ ಸದ್ಯ ಬಾಲಿವುಡ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಸಕ್ಸಸ್‌ಗಾಗಿ ತಮಿಳು ರಿಮೇಕ್ ಸಿನಿಮಾದ ಮೊರೆ ಹೋಗಿದ್ದಾರೆ. ತಮಿಳಿನ ಸ್ಟಾರ್ ಜಯಂ ರವಿ ನಟಿಸಿರುವ ಚಿತ್ರವನ್ನು ಹಿಂದಿಗೆ ರಿಮೇಕ್ ಮಾಡಲಾಗಿದ್ದು, ಯಶಸ್ಸಿಗಾಗಿ ಪೂಜಾ ಹೊಸ ಹೆಜ್ಜೆ ಇಟ್ಟಿದ್ದಾರೆ. ಚಿತ್ರರಂಗದಲ್ಲಿ ಹಿಂದಿ ಸಿನಿಮಾಗಳಿಗಿಂತ ದಕ್ಷಿಣ ಸಿನಿಮಾಗಳೇ ಹೆಚ್ಚು ಗಮನ ಸೆಳೆಯುತ್ತಿವೆ. ಹಾಗಾಗಿ ಸೌತ್‌ನಲ್ಲಿ ಈಗಾಗಲೇ ಹಿಟ್ ಆಗಿರುವ ಚಿತ್ರವನ್ನು ಬಾಲಿವುಡ್‌ನಲ್ಲಿ ತೋರಿಸಲು ಸ್ಕೆಚ್ ಹಾಕಿದ್ದಾರೆ. ಜಯಂ ರವಿ ಮತ್ತು ರಾಶಿ ಖನ್ನಾ ನಟನೆಯ 'ಆದಂಗ ಮಾರು' ಹಿಂದಿಯಲ್ಲಿ ಮೂಡಿ ಬರಲಿದೆ. 'ಆದಂಗ ಮಾರು' ಚಿತ್ರದ ಹಿಂದಿಗೆ ರಿಮೇಕ್‌ನಲ್ಲಿ ಸುನೀಲ್ ಶೆಟ್ಟಿ ಪುತ್ರನ ಜೊತೆ ಪೂಜಾ ಹೆಗ್ಡೆ ನಟಿಸುತ್ತಿದ್ದಾರೆ. ಆ ಚಿತ್ರಕ್ಕೆ 'ಸಂಕಿ' ಎಂದು ಕೂಡ ಟೈಟಲ್ ಇಡಲಾಗಿದೆ. ಈ ಸಿನಿಮಾದ ಶೂಟಿಂಗ್ ಕೂಡ ಭರದಿಂದ ಸಾಗುತ್ತಿದೆ.

ತಮಿಳಿನಲ್ಲಿ ಹಿಟ್ ಆಗಿರುವ ಸಿನಿಮಾ ಬಾಲಿವುಡ್‌ನಲ್ಲಿಯೂ ಹಿಟ್ ಆಗಲಿದೆ ಎಂಬ ಭರವಸೆಯಲ್ಲಿ ಈ ಕಥೆಯನ್ನು ಆಯ್ಕೆ ಮಾಡಿಕೊಳ್ಳಲಿದ್ದಾರೆ.



# ಕಾಂತಾರಕೆ ರುಕ್ಮಿಣಿ ನಾಯಕಿ

ರಿಷಬ್ ಶೆಟ್ಟಿ ನಿರ್ದೇಶಿಸಿ, ನಟಿಸುತ್ತಿರುವ ಕಾಂತಾರ 1 ಸಿನಿಮಾ ಟೀಮ್ ನಿಂದ ಮತ್ತೊಂದು ಸುದ್ದಿ ಹೊರಬಿದ್ದಿದೆ. ಈ ಸಿನಿಮಾಗೆ ಸಪ್ತ ಸಾಗರದಾಚೆ ಎಲ್ಲೋ ಸಿನಿಮಾದ ಮೂಲಕ ಫೇಮಸ್ ಆದ ರುಕ್ಮಿಣಿ ವಸಂತ್ ನಾಯಕಿ ಎಂದು ಹೇಳಲಾಗುತ್ತಿದೆ. ಆದರೆ, ಅಧಿಕೃತವಾಗಿ ಘೋಷಣೆ ಆಗಿಲ್ಲ. ಮುಂದಿನ ದಿನಗಳಲ್ಲಿ ಆಗಬಹುದು ಎನ್ನುವುದು ಆಪ್ತರ ಹೇಳಿಕೆ.


ಈ ನಡುವೆ ಚಿತ್ರೀಕರಣಕ್ಕಾಗಿ ಕುಂದಾಪುರದಲ್ಲಿ ಬೃಹತ್ ಆಧುನಿಕ ಸೆಟ್ ವೊಂದನ್ನು ನಿರ್ಮಾಣ ಮಾಡಿದೆ ಹೊಂಬಾಳೆ ಫಿಲ್ಮ್ಸ್. ರಾಮೋಜಿರಾವ್ ಫಿಲ್ಮ್ಸ್ ಬಿಟ್ಟರೆ, ಈ ಪ್ರಮಾಣದಲ್ಲಿ ತಯಾರಾದ ಸೆಟ್ ಇದಾಗಲಿದೆ. 200 x 200 ಅಡಿ ಒಳಾಂಗಣ ಹೊಂದಿರುವ ಸೆಟ್ ಇದಾಗಿದೆಯಂತೆ.

ಕಾಡಿನ ಮಧ್ಯ ಕೆಲವು ದೃಶ್ಯಗಳನ್ನು ರಿಷಬ್ ಚಿತ್ರೀಕರಿಸಿದರೆ ಒಳಾಗಂಣದ ಬಹುತೇಕ ಚಿತ್ರೀಕರಣ ಇದೇ ಸೆಟ್ ನಲ್ಲೇ ನಡೆಯಲಿದೆಯಂತೆ. ಕುದುರೆ ಸವಾರಿ ಸೇರಿದಂತೆ ಹಲವಾರು ಕಸರತ್ತುಗಳನ್ನು ಈ ಸೆಟ್ ನಲ್ಲೇ ಮಾಡುವಷ್ಟು ದೊಡ್ಡದಾಗಿ ಅದು ನಿರ್ಮಾಣವಾಗಿದೆ. ಅಲ್ಲಿಯೇ ಡಬ್ಬಿಂಗ್, ಎಡಿಟಂಗ್ ಸ್ಟುಡಿಯೋ ಕೂಡ ನಿರ್ಮಾಣವಾಗಿದೆಯಂತೆ.

ಈಗಾಗಲೇ ಚಿತ್ರೀಕರಣವನ್ನು ಆರಂಭಿಸಿರುವ ರಿಷಬ್, 20 ದಿನಗಳ ಕಾಲ ಮೊದಲನೇ ಹಂತದ ಶೂಟಿಂಗ್ ಇರಲಿದೆಯಂತೆ. ಈಗಾಗಲೇ ಕಾಡಿನ ಕೆಲವು ದೃಶ್ಯಗಳನ್ನು ಸೆರೆ ಹಿಡಿಯಲಾಗಿದ್ದು, ಸೆಟ್ ನಲ್ಲೂ ಮುಂದಿನ ದಿನಗಳಲ್ಲಿ ಚಿತ್ರೀಕರಣ ಮುಂದುವೆಯಲಿದೆ. ಕುಂದಾಪುರದಲ್ಲೇ ಬಹುತೇಕ ಟೀಮ್ ವಾಸ್ತವ್ಯ ಹೂಡಿದೆ.

# ರಜನಿಕಾಂತ್ ಬಯೋಪಿಕ್ ಮಾಡಲು ತಯಾರಿ

ಹೆಸರಾಂತ ನಟ ರಜನಿಕಾಂತ್ ಅವರ ಜೀವನವನ್ನು ಆಧರಿಸಿದ ಸಿನಿಮಾ ಮಾಡಲು ಬಾಲಿವುಡ್ ನಿರ್ಮಾಪಕರು ಮುಂದೆ ಬಂದಿದ್ದಾರೆ ಎನ್ನುವ ಮಾಹಿತಿ ಹರಿದಾಡುತ್ತಿದೆ. ಈಗಾಗಲೇ ಬಾಲಿವುಡ್‌ನಲ್ಲಿ ಸಾಕಷ್ಟು ಚಿತ್ರಗಳನ್ನು ತಯಾರಿಸಿರುವ ಸಾಜಿದ್ ನಾಡಿಯಾದ್ವಾಲ್ ಅವರು ಈ ಚಿತ್ರಕ್ಕೆ ಹಣ ಹೂಡಲಿದ್ದಾರೆ. ಹಲವಾರು ವರ್ಷಗಳಿಂದ ರಜನಿ ಬಯೋಪಿಕ್ ಬಗ್ಗೆ ಸುದ್ದಿ ಆಗುತ್ತಲೇ ಇದೆ. ಆದರೆ, ಯಾವುದೂ ನಿಕ್ಕಿ ಆಗಿರಲಿಲ್ಲ. ಈ ಬಾರಿ ನಿರ್ಮಾಪಕರ ಹೆಸರೂ ಬಹಿರಂಗ ಆಗಿರುವುದರಿಂದ ಮುಂದಿನ ದಿನಗಳಲ್ಲಿ ಚಿತ್ರ ಬರಬಹುದು. ಅದು ಹಲವು ಭಾಷೆಗಳಲ್ಲೂ ನಿರ್ಮಾಣ ಆಗಬಹುದು. ಸದ್ಯಕ್ಕೆ ನಿರ್ಮಾಣ ಸಂಸ್ಥೆಯ ಹೆಸರು ಮಾತ್ರ ಕೇಳಿ ಬಂದಿದೆ. ಮುಂದಿನ ದಿನಗಳಲ್ಲಿ ನಿರ್ದೇಶಕರು, ತಾಂತ್ರಿಕ ವರ್ಗ ಹಾಗೂ ರಜನಿ ಪಾತ್ರವನ್ನು ಯಾರು ಮಾಡಲಿದ್ದಾರೆ ಎನ್ನುವ ಮಾಹಿತಿಯೂ ಹೊರಬಹುದು.




Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966